WPP-47

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೭	ಬೆಂಗಳೂರು, ಗುರುವಾರ, ಜೂನ್ ೨೧, ೨೦೧೨ (ಜ್ಯೇಷ್ಠ ೩೧, ಶಕ ವರ್ಷ ೧೯೩೪)	ಸಂಚಿಕೆ ೨೫

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

WATER RESOURCES SECRETARIAT

Sub : According Administrative Approval to the Minor Irrigation Projects under Accelerated Irrigation Benefit Programme-Regarding.

Read : Letter No. CEMI(S)/ TA-7/ AE-17/AIBP/ 2012/ 1241/, Date 22-03-2012, from the Chief Engineer, Minor Irrigation South Zone, Bangalore.

Preamble:

As per the modified guidelines issued by the Government of India, Minor Irrigation schemes with potential more than 50 hectares which serve tribal areas and drought prone areas in the non-special category States are eligible for inclusion under Accelerated Irrigation Benefit Programme (AIBP) effective from December 2006, Karnataka state is classified as one of the non-special category States. 81 taluks in the State are approved under Drought prone Area Programme (DPAP). Hence Minor Irrigation schemes with potential more than 50 hectares in these 81 taluks are eligible for inclusion under Accelerated Irrigation. Benefit Programme (AIBP). Central Assistance will be in the form of central grant that will be 90% of the balance estimated cost of the project worked after excluding the previous expenditure and considering the cost of the schemes upto Rs. 1.5 lakh per Ha. The balance cost of the project will have to be borne by the State as State's share.

Government of Karnataka has identified new Minor Irrigation Schemes in these taluks for seeking Government of India approval under AIBP. Finance Department, Government of Karnataka has also approved the proposal of the Water Resources Department (Minor Irrigation) for according approval to such schemes. The Chief Engineer, Minor Irrigation South Zone in the letter read above has requested for according administrative approval to the estimate of the works proposed under AIBP. Accordingly the following schemes in DPAP taluks are being considered for according administrative approval.

Head of Account: 4702-00-101-1-10-139 AIBP Major Works

Sl.No.	Name of the project	District	Taluk	Estimated cost	Potential planned in Ha.	Cost per Ha. Rs. In Lakhs
1	Construction of checkdam across Hirehalla near Shanthanahalli village	Hassan	Arasikere	70.00	55.00	1.27
2	Construction of Checkdam across halla near Murandihatti village	Hassan	Arasikere	56.00	52.00	1.08
3	Construction of checkdam across halla near Kythanahalli Banajara Thandya in Kanakatte hobli	Hassan	Arasikere	60.00	54.00	1.11

4	Construction of checkdam across Kurumbare halla near Ankapura village	Hassan	Hassan	30.00	53.00	0.57
5	Construction of Checkdam across Maranayakanahalli halla	Hassan	Hassan	30.00	54.00	0.56
6	Construction of Checkdam across local halla near Idalla Village	Hassan	Hassan	30.00	51.50	0.58
7	Construction of Checkdam across local halla near Bommenahalli Village	Hassan	Hassan	30.00	51.00	0.59
8	Construction of Checkdam across local halla near Kankere Village	Hassan	Hassan	30.00	52.00	0.58
9	Construction of Checkdam across local halla near Ramadevarahalla Kaval Village	Hassan	Hassan	30.00	51.00	0.59
10	Construction of Checkdam across local halla near Idalla Kaval Village	Hassan	Hassan	30.00	52.00	0.58
11	Construction of Checkdam across local halla near Dodda Genigere Village	Hassan	Hassan	30.00	51.00	0.59
12	Construction of Checkdam across local halla near Dodda Aladahalli Village	Hassan	Hassan	30.00	51.00	0.59
	TOTAL			**456.00**		

Government Order No. SANEEYEE 12 MASAVI (Tech) 2012 (24) Bangalore, Dated 24th March 2012

In view of the above, the Administrative approval is hereby accorded for taking up the above works with an estimated cost totaling to Rs. 456.00 lakhs (Rupees Four hundred and fifty six lakhs only) subject to the following conditions.

1. Implementation of these projects should be taken-up only after receipt of necessary approval from the GOI.
2. The projects are to be completed with in a period of 2 years after receipt of approval of Government of India to these schemes.
3. The funding of the schemes is in the ratio of 90:10 between the Central Government and State Government.
4. The Central share is in the form of grant to the State.
5. The projects will be implemented by the Water Resources Department (Minor Irrigation) as per the KTPP act.
6. The implementation of the project shall adhere to the terms and conditions of the guidelines issued by the GOI.
7. The implementation of the project shall be as per the required technical specifications and financial specifications as per the approved DPRs.
8. Water users association shall be formed for post construction maintenance and the scheme shall be handed over to the same after its construction for the O & M.

This Order is issued with the concurrence of Finance Department in their note \ No. PWD-890-FC-1/2009 dated 09-12-2009.

By Order and in the name of the Governor of Karnataka,

RUDRAMURTHY

Ex officio Under Secretary to Government

Water Resources Department (Minor Irrigation)

P.R.1159

WATER RESOURCES SECRETARIAT

Sub : According Administrative Approval to the Minor Irrigation Projects under Accelerated Irrigation Benefit Programme-Regarding.

Read : Letter No. CEMI(S)/ TA-7/ AE-17/AIBP/ 2012/ 1241/, Date 22-03-2012, from the Chief Engineer, Minor Irrigation South Zone, Bangalore.

Preamble:

As per the modified guidelines issued by the Government of India, Minor Irrigation schemes with potential more than 50 hectares which serve tribal areas and drought prone areas in the non-special category States are eligible for inclusion under Accelerated Irrigation Benefit Programme (AIBP) effective from December 2006, Karnataka state is classified as one of the non-special category States. 81 taluks in the State are approved under Drought Prone Area Programme (DPAP). Hence Minor Irrigation schemes with potential more than 50 hectares in these 81 taluks are eligible for inclusion under Accelerated Irrigation. Benefit Programme (AIBP). Central Assistance will be in the form of central grant that will be 90% of the balance estimated cost of the project worked after excluding the previous expenditure and considering the cost of the schemes upto Rs. 1.5 lakh per Ha. The balance cost of the project will have to be borne by the State as State's share.

Government of Karnataka has identified new Minor Irrigation Schemes in these taluks for seeking Government of India approval under AIBP. Finance Department, Government of Karnataka has also approved the proposal of the Water Resources Department (Minor Irrigation) for according approval to such schemes. The Chief Engineer, Minor Irrigation South Zone in the letter read above has requested for according administrative approval to the estimate of the works proposed under AIBP. Accordingly the following schemes in DPAP taluks are being considered for according administrative approval.

Head of Account: 4702-00-101-1-10-139 AIBP Major Works

Sl.No.	Name of the project	District	Taluk	Estimated cost	Potential planned in Ha.	Cost per Ha. Rs. In Lakhs
1	Construction of checkdam across halla near Chikka Aladahalli Village	Hassan	Hassan	30.00	51.00	0.59
2	Construction of Checkdam across local halla near Ankanahalli Village	Hassan	Hassan	30.00	52.00	0.58
3	Construction of checkdam across local halla near Appihalli Village	Hassan	Belur	100.00	70.00	1.43
4	Construction of checkdam across local halla near Ganguru Village	Hassan	Belur	70.00	53.00	1.32
5	Construction of New tank across Kedigehall near Doddakodihalli village under Doddakodihalli Grama Panchayti	Hassan	Belur	140.00	108.00	1.30
6	Construction of Diversion wall to Halebeedu Dwarasamudra right waste weir & canal system to feed water to Chatachatti halli tank	Hassan	Belur	100.00	120.00	0.83
	TOTAL			**470.00**		

Government Order No. SANEEYEE 12 MASAVI (Tech) 2012 (23) Bangalore, Dated 24th March 2012

In view of the above, the Administrative approval is hereby accorded for taking up the above works with an estimated cost totaling to Rs. 470.00 lakhs (Rupees Four hundred and seventy lakhs only) subject to the following conditions.

1. Implementation of these projects should be taken-up only after receipt of necessary approval from the GOI.
2. The projects are to be completed with in a period of 2 years after receipt of approval of Government of India to these schemes.
3. The funding of the schemes is in the ratio of 90:10 between the Central Government and State Government.
4. The Central share is in the form of grant to the State.
5. The projects will be implemented by the Water Resources Department (Minor Irrigation) as per the KTPP act.
6. The implementation of the project shall adhere to the terms and conditions of the guidelines issued by the GOI.
7. The implementation of the project shall be as per the required technical specifications and financial specifications as per the approved DPRs.
8. Water users association shall be formed for post construction maintenance and the scheme shall be handed over to the same after its construction for the O & M.

This Order is issued with the concurrence of Finance Department in their note No. PWD-890-FC-1/2009 dated 09-12-2009.

By Order and in the name of the Governor of Karnataka,

RUDRAMURTHY

Ex officio Under Secretary to Government

P.R.1160 Water Resources Department (Minor Irrigation)

ವಸತಿ ಸಚಿವಾಲಯ

ವಿಷಯ: ಕೇಂದ್ರ ಪುರಸ್ಕೃತ ಯೋಜನೆ ನರ್ಮ್ ಯೋಜನೆಯಡಿ ಸಮಗ್ರ ವಸತಿ ಮತ್ತು ಕೊಳಚೆ ಅಭಿವೃದ್ಧಿ ಯೋಜನೆ (IHSDP) ಅನುದಾನ ಬಿಡುಗಡೆ ಬಗ್ಗೆ.

ಓದಲಾಗಿದೆ: 1) ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಇವರ ಪತ್ರ ಸಂಖ್ಯೆ: ಕಕೊಆಮ:ಲೆ.ಪ.ಶಾ: JnNURM-IHSDP ಅನುದಾನ:2011–2012, ದಿನಾಂಕ 28–01–2012.

2) ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD/13/BGL/2010, ದಿನಾಂಕ 15–11–2011.

3) ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD/13/BGL/2009, ದಿನಾಂಕ 29–12–2011.

4) ಆರ್ಥಿಕ ಇಲಾಖೆ (ವೆಚ್ಚ–3/9) ಟಿಪ್ಪಣಿ ಸಂಖ್ಯೆ: FD/149/Exp-9/2012, ದಿನಾಂಕ 30–03–2012.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಇವರ ಪತ್ರದಲ್ಲಿ ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ (IHSDP) ರಾಜ್ಯಾದ್ಯಂತ ವಿವಿಧ 34 ನಗರ/ಪಟ್ಟಣಗಳಲ್ಲಿ ಮನೆಗಳ ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ. ಸದರಿ ಯೋಜನೆಗೆ ಕೇಂದ್ರ ಸರ್ಕಾರದಿಂದ 2ನೇ ಕಂತಿನ ಅನುದಾನದ ಶೇ. 50% ರಷ್ಟು ಅನುದಾನವನ್ನು ಮೇಲೆ ಉಲ್ಲೇಖ (2) ಮತ್ತು (3) ರಲ್ಲಿ ತಿಳಿಸಲಾಗಿರುವ ಜಮಾ ದೃಢೀಕರಣ ಪತ್ರಗಳಲ್ಲಿ ಕ್ರಮವಾಗಿ ರೂ. 2431.63 ಲಕ್ಷಗಳು ಹಾಗೂ 1472.07 ಲಕ್ಷಗಳು ಒಟ್ಟಾರೆ ರೂ. 3903.70 ಲಕ್ಷಗಳನ್ನು ರಾಜ್ಯ ಸರ್ಕಾರಕ್ಕೆ ಬಿಡುಗಡೆ ಮಾಡಿರುತ್ತದೆ. ಸದರಿ ಮೊತ್ತ 18 ವಿವಿಧ ನಗರ/ಪಟ್ಟಣಗಳಿಗೆ (ನಾಗಮಂಗಲ, ನಂಜನಗೂಡು, ಸಿಂಧನೂರು, ಹುಬ್ಬಳ್ಳಿ, ಹುಬ್ಬಳ್ಳಿ ಹಂತ–2 ಮತ್ತು 3, ಶಿರಾ, ಶಿವಮೊಗ್ಗ, ಶಿಕಾರಿಪುರ, ಬಾಗಲಕೋಟೆ, ಕನಕಪುರ, ಪಾವಗಡ, ಶಿಡ್ಲಘಟ್ಟ, ಮುಳಬಾಗಿಲು, ದೊಡ್ಡಬಳ್ಳಾಪುರ, ಚಿಂಚೋಳಿ, ಗೌರಿಬಿದನೂರು ಮತ್ತು ಚಿಂತಾಮಣಿ ಸಂಬಂಧಿಸಿದಂತೆ (ಕೇಂದ್ರದ ಪಾಲಿನ ಶೇ. 50% ರಷ್ಟು 2ನೇ ಬಾಕಿ ಕಂತು) ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಮೊತ್ತ ಸೇರಿದಂತೆ ರಾಜ್ಯ ಸರ್ಕಾರದ ವಂತಿಗೆ ರೂ. 2779.14 ಲಕ್ಷಗಳು ಸೇರಿ ಒಟ್ಟಾರೆ ರೂ. 6682.84 ಲಕ್ಷಗಳನ್ನು 2011–2012ನೇ ಸಾಲಿನ ಪೂರಕ ಆಯವ್ಯಯದಲ್ಲಿ ನಿಗದಿಪಡಿಸಿ ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆಯ ಲೆಕ್ಕ ಶೀರ್ಷಿಕೆ 2217–04–191–2–03 (IHSDP) ಅಡಿಯಲ್ಲಿ ಮಂಡಳಿಗೆ ಬಿಡುಗಡೆ ಮಾಡಬೇಕೆಂದು ಆಯುಕ್ತರು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಇ 12 ಕೊಮಂಲೆ 2009, ಬೆಂಗಳೂರು, ದಿನಾಂಕ 30–03–2012

ಪ್ರಸ್ತಾವನೆಗಳ ವಿವರಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕೈಗೊಂಡಿರುವ ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ (IHSDP) ಯೋಜನೆಯಡಿಯ ಮನೆಗಳ ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸರ್ಕಾರದಿಂದ 18 ವಿವಿಧ ನಗರ/ಪಟ್ಟಣಗಳಿಗೆ ಸಂಬಂಧಿಸಿದಂತೆ (ಕೇಂದ್ರದ ಪಾಲಿನ ಶೇ. 50% ರಷ್ಟು 2ನೇ ಬಾಕಿ ಕಂತು) ಬಿಡುಗಡೆ ಮಾಡಲಾಗಿರುವ ವಂತಿಗೆ (2431.63+1472.07=3903.70 ಲಕ್ಷಗಳು) 3903.70 ಲಕ್ಷಗಳು ಹಾಗೂ ರಾಜ್ಯ ಸರ್ಕಾರದ ಪಾಲಿನ ಅನುದಾನ ರೂ. 1664.00 ಲಕ್ಷಗಳು ಒಟ್ಟಾರೆ ರೂ. 5567.70 ಲಕ್ಷಗಳನ್ನು 2011–2012ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2217–04–191–2–03 (IHSDP) ಯಡಿ ಪೂರಕ ಅಂದಾಜು–III

ರಲ್ಲಿ ಒದಗಿಸಿದ್ದು, ಅದರಂತೆ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಅನುದಾನ ರೂ. 5567.70 ಲಕ್ಷಗಳನ್ನು (ರೂ. ಐವತ್ತೈದು ಕೋಟಿ ಅರವತ್ತೇಳು ಲಕ್ಷದ ಎಪ್ಪತ್ತು ಸಾವಿರ ಮಾತ್ರ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿ ಸರ್ಕಾರ ಆದೇಶಿಸಿದೆ.

ಕಾಲಕಾಲಕ್ಕೆ ಕೇಂದ್ರ ಸರ್ಕಾರದಿಂದ ಹೊರಡಿಸುವ ಸೂಚನೆ, ಮಾರ್ಗಸೂಚನೆ, ಕೇಂದ್ರ ಸಿ.ಎಸ್.ಎಂ.ಸಿ. ಸಭೆಯ ನಡವಳಿಯಲ್ಲಿ ನೀಡಿರುವ ಸೂಚನೆ, ಎಸ್.ಎಲ್.ಇ.ಸಿ. (IHSDP) ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಜೊತೆಗೆ ಈ ಕೆಳಕಂಡ ಷರತ್ತುಗಳನ್ನು ಪಾಲಿಸಬೇಕೆಂದು ಸೂಚಿಸಲಾಗಿದೆ.

1. ಈ ಮೊತ್ತವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು
2. ಫಲಾನುಭವಿಗಳಿಂದ ವಂತಿಕೆಯು ನಿಯಮಿತವಾಗಿ ಪಾವತಿಯಾಗುವಂತೆ ಕ್ರಮ ವಹಿಸತಕ್ಕದ್ದು
3. ಯೋಜನೆಯ ಅನುಷ್ಠಾನದ ಹಂತದ ಬಗ್ಗೆ ಕಾಲಕಾಲಕ್ಕೆ ವರದಿಗಳನ್ನು ಕೇಂದ್ರ/ರಾಜ್ಯ ಸರ್ಕಾರಕ್ಕೆ ನೀಡತಕ್ಕದ್ದು
4. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನದ ಬಗ್ಗೆ ಪ್ರತ್ಯೇಕ ಲೆಕ್ಕವನ್ನು ಇಡತಕ್ಕದ್ದು
5. ಸರ್ಕಾರಕ್ಕೆ ಆಡಿಟ್ ವರದಿಯನ್ನು ನಿಗದಿತ ಸಮಯಕ್ಕೆ ಸಲ್ಲಿಸತಕ್ಕದ್ದು
6. ಪ್ರಸಕ್ತ ಆರ್ಥಿಕ ವರ್ಷದಲ್ಲಿ (2011–12) ಬಿಡುಗಡೆಯಾಗಿರುವ ಮೊತ್ತಕ್ಕೆ ನಿಗದಿತ ಅವಧಿಯೊಳಗೆ ಹಣ ಬಳಕೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
7. ಈ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿರುವ ಮೊತ್ತವನ್ನು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ವಸತಿ ಇಲಾಖೆಯ ಉಪ ಕಾರ್ಯದರ್ಶಿಯವರ ಮೇಲು ಸಹಿ ಪಡೆದ ನಂತರ ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD/149/Exp-9/2012, ದಿನಾಂಕ 30–03–2012ರ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಜಿ. ಆರ್. ನಾಗರಾಜ

ಪೀಠಾಧಿಕಾರಿ–4,

ಪಿ.ಆರ್. 1161 ವಸತಿ ಇಲಾಖೆ

ಯುವಜನ ಸೇವಾ ಸಚಿವಾಲಯ

ವಿಷಯ: ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರ ವಿರುದ್ಧ ಇಲಾಖಾ ವಿಚಾರಣೆ–ದಂಡನೆ ವಿಧಿಸುವ ಬಗ್ಗೆ ಆದೇಶ.

ಓದಲಾಗಿದೆ:
1) ದಿನಾಂಕ 17–05–2000ರ ಐಟಿವೈ 57 ಇವೈಡಬ್ಲ್ಯೂ 94ನೇ ಸಂಖ್ಯೆಯ ಸರ್ಕಾರಿ ಆದೇಶ
2) ಕರ್ನಾಟಕ ಲೋಕಾಯುಕ್ತರವರ ದಿನಾಂಕ 19–05–2003ರ LOK/ARE-3/ENQ-5/2000-01 ನೇ ಸಂಖ್ಯೆಯ ಪತ್ರ.
3) ದಿನಾಂಕ 13–06–2003ರ ವಾಪ್ರಯು 57 ಯುಇಸೇ 94ನೇ ಸಂಖ್ಯೆಯ ಕಾರಣ ಕೇಳುವ ನೋಟೀಸ್.
4) ಶ್ರೀ ವಿ. ಕೆ. ಗುಡೋಡಗಿ, ಜಂಟಿ ನಿರ್ದೇಶಕರು ಮತ್ತು ಆಪಾದಿತ ಅಧಿಕಾರಿ, ಇವರ ಲಿಖಿತ ಹೇಳಿಕೆ ದಿನಾಂಕ 15–09–2003.
5) ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ: 7246/2003ರಲ್ಲಿ ನೀಡಿದ ದಿನಾಂಕ 22–10–2008ರ ಆದೇಶ.
6) ದಿನಾಂಕ 17–07–2009ರ ಯುಸೇಇ 57 ಯುಇಸೇ 1994ನೇ ಸಂಖ್ಯೆಯ ಸರ್ಕಾರದ ಪತ್ರ.
7) ಉಪ ಲೋಕಾಯುಕ್ತ ಕರ್ನಾಟಕ ರಾಜ್ಯ, ಇವರ ದಿನಾಂಕ 19–12–2009ರ LOK/ARE-3/ENQ-5/2000-01 ನೇ ಸಂಖ್ಯೆಯ ಪತ್ರ.
8) ದಿನಾಂಕ 24–03–2010ರ ವಾಪ್ರಯು 57 ಯುಇಸೇ 94ನೇ ಸಂಖ್ಯೆಯ 2ನೇ ಕಾರಣ ಕೇಳುವ ನೋಟೀಸ್.
9) ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು ಮತ್ತು ಆಪಾದಿತ ಅಧಿಕಾರಿಯವರ ಲಿಖಿತ ಹೇಳಿಕೆ ದಿನಾಂಕ 20–05–2010.
10) ದಿನಾಂಕ 02–07–2010ರ ಯುಸೇಇ 57 ಯುಇಸೇ 94ನೇ ಸಂಖ್ಯೆಯ ಸರ್ಕಾರದ ಪತ್ರ
11) ಕರ್ನಾಟಕ ಲೋಕಸೇವಾ ಆಯೋಗದ ಉಪ ಕಾರ್ಯದರ್ಶಿರವರ ದಿನಾಂಕ 08–12–2010 ಮತ್ತು 03–01–2011ರ ಪಿಎಸ್‌ಸಿ 98 ಸಿಎನ್‌ಎಸ್ 10ನೇ ಸಂಖ್ಯೆಯ ಪತ್ರಗಳು.

ಪ್ರಸ್ತಾವನೆ:

ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿ ತೀವ್ರ ದುರ್ನಡತೆ ಎಸಗಿದ ಆರೋಪಗಳಿಗಾಗಿ ಶ್ರೀ ವಿ. ಕೆ. ಗುಡೋಡಗಿ, ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಅವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮೇಲೆ (1)ರಲ್ಲಿ ಓದಲಾದ ದಿನಾಂಕ 17–05–2000ದ ಸರ್ಕಾರಿ ಆದೇಶದಲ್ಲಿ ಸನ್ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು.

ವಿಚಾರಣಾಧಿಕಾರಿಯಾಗಿ ನೇಮಕಗೊಂಡ ಅಡಿಷನಲ್ ರಿಜಿಸ್ಟ್ರಾರ್, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ ಅವರು ವಿಚಾರಣೆ ನಡೆಸಿ ಸಲ್ಲಿಸಿದ ದಿನಾಂಕ 29–03–2003ರ ವಿಚಾರಣಾ ವರದಿಯು ಮೇಲೆ (2)ರಲ್ಲಿ ಓದಲಾದ ಪತ್ರದೊಂದಿಗೆ ಸರ್ಕಾರದಲ್ಲಿ ಸ್ವೀಕರಿಸಲ್ಪಟ್ಟಿದ್ದು, ಅಧಿಕಾರಿಯ ವಿರುದ್ದ ಆರೋಪ ಕುರಿತಂತೆ ನೀಡಲ್ಪಟ್ಟ ನಿರ್ಣಯ ಈ ಮುಂದಿನಂತಿದೆ.

"ಆಪಾದಿತ ಅಧಿಕಾರಿಯು ರೂ. 4 ಲಕ್ಷಗಳ ವೆಚ್ಚದಲ್ಲಿ ಕ್ರೀಡಾ ಸಾಮಗ್ರಿಗಳನ್ನು ಖರೀದಿಸಲು ಸರ್ಕಾರದ ಅನುಮತಿಯನ್ನು ದಿನಾಂಕ 31–03–1993ರ ಸರ್ಕಾರಿ ಆದೇಶದಲ್ಲಿ ಪಡೆದಿದ್ದಾರೆ. ಅಂದೇ ಸದರಿ ಮೊತ್ತದ ಚೆಕ್ಕನ್ನು ಖಜಾನೆಯಿಂದ ಪಡೆದಿದ್ದಾರೆ. ದಿನಾಂಕ 05–04–1993ರಂದು 4 ಮಾರಾಟಗಾರರಿಂದ ದರಪಟ್ಟಿ ಕೇಳಿದ್ದಾರೆ. ಯಾವುದೇ ಟೆಂಡರ್ ಪ್ರಕ್ರಿಯೆ ಕೈಗೊಂಡಿರುವುದಿಲ್ಲ. ದಿನಾಂಕ 15–04–1993 ರಂದು ದರಪಟ್ಟಿ ಪಡೆದಿದ್ದಾರೆ. ಕಡಿಮೆ ದರ ನಮೂದಿಸಿದ ಮೆ॥ ಒಲಂಪಿಕ್ ಸ್ಪೋರ್ಟ್ಸ್‌ನಿಂದ ನೀಡಲ್ಪಟ್ಟ ದರಪಟ್ಟಿಯನ್ನು 17–04–1993 ರಂದು ಅಂಗೀಕರಿಸಿದ್ದಾರೆ ರೂ. 4.00 ಲಕ್ಷ ಮೌಲ್ಯದ ಕ್ರೀಡಾ ಸಾಮಗ್ರಿಗಳನ್ನು 30 ದಿನಗಳ ಒಳಗಾಗಿ ಸರಬರಾಜು ಮಾಡುವಂತೆ ಮಾರಾಟಗಾರರಿಗೆ 24–04–1993 ರಂದು ಪತ್ರ ಬರೆದಿದ್ದಾರೆ. ಕ್ರೀಡಾ ಸಾಮಗ್ರಿಗಳನ್ನು ದಿನಾಂಕ 31–07–1993 ರಂದು ಸರಬರಾಜು ಮಾಡಲಾಗಿದೆ. ವಿಚಾರಣೆ ಸಮಯದಲ್ಲಿ ಕ್ರೀಡಾ ಸಾಮಗ್ರಿಗಳನ್ನು ತುರ್ತಾಗಿ ಸರಬರಾಜು ಮಾಡಬೇಕಾದ ಅವಶ್ಯಕತೆ ಇದ್ದ ಕಾರಣ ಟೆಂಡರ್ ಕರೆಯದೇ ಖರೀದಿ ಮಾಡಲಾಯಿತೆಂದು ತಿಳಿಸಿದ್ದಾರೆ. ಆದರೆ ದಿನಾಂಕ 24–04–1993 ರಂದು ಆದೇಶ ನೀಡಿದ್ದು, 31–07–1993 ರಂದು ಸಾಮಾಗ್ರಿಗಳನ್ನು ಸರಬರಾಜು ಮಾಡಲಾಗಿದೆ. ಇದನ್ನು ಪರಿಗಣಿಸಿದಲ್ಲಿ ಯಾವುದೇ ತುರ್ತು ಸಂದರ್ಭ ಇರಲಿಲ್ಲ. ಒಂದು ಲಕ್ಷಕ್ಕೂ ಹೆಚ್ಚಿನ ಮೊತ್ತದ ಖರೀದಿಯನ್ನು ಮಾಡಬೇಕಿದ್ದಲ್ಲಿ ಟೆಂಡರ್ ಪ್ರಕ್ರಿಯೆ ಅನುಸರಿಸಬೇಕು ಎಂದು ಸರಕು ಖರೀದಿ ಸಂಹಿತೆಯಲ್ಲಿ ನಿಗದಿಪಡಿಸಿದೆ. ನಿರ್ದೇಶಕರ ಹುದ್ದೆಯಲ್ಲಿ ಪ್ರಭಾರದಲ್ಲಿದ್ದ ಅಪಾದಿತ ಅಧಿಕಾರಿಗೆ ಆ ಹುದ್ದೆಯ ಶಾಸನಬದ್ಧ ಅಧಿಕಾರ ಚಲಾಯಿಸುವ ಅನುಮತಿ ಇಲ್ಲ. ಆಪಾದಿತ ಅಧಿಕಾರಿಯು ಖರೀದಿಸಿದ ಸಾಮಗ್ರಿಗಳ ಗುಣಮಟ್ಟವನ್ನು ಆಯಾ ಕ್ರೀಡಾ ತಜ್ಞರು ಪರೀಕ್ಷಿಸಿ ನೀಡಿದ ಅಭಿಪ್ರಾಯದಂತೆ ಅವರು ಪಾವತಿ ಮಾಡಿದ್ದಕ್ಕಿಂತ ಕಡಿಮೆ ಮೌಲ್ಯದ ಸಾಮಗ್ರಿಗಳಾಗಿವೆ. ಇದರಿಂದಾಗಿ ಸರ್ಕಾರಕ್ಕೆ ರೂ. 1,43,625/–ಗಳ ನಷ್ಟವುಂಟಾಗಿದೆ. ಆರೋಪ ಸಾಬೀತಾಗಿದೆ**"**

ಮಾನ್ಯ ಲೋಕಾಯುಕ್ತರವರ ಶಿಫಾರಸ್ಸುಗಳನ್ನೊಳಗೊಂಡ ಪತ್ರ ಸಂಖ್ಯೆ: LOK/ARE-3/ENQ–5/2000–01, ದಿನಾಂಕ 19–05–2003ರ ಪ್ರತಿ ಮತ್ತು ವಿಚಾರಣಾಧಿಕಾರಿಗಳ ವಿಚಾರಣಾ ವರದಿ ಪ್ರತಿಯನ್ನು ಮೇಲೆ (3)ರಲ್ಲಿ ಓದಲಾದ ದಿನಾಂಕ 13–06–2003ರ ಕಾರಣ ಕೇಳುವ ನೋಟೀಸಿನೊಂದಿಗೆ ಆಪಾದಿತ ಅಧಿಕಾರಿಯವರಿಗೆ ಒದಗಿಸಿ, ಈ ಕುರಿತು ತಮ್ಮ ಹೇಳಿಕೆಗಳೇನಾದರೂ ಇದ್ದಲ್ಲಿ ನೀಡುವಂತೆ ಕೋರಲಾಯಿತು.

ಲೋಕಾಯುಕ್ತರ ವ್ಯಾಪ್ತಿ, ಇತ್ಯಾದಿ ಕುರಿತಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಆಪಾದಿತ ಅಧಿಕಾರಿಯು ದಾಖಲಿಸಿದ ಅರ್ಜಿ ಸಂಖ್ಯೆ: 7246/03ರಲ್ಲಿ ಮಾನ್ಯ ನ್ಯಾಯಮಂಡಳಿಯು ಯಥಾಸ್ಥಿತಿಯನ್ನು ಮುಂದುವರೆಸಿಕೊಂಡು ಹೋಗುವಂತೆ ಮಧ್ಯಂತರ ಆದೇಶ ನೀಡಿರುವುದನ್ನು ಸರ್ಕಾರದ ಗಮನಕ್ಕೆ ತರುತ್ತಾ, ಸದರಿ ವಿಚಾರಣಾ ವರದಿಯನ್ನು ತಿರಸ್ಕರಿಸಿ, ತಮ್ಮ ಮೇಲಿನ ಶಿಸ್ತು ಕ್ರಮವನ್ನು ಕೈಬಿಡುವಂತೆ ಮೇಲೆ (4)ರಲ್ಲಿ ಓದಲಾದ ದಿನಾಂಕ 15–09–2003ರ ಲಿಖಿತ ಹೇಳಿಕೆಯಲ್ಲಿ ಆಪಾದಿತ ಅಧಿಕಾರಿಯವರು ಕೋರಿರುತ್ತಾರೆ.

ಶ್ರೀ ವಿ. ಕೆ. ಗುಡೋಡಗಿ ಇವರು ದಿನಾಂಕ 30–04–2007 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿದರು.

ಮೇಲೆ (5)ರಲ್ಲಿ ಓದಲಾದ ದಿನಾಂಕ 22–10–2008ರ ಆದೇಶದಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ: 7246/03 ರಲ್ಲಿ ಈ ಕೆಳಕಂಡಂತೆ ನಿರ್ದೇಶಿಸಿತು.

> "Therefore the application is allowed, and the recommendations of the Hon'ble Lokayuktha, in No. LOK/ARE-3/ENQ-5/2000-01 dated 19-05-2003 (Annexure-AB) and the show cause notice No. VaaPraaYu. 57. UeSe 94, dated 13-06-2003 (Annexure-A3) are hereby quashed with a direction to the Government to send back the records to the Hon'ble Upa-Lokayukta for taking further action in the matter from the stage the report of the inquiring authority was submitted"

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ದಿನಾಂಕ 22–10–2008ರ ಆದೇಶದ ಹಿನ್ನೆಲೆಯಲ್ಲಿ ಶ್ರೀ ವಸಂತ ಕೆ. ಗುಡೋಡಗಿ, ಜಂಟಿ ನಿರ್ದೇಶಕರು (ನಿವೃತ್ತ) ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರ ವಿರುದ್ಧ ನಡೆಸಲಾದ ವಿಚಾರಣಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಕರ್ನಾಟಕ ಲೋಕಾಯುಕ್ತದ ರಿಜಿಸ್ಟ್ರಾರ್ ರವರಿಗೆ ಮೇಲೆ (6)ರಲ್ಲಿ ಓದಲಾದ ದಿನಾಂಕ 17–07–2009ರ ಪತ್ರದೊಂದಿಗೆ ಹಿಂದಿರುಗಿಸಲಾಯಿತು.

ವಿಚಾರಣಾ ವರದಿಯನ್ನು ಪರಾಮರ್ಶಿಸಿದ ಸನ್ಮಾನ್ಯ ಉಪಲೋಕಾಯುಕ್ತರು ಮೇಲೆ (7)ರಲ್ಲಿ ಓದಲಾದ ದಿನಾಂಕ 19–12–2009ರ ಪತ್ರದಲ್ಲಿ ಪರಿಷ್ಕೃತ ಶಿಫಾರಸ್ಸು ನೀಡಿ, ಆಪಾದಿತ ಅಧಿಕಾರಿಯ ವಿಶ್ರಾಂತಿ ವೇತನದ ಶೇ. 25% ರಷ್ಟನ್ನು ಶಾಶ್ವತವಾಗಿ ಕಡಿತಗೊಳಿಸುವಂತೆ ಹಾಗೂ ಆಪಾದಿತ ಅಧಿಕಾರಿಯು ಸರ್ಕಾರಕ್ಕೆ ನಷ್ಟ ಉಂಟು ಮಾಡಿದ ರೂ. 1,43,625/–ಗಳನ್ನು ಅವರ ನಿವೃತ್ತಿ ಸೌಲಭ್ಯಗಳಿಂದ ವಸೂಲು ಮಾಡುವಂತೆ ಶಿಫಾರಸ್ಸು ಮಾಡಿದರು.

ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸುಗಳನ್ನೊಳಗೊಂಡ ಪತ್ರ ಸಂಖ್ಯೆ: LOK/ARE-3/ENQ-5/2000-01 ದಿನಾಂಕ 19–12–2009ರ ಪ್ರತಿ, ವಿಚಾರಣಾಧಿಕಾರಿಗಳ ವಿಚಾರಣಾ ವರದಿ ಪ್ರತಿಯನ್ನು ಮೇಲೆ (8)ರಲ್ಲಿ ಓದಲಾದ ದಿನಾಂಕ 24–03–2010ರ ಕಾರಣ ಕೇಳುವ ನೋಟೀಸಿನೊಂದಿಗೆ ಒದಗಿಸಿ, ಈ ಕುರಿತು ತಮ್ಮ ವಿವರಣೆಗಳೇನಾದರೂ ಇದ್ದಲ್ಲಿ ನೀಡುವಂತೆ ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು ಮತ್ತು ಆಪಾದಿತ ನಿವೃತ್ತ ಅಧಿಕಾರಿಯವರನ್ನು ಕೋರಲಾಯಿತು.

ಮೇಲೆ (9)ರಲ್ಲಿ ಓದಲಾದ ದಿನಾಂಕ 20–05–2010ರ ಪತ್ರದಲ್ಲಿ ಉತ್ತರ ಸಲ್ಲಿಸಿದ ಆಪಾದಿತ ನಿವೃತ್ತ ಅಧಿಕಾರಿಯಾದ ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರು ಲೋಕಾಯುಕ್ತ ನಡೆಸಿದ ವಿಚಾರಣಾ ವೈಖರಿಯನ್ನು

ಪ್ರಶ್ನಿಸುತ್ತಾ, ದಿನಾಂಕ 01–11–1958ರ ಸರ್ಕಾರಿ ಆದೇಶವನ್ನು ಪಾಲಿಸಿದ ನಂತರ ಪ್ರಶ್ನಿತ ಖರೀದಿ ಮಾಡಿರುವುದಾಗಿ ತಿಳಿಸಿದ್ದಾರೆ. ತುರ್ತು ಸಂದರ್ಭಗಳಲ್ಲಿ ಮೇಲಾಧಿಕಾರಿಯ ಅನುಮೋದನೆ ಪಡೆಯದೇ ಅಧಿಕಾರ ಚಲಾಯಿಸಬಹುದೆಂಬ ನಿಯಮದಂತೆಯೇ ತಾವು ತುರ್ತು ಖರೀದಿ ಮಾಡಿದ್ದಾಗಿ ತಿಳಿಸಿ ವಿಚಾರಣಾ ವರದಿ ಮತ್ತು ಸನ್ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸುಗಳನ್ನು ಒಪ್ಪದೇ ತಮ್ಮನ್ನು ಆರೋಪ ಮುಕ್ತರನ್ನಾಗಿಸುವಂತೆ ಕೋರಿರುತ್ತಾರೆ.

ಸದರಿ ನಿವೃತ್ತ ಅಧಿಕಾರಿಯ ಉತ್ತರವನ್ನು ದಾಖಲೆಗಳೊಡನೆ ಪರಿಶೀಲಿಸಲಾಯಿತು. ಅವರು ಪ್ರಸ್ತಾಪಿಸಿರುವ ಅಂಶಗಳು ಈಗಾಗಲೇ ವಿಚಾರಣೆಯಲ್ಲಿ ಪರಿಶೀಲಿಸಲ್ಪಟ್ಟವೇ ಆಗಿದ್ದವು. ವಿಚಾರಣೆಯಲ್ಲಿ ಆಪಾದಿತ ನಿವೃತ್ತ ಅಧಿಕಾರಿಗೆ ಎಲ್ಲ ಅವಕಾಶವನ್ನು ಕಲ್ಪಿಸಲಾಗಿತ್ತು. ಅಧಿಕಾರಿಯು ಅದನ್ನು ಬಳಸಿಕೊಂಡೂ ಇದ್ದರು. ಸರ್ಕಾರದಿಂದ ಹಣ ಬಿಡುಗಡೆ ಆಗಿರುವ ಕಾರಣ ನೀಡಿ ವಿಹಿತಾಚಾರಗಳನ್ನು ಪಾಲಿಸದೇ ತನ್ನ ಅಧಿಕಾರ ವ್ಯಾಪ್ತಿ ಮೀರಿ ಖರೀದಿಗಳನ್ನು ಮಾಡಲು ಅವಕಾಶ ಇರುವುದಿಲ್ಲ.

ಆದ್ದರಿಂದ ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರ ಉತ್ತರವನ್ನು ಒಪ್ಪಿಕೊಳ್ಳದೇ, ಇವರ ವಿರುದ್ಧದ ಆರೋಪ ಸಾಬೀತಾಗಿದೆಯೆಂಬ ವಿಚಾರಣಾ ವರದಿ ಹಾಗೂ ಸನ್ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸುಗಳನ್ನು ಒಪ್ಪಿಕೊಂಡು, ಸದರಿ ನಿವೃತ್ತ ಅಧಿಕಾರಿಯ ವಿಶ್ರಾಂತಿ ವೇತನದ ಶೇ 25ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ಹಾಗೂ ಅವರ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾದ ನಷ್ಟ ರೂ. 1,43,625/–ಗಳನ್ನು ಅವರ ನಿವೃತ್ತಿ ಸೌಲಭ್ಯಗಳಿಂದ ವಸೂಲು ಮಾಡುವ ಪ್ರಸ್ತಾವನೆ ಬಗ್ಗೆ ಮೇಲೆ (10)ರಲ್ಲಿ ಓದಲಾದ ದಿನಾಂಕ 02–07–2010ರ ಪತ್ರದ ಮೂಲಕ ಕರ್ನಾಟಕ ಲೋಕಸೇವಾ ಅಯೋಗದೊಂದಿಗೆ ಸಮಾಲೋಚಿಸಲಾಯಿತು.

ಸದರಿ ನಿವೃತ್ತ ಅಧಿಕಾರಿಯ ವಿಶ್ರಾಂತಿ ವೇತನದ ಶೇ. 25ರಷ್ಟನ್ನು ಶಾಶ್ವತವಾಗಿ ಕಡಿತಗೊಳಿಸುವ ಸರ್ಕಾರದ ಪ್ರಸ್ತಾವನೆಗೆ ಬದಲು ಶೇಕಡ 5 ರಷ್ಟನ್ನು ಒಂದು ವರ್ಷದ ಅವಧಿಗೆ ಕಡಿತಗೊಳಿಸುವ ಪರಿಷ್ಕೃತ ದಂಡನೆಗೆ ಸಹಮತಿಯನ್ನು ಹಾಗೂ ಸರ್ಕಾರವು ಸೂಚಿಸಿದ ದಂಡನಾ ಮೊತ್ತ ರೂ. 1,43,625/–ಗಳನ್ನು ವಸೂಲು ಮಾಡಬಾರದೆಂದು ಕರ್ನಾಟಕ ಲೋಕಸೇವಾ ಆಯೋಗವು ಮೇಲೆ (11)ರಲ್ಲಿ ಓದಲಾದ ದಿನಾಂಕ 08–12–2010 ಮತ್ತು ದಿನಾಂಕ 03–01–2011ರ ಪತ್ರಗಳಲ್ಲಿ ಅಭಿಪ್ರಾಯಿಸಿತು.

ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರ ಉತ್ತರ ಸನ್ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸುಗಳು, ವಿಚಾರಣಾ ವರದಿ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಶಿಫಾರಸ್ಸು ಇವುಗಳನ್ನು ಅವಲೋಕಿಸಿ, ಕರ್ನಾಟಕ ಸರ್ಕಾರದ (ಕಾರ್ಯ ಕಲಾಪಗಳ ನಿರ್ವಹಣೆ) ನಿಯಮಗಳು, 1977ರ 1ನೇ ಅನುಸೂಚಿಯ ಕ್ರಮ ಸಂಖ್ಯೆ 20 ರನ್ವಯ ಈ ಪ್ರಕರಣವನ್ನು ಪರಿಶೀಲಿಸಿರುವ ಸರ್ಕಾರವು ಸದರಿ ನಿವೃತ್ತ ಅಧಿಕಾರಿಗೆ ದಂಡನೆ ವಿಧಿಸಲು ತೀರ್ಮಾನಿಸಿ ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಯುಸೇಇ 57 ಯುಇಸೇ 94, ಬೆಂಗಳೂರು, ದಿನಾಂಕ 09–04–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 214ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ವಿ. ಕೆ. ಗುಡೋಡಗಿ, ನಿವೃತ್ತ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಇವರ ವಿಶ್ರಾಂತಿ ವೇತನದ ಶೇಕಡ 25 ರಷ್ಟನ್ನು ಶಾಶ್ವತವಾಗಿ ಕಡಿತಗೊಳಿಸಲು ಮತ್ತು ಇವರಿಂದ ಸರ್ಕಾರಕ್ಕೆ ಉಂಟಾದ ನಷ್ಟ ರೂ. 1,43,625/–ಗಳನ್ನು ಇವರ ನಿವೃತ್ತಿ ಸೌಲಭ್ಯಗಳಿಂದ ವಸೂಲು ಮಾಡಲು ಸರ್ಕಾರವು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸಿ. ಶ್ರೀನಿವಾಸ್

ಸರ್ಕಾರದ ಅಧೀನ ಕಾರ್ಯದರ್ಶಿ

ಯುವಜನ ಸೇವಾ ಇಲಾಖೆ

ಪಿ.ಆರ್. 1162

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ: ಕ.ನಾ.ಸೇ. ನಿಯಮಗಳ ನಿಯಮ 247(I), 247-A(I), 224-A ಅನ್ವಯ ನ್ಯಾಯಾಂಗ ಅಧಿಕಾರಿಗಳಿಗೆ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ನಿವೃತ್ತಿ ಸೌಲಭ್ಯಗಳಿಗೆ ಪರಿಗಣಿಸುವ ಕುರಿತು.–

ಓದಲಾಗಿದೆ: ಮಹಾವಿಲೇಖನಾಧಿಕಾರಿಯವರ ಪತ್ರದ ಸಂಖ್ಯೆ: ಜಿಒಬಿ I, 225/2007, ದಿನಾಂಕ 08–09–2011.

ಪ್ರಸ್ತಾವನೆ:

ಮಹಾವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರು ಮೇಲೆ ಓದಲಾದ ಪತ್ರದೊಂದಿಗೆ ನ್ಯಾಯಾಂಗ ಅಧಿಕಾರಿಗಳ ಸೇವಾ ವಿವರಗಳನ್ನೊಳಗೊಂಡ ಪಟ್ಟಿ ಮಾಡಿ ಲಗತ್ತಿಸಿ ಕಳುಹಿಸುತ್ತಾ ಸದರಿ ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(I), 247-A(I), 224-A ಅನ್ವಯ ಲಭ್ಯವಾಗುವ ಅರ್ಹತಾದಾಯಕ ಸೇವೆಯನ್ನು ನಿವೃತ್ತಿ ಸೌಲಭ್ಯಗಳಿಗೆ ಪರಿಗಣಿಸಲು ಪ್ರಸ್ತಾಪಿಸಿರುತ್ತಾರೆ.

ಸದರಿ ಪಟ್ಟಿಯಲ್ಲಿನ ಅಧಿಕಾರಿಗಳ ಸೇವಾ ವಿವರಗಳನ್ನು ಕರ್ನಾಟಕ ನಾಗರಿಕ ಸೇವಾ ನಿಯಮ 247(I), 247-A(I), 224-A ಅನ್ವಯ ಅವರುಗಳಿಗೆ ಲಭ್ಯವಾಗುವ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ಮಂಜೂರು ಮಾಡುವ ಕುರಿತು ಪರಿಶೀಲಿಸಿದೆ. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ 232 ಎಲ್‌ಎಸಿ 2011, ಬೆಂಗಳೂರು, ದಿನಾಂಕ 08–03–2012

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿ ಪಟ್ಟಿ ಮಾಡಿರುವಂತೆ ನ್ಯಾಯಾಂಗ ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(I) ಅನ್ವಯ ಅರ್ಹವಾಗುವ ಹೆಚ್ಚುವರಿ ಸೇವೆಯನ್ನು ಅವರುಗಳ ನಿವೃತ್ತಿ

ವೇತನಕ್ಕೆ ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಅವಧಿಯನ್ನು ಹೆಚ್ಚುವರಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಸರ್ಕಾರ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 469 ವೆಚ್ಚ-10/2011, ದಿನಾಂಕ 24-02-2012ರಲ್ಲಿ ನೀಡಿರುವ ಸಹಮತದೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಡಿ. ಎ. ಗೌರೀಶ

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1)

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಅನುಬಂಧ

ಸರ್ಕಾರದ ಆದೇಶ ಸಂಖ್ಯೆ: ಲಾ 232 ಎಲ್ಎಸಿ 2011, ಬೆಂಗಳೂರು, ದಿನಾಂಕ 08-03-2012

ಕ್ರ.ಸಂ.	ನ್ಯಾಯಾಧೀಶರ ಹೆಸರು ಮತ್ತು ಪದನಾಮ ಶ್ರೀ/ಶ್ರೀಮತಿ	ನಿಯಮ 247-(I) ರನ್ವಯ ಲಭ್ಯವಾಗುವ ಹೆಚ್ಚುವರಿ ಅರ್ಹತಾದಾಯಕ ಸೇವೆ
1	2	3
1	ಹೆಚ್. ಗೋಪಾಕೃಷ್ಣ, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕೆ.ಜಿ.ಎಫ್.	5 ವರ್ಷಗಳು
2	ರಾಜಕುಮಾರ ಎಸ್. ಅಮೀನಬಾವಿ, 3ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಬಿಜಾಪುರ	5 ವರ್ಷಗಳು
3	ಎಸ್. ಆರ್. ಮಾಣಿಕ್ಯ, ಹಿರಿಯ ಸಿವಿಲ್ ನ್ಯಾಯಾಧೀಶರು, ಮುದ್ದೇಬಿಹಾಳ	5 ವರ್ಷಗಳು
4	ಮೋಹನ್ ಪ್ರಭು, ಹಿರಿಯ ಸಿವಿಲ್ ನ್ಯಾಯಾಧೀಶರು, ಬಸವನ ಬಾಗೇವಾಡಿ	5 ವರ್ಷಗಳು
5	ಹೆಚ್. ಎಸ್. ಮಂಜುನಾಥ, ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು, ತುಮಕೂರು	5 ವರ್ಷಗಳು
6	ಸುನೀಲ್ ಎ. ಶೆಟ್ಟರ್, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ದೇವನಹಳ್ಳಿ	5 ವರ್ಷಗಳು

ಡಿ. ಎ. ಗೌರೀಶ

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1)

ಪಿ.ಆರ್. 1163 ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ: ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು ಹೆಚ್ಚುವರಿ ನೋಟರಿ ಹುದ್ದೆ ನೇಮಕಾತಿ ಬಗ್ಗೆ (ಶ್ರೀ ಬಿಕಂಚಂದ್ ರವರ ನೇಮಕಾತಿ ಆದೇಶ ರದ್ದಾದ ಪ್ರಯುಕ್ತ).

ಓದಲಾಗಿದೆ:
1) ರಿಟ್ ಪಿಟಿಷನ್ ಸಂಖ್ಯೆ: 50342.2003 (GN-Not) ದಿನಾಂಕ 06-12-2006
2) ಸರ್ಕಾರದ ಪತ್ರದ ಸಂಖ್ಯೆ: ಲಾ 01 ಎಲ್‌ಸಿಎಲ್ 2004, ದಿನಾಂಕ 05-03-2009
3) ಪ್ರಧಾನ ಜಿಲ್ಲೆ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ದಿನಾಂಕ 04-04-2009
4) ಸರ್ಕಾರದ ಪತ್ರ ಸಂಖ್ಯೆ: ಲಾ 75 ಎಲ್‌ಸಿಎಲ್ 2009, ದಿನಾಂಕ 09-03-2010
5) (ಅ) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರ ಪತ್ರ ಸಂಖ್ಯೆ: ಸಿಆರ್‌ಆರ್/ನೋಟರಿ/15996/2011, ದಿನಾಂಕ 25-11-2011.
   (ಆ) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರ ಪತ್ರ ಸಂಖ್ಯೆ: ಸಿಆರ್‌ಆರ್/ ಎನ್‌ಓಟಿ 11/17627, ದಿನಾಂಕ 29-12-2011.
6) ನೋಟರಿಗಳ ತಿದ್ದುಪಡಿ ನಿಯಮಗಳು 2009ರ ಅಧಿಸೂಚನೆ ಸಂಖ್ಯೆ: ಜಿಎಸ್‌ಆರ್ 114 (ಇ) ದಿನಾಂಕ 24-02-2009.
7) ಸಂದರ್ಶನ ಮಂಡಳಿ ರಚನೆ ಅಧಿಸೂಚನೆ ಸಂಖ್ಯೆ: ಲಾ 61 ಎಲ್‌ಸಿಎಲ್ 2009, ದಿನಾಂಕ 24-07-2010.
8) ಸಂದರ್ಶನ ಸೂಚನಾ ಪತ್ರ ಸಂಖ್ಯೆ: ಲಾ 75 ಎಲ್‌ಸಿಎಲ್ 2009, ದಿನಾಂಕ 13-01-2012

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿ ಶ್ರೀ ಬಿಕಂಚಂದ್ ರವರ ನೇಮಕಾತಿ ಆದೇಶ ಘನ ನ್ಯಾಯಾಲಯದಲ್ಲಿ ರದ್ದಾದ ಪ್ರಯುಕ್ತ ಅವರ ಬದಲಿ ನೇಮಕಾತಿ ಅವಶ್ಯಕತೆ ಇದೆಯೇ ಎಂಬ ಬಗ್ಗೆ ವರದಿಯನ್ನು ದಿನಾಂಕ 05-03-2009 ಓದಲಾಗಿದೆ (2)ರಲ್ಲಿ ಕೇಳಿದ್ದು, ದಿನಾಂಕ 04-04-2009

ಓದಲಾಗಿದೆ (3)ರಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ನಂಜನಗೂಡು ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆಯನ್ನು ಸೃಜಿಸಬಹುದಾಗಿದೆ ಎಂದು ಅಭಿಪ್ರಾಯ ಪಟ್ಟಿರುತ್ತಾರೆ. ಅದರಂತೆ ನೋಟರಿ ಹುದ್ದೆಯನ್ನು ಭರ್ತಿ ಮಾಡಲು ನೋಟರಿಗಳ ಅಧಿನಿಯಮ/ನಿಯಮಗಳನ್ವಯ ಅಧಿಸೂಚನೆ ಹೊರಡಿಸುವ ಮೂಲಕ ಸ್ಥಳೀಯರಿಂದ ಅಜಿಗಳನ್ನು ಆಹ್ವಾನಿಸಿ ನೋಟರಿಗಳ ಅಧಿನಿಯಮ/ನಿಯಮಗಳು ಹಾಗೂ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತು) ನಿಯಮಗಳು 1977ರ ನಿಯಮ 12ರಡಿಯಲ್ಲಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರನ್ನು ಮೇಲೆ (4)ರಲ್ಲಿ ಓದಲಾದ ದಿನಾಂಕ 09-03-2010ರ ಪತ್ರದಲ್ಲಿ ಕೋರಲಾಗಿತ್ತು.

ಅದರಂತೆ ಮೇಲೆ (5)ರಲ್ಲಿ ಓದಲಾದ ಪತ್ರಗಳೊಂದಿಗೆ 11 ಜನರ ಮೆಮೋರಿಯಲ್ಸ್‌ಗಳನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಆ ಪ್ರಸ್ತಾವನೆಯನ್ನು ಮೇಲೆ (6)ರಲ್ಲಿ ಓದಲಾದ ನೋಟರಿಗಳ ತಿದ್ದುಪಡಿ ನಿಯಮಗಳು 2009ರನ್ವಯ ಕರ್ನಾಟಕ ರಾಜ್ಯದಿಂದ ನೋಟರಿಗಳ ನೇಮಕಕ್ಕಾಗಿ ಮೇಲೆ (7)ರಲ್ಲಿ ಓದಲಾದ ದಿನಾಂಕ 24-07-2010ರ ಅಧಿಸೂಚನೆಯಲ್ಲಿ ರಚಿಸಲಾಗಿರುವ ಸಂದರ್ಶನ ಮಂಡಳಿಯ ಪರಿಶೀಲನೆಗೆ ಕಳಿಸಿ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನ ಮಂಡಳಿಯ ಮುಂದೆ ಸಂದರ್ಶನಕ್ಕೆ ಹಾಜರಾಗುವಂತೆ ಮೇಲೆ (8)ರಲ್ಲಿ ಓದಲಾದ ದಿನಾಂಕ 13-01-2012ರ ಸೂಚನಾ ಪತ್ರದಲ್ಲಿ ಸೂಚಿಸಲಾಗಿತ್ತು. ಅದರಂತೆ ಸಂದರ್ಶನ ಮಂಡಳಿಯು ಸಂದರ್ಶನ ನಡೆಸಿ ವರದಿ ಸಲ್ಲಿಸಿದೆ.

ಸಂದರ್ಶನ ಮಂಡಳಿಯ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಲಾ 75 ಎಲ್‌ಸಿಎಲ್ 2009, ಬೆಂಗಳೂರು, ದಿನಾಂಕ 24-03-2012

ನೋಟರಿಗಳ ಅಧಿನಿಯಮ, 1952 ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿಗಳ ನಿಯಮಗಳು, 1956 ಹಾಗೂ ನಂತರದ ತಿದ್ದುಪಡಿ ನಿಯಮಗಳನ್ವಯ ಪರಿಶೀಲಿಸಿ ನಿಯಮ 8(1)ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ಶ್ರೀ ಪಿ. ಮಹೇಶ ಬಿನ್ ಪುಟ್ಟಸ್ವಾಮಿ, ವಕೀಲರು, ಹೊರಳವಾಡಿ ಗ್ರಾಮ, ಕಸಬಾ ಹೋಬಳಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ರವರನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ನಂಜನಗೂಡು ಕಂದಾಯ ತಾಲ್ಲೂಕಿನ ನೋಟರಿಯನ್ನಾಗಿ ನೇಮಿಸಿದೆ.

ಸದರಿ ವಕೀಲರು ಲೆಕ್ಕ ಶೀರ್ಷಿಕೆ 0070-ಇತರೆ ಆಡಳಿತಾತ್ಮಕ ಸೇವೆಗಳು-01-ನ್ಯಾಯ ಪರಿಪಾಲನೆ 501-0 ಇತರೆ ಸ್ವೀಕೃತಿಗಳು-06 ಇತರೆ ಬಾಬ್ತುಗಳಿಗೆ (0070-01-501-0-06) ನೋಟರಿ ನಿಯಮಗಳಲ್ಲಿ ನಿಗದಿಪಡಿಸಲಾದ ರೂ. 1000.00 (ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಜಮಾ ಮಾಡಿ ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಯನ್ನು ಹಾಜರುಪಡಿಸಿದ ನಂತರ ಅವರಿಗೆ ವೃತ್ತಿ ಪ್ರಮಾಣ ಪತ್ರ ನೀಡಲಾಗುವುದು.

ವೃತ್ತಿ ಪ್ರಮಾಣ ಪತ್ರ ನೀಡಿದ ನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ, 52ರ ಕಲಂ 4ನೇ ಪ್ರಕರಣದಡಿ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುಕ್ಮಿಣಿ ದಿವಾಕರ್

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-2)

ಪಿ.ಆರ್. 1164 ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ: ಬಿಜಾಪುರ ಕಂದಾಯ ತಾಲ್ಲೂಕಿನಲ್ಲಿನ ನೋಟರಿ ಹುದ್ದೆ ಭರ್ತಿ ಮಾಡುವ ಬಗ್ಗೆ.-
(ಶ್ರೀ ಅರ್ಜುನ ಗಂಗಾರಾಂ ರಾಥೋಡ್, ಇವರ ವಜಾದಿಂದ ತೆರವಾದ ಪ್ರಯುಕ್ತ)

ಓದಲಾಗಿದೆ:
1) ಸರ್ಕಾರದ ಅದೇಶ ಸಂಖ್ಯೆ: ಲಾ 80 ಎಲ್‌ಸಿಎಲ್ 2009, ದಿನಾಂಕ 09-12-2010
2) ಸರ್ಕಾರದ ಪತ್ರದ ಸಂಖ್ಯೆ: ಲಾ 152 ಎಲ್‌ಸಿಎಲ್ 2011, ದಿನಾಂಕ 30-06-2011
3) ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಿಜಾಪುರ ಇವರ ಪತ್ರ ಸಂಖ್ಯೆ: ಸಿಪಿಎನ್/5164/2011, ದಿನಾಂಕ 07-12-2011.
4) ನೋಟರಿಗಳ ತಿದ್ದುಪಡಿ ನಿಯಮಗಳು 2009ರ ಅಧಿಸೂಚನೆ ಸಂಖ್ಯೆ: ಜಿಎಸ್‌ಆರ್ 114(ಇ) ದಿನಾಂಕ 24-02-2009.
5) ಅಧಿಸೂಚನೆ ಸಂಖ್ಯೆ: ಲಾ 61 ಎಲ್‌ಸಿಎಲ್ 2009, ದಿನಾಂಕ 24-07-2010
6) ಸಂದರ್ಶನ ಸೂಚನಾ ಪತ್ರ ಸಂಖ್ಯೆ: ಲಾ 152 ಎಲ್‌ಸಿಎಲ್ 2011, ದಿನಾಂಕ 31-01-2012.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶ ಸಂಖ್ಯೆ: ಲಾ 80 ಎಲ್‌ಸಿ ಲ್ 2009, ದಿನಾಂಕ 09-12-2010ರಲ್ಲಿ ಶ್ರೀ ಅರ್ಜುನ ಗಂಗಾರಾಂ ರಾಥೋಡ್, ಇವರ ವಜಾದಿಂದ ತೆರವಾದ ಹುದ್ದೆಯನ್ನು ಭರ್ತಿ ಮಾಡಲು ನೋಟರಿಗಳ ಅಧಿನಿಯಮ/ನಿಯಮಗಳನ್ವಯ ಅಧಿಸೂಚನೆ ಹೊರಡಿಸುವ ಮೂಲಕ ಸ್ಥಳೀಯರಿಂದ ಅರ್ಜಿಗಳನ್ನು ಆಹ್ವಾನಿಸಿ ನೋಟರಿಗಳ ಅಧಿನಿಯಮ/ನಿಯಮಗಳು ಹಾಗೂ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತು) ನಿಯಮಗಳು 1977ರ ನಿಯಮ 12ರಡಿಯಲ್ಲಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಿಜಾಪುರ ಇವರನ್ನು ಮೇಲೆ (2)ರಲ್ಲಿ ಓದಲಾದ ದಿನಾಂಕ 30-06-2011ರ ಪತ್ರದಲ್ಲಿ ಕೋರಲಾಗಿತ್ತು.

ಅದರಂತೆ ಮೇಲೆ (3)ರಲ್ಲಿ ಓದಲಾದ ದಿನಾಂಕ 07-12-2011ರ ಪತ್ರದೊಂದಿಗೆ 22 ಜನರ ಮೆಮೋರಿಯಲ್ಸ್ ಗಳನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸಿದರು, ಆ ಪ್ರಸ್ತಾವನೆಯನ್ನು ಮೇಲೆ (4)ರಲ್ಲಿ ಓದಲಾದ ನೋಟರಿಗಳ ತಿದ್ದುಪಡಿ ನಿಯಮಗಳು 2009ರನ್ವಯ ಕರ್ನಾಟಕ

ರಾಜ್ಯದಿಂದ ನೋಟರಿಗಳ ನೇಮಕಕ್ಕಾಗಿ ಮೇಲೆ (5)ರಲ್ಲಿ ಓದಲಾದ ದಿನಾಂಕ 24–07–2010ರ ಅಧಿಸೂಚನೆಯಲ್ಲಿ ರಚಿಸಲಾಗಿರುವ ಸಂದರ್ಶನ ಮಂಡಳಿಯ ಪರಿಶೀಲನೆಗೆ ಕಳುಹಿಸಿ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನ ಮಂಡಳಿಯ ಮುಂದೆ ಸಂದರ್ಶನಕ್ಕೆ ಹಾಜರಾಗುವಂತೆ ಮೇಲೆ (6)ರಲ್ಲಿ ಓದಲಾದ ದಿನಾಂಕ 31–01–2012ರ ಸಂದರ್ಶನ ಸೂಚನಾ ಪತ್ರದಲ್ಲಿ ಸೂಚಿಸಲಾಗಿತ್ತು. ಅದರಂತೆ ಸಂದರ್ಶನ ಮಂಡಳಿಯು ಸಂದರ್ಶನ ನಡೆಸಿ ವರದಿ ಸಲ್ಲಿಸಿದೆ.

ಸಂದರ್ಶನ ಮಂಡಳಿಯ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಲಾ 152 ಎಲ್‌ಸಿಎಲ್ 2011, ಬೆಂಗಳೂರು, ದಿನಾಂಕ 22–03–2012

ನೋಟರಿಗಳ ಅಧಿನಿಯಮ, 1952 ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿಗಳ ನಿಯಮಗಳು, 1956 ಹಾಗೂ ನಂತರದ ತಿದ್ದುಪಡಿ ನಿಯಮಗಳನ್ವಯ ಪರಿಶೀಲಿಸಿ ನಿಯಮ 8(1)ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ಶ್ರೀ ಅಶೋಕ ಕರೆಪ್ಪ ಬಿಂಜಗೇರಿ, ವಕೀಲರು, ಪ್ಲಾಟ್ ನಂ. 46, ವಜ್ರ ಹನುಮಾನ್ ನಗರ, 2ನೇ ಹಂತ, ಬಾಗಲಕೋಟೆ ರಸ್ತೆ, ಬಿಜಾಪುರರವರನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಬಿಜಾಪುರ ಕಂದಾಯ ತಾಲ್ಲೂಕಿನ ನೋಟರಿಯನ್ನಾಗಿ ನೇಮಿಸಿದೆ.

ಸದರಿ ವಕೀಲರು ಲೆಕ್ಕ ಶೀರ್ಷಿಕೆ 0070–ಇತರೆ ಆಡಳಿತಾತ್ಮಕ ಸೇವೆಗಳು–01–ನ್ಯಾಯ ಪರಿಪಾಲನೆ 501–01 ಇತರೆ ಸ್ವೀಕೃತಿಗಳು–06 ಇತರೆ ಬಾಬ್ತುಗಳಿಗೆ (0070–01–501–0–06) ನೋಟರಿ ನಿಯಮಗಳಲ್ಲಿ ನಿಗದಿಪಡಿಸಲಾದ ರೂ. 1000.00 (ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಜಮಾ ಮಾಡಿ ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಯನ್ನು ಹಾಜರುಪಡಿಸಿದ ನಂತರ ಅವರಿಗೆ ವೃತ್ತಿ ಪ್ರಮಾಣ ಪತ್ರ ನೀಡಲಾಗುವುದು.

ವೃತ್ತಿ ಪ್ರಮಾಣ ಪತ್ರ ನೀಡಿದ ನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ 1952ರ ಕಲಂ 4ನೇ ಪ್ರಕರಣದಡಿ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುಕ್ಮಿಣಿ ದಿವಾಕರ್

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ–2)

ಪಿ.ಆರ್. 1165 ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ : ಶ್ರೀ ಆನಂದ್, ನೋಟರಿ ಹುಣಸೂರು ಇವರ ರಾಜೀನಾಮೆಯಿಂದ ತೆರವಾದ ನೋಟರಿ ಹುದ್ದೆಯನ್ನು ತುಂಬುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಲಾ 39 ಎಲ್‌ಸಿಎಲ್ 2008, ದಿನಾಂಕ : 09–05–2008.
2. ಸರ್ಕಾರದ ಪತ್ರ ಸಂಖ್ಯೆ : ಲಾ 75 ಎಲ್‌ಸಿಎಲ್ 2008, ದಿನಾಂಕ : 30–06–2008.
3. (ಅ) ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಪತ್ರ ಸಂಖ್ಯೆ : ಸಿಆರ್‌ಆರ್/ನೋಟರಿ/16244/2011, ದಿನಾಂಕ : 26–11–2011.
   (ಆ) ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಪತ್ರ ಸಂಖ್ಯೆ : ಸಿಆರ್‌ಆರ್/ಎನ್‌ಒಟಿ/11/17627/2011, ದಿನಾಂಕ : 29–12–2011.
4. ನೋಟರಿಗಳ ತಿದ್ದುಪಡಿ ನಿಯಮಗಳು 2009ರ ಅಧಿಸೂಚನೆ ಸಂಖ್ಯೆ : ಜಿಎಸ್‌ಆರ್ 114 (ಇ) ದಿನಾಂಕ : 24–02–2009.
5. ಸಂದರ್ಶನ ಮಂಡಳಿ ರಚನೆ ಅಧಿಸೂಚನೆ ಸಂಖ್ಯೆ : ಲಾ 61 ಎಲ್‌ಸಿಎಲ್ 2009, ದಿನಾಂಕ : 24–07–2010.
6. ಸಂದರ್ಶನ ಸೂಚನೆ ಪತ್ರ ಸಂಖ್ಯೆ : ಲಾ 75 ಎಲ್‌ಸಿಎಲ್ 2008, ದಿನಾಂಕ : 13–01–2012.

ಪ್ರಸ್ತಾವನೆ :

ಮೇಲೆ ಓದಲಾದ (1)ರಲ್ಲಿ ಶ್ರೀ ಆನಂದ್, ನೋಟರಿ, ಹುಣಸೂರು ಇವರ ರಾಜೀನಾಮೆಯಿಂದ ತೆರವಾದ ನೋಟರಿ ಹುದ್ದೆಗೆ ಬದಲಿ ನೇಮಕಾತಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದ್ದು, ಅದರಂತೆ ನೋಟರಿ ಹುದ್ದೆಯನ್ನು ಭರ್ತಿ ಮಾಡಲು ನೋಟರಿಗಳ ಅಧಿನಿಯಮ/ನಿಯಮಗಳನ್ವಯ ಅಧಿಸೂಚನೆ ಹೊರಡಿಸುವ ಮೂಲಕ ಸ್ಥಳೀಯರಿಂದ ಅರ್ಜಿಗಳನ್ನು ಆಹ್ವಾನಿಸಿ ನೋಟರಿಗಳ ಅಧಿನಿಯಮ/ನಿಯಮಗಳು ಹಾಗೂ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತು) ನಿಯಮಗಳು 1977ರ ನಿಯಮ 12ರಡಿಯಲ್ಲಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರನ್ನು ಮೇಲೆ (2)ರಲ್ಲಿ ಓದಲಾದ ದಿನಾಂಕ : 30–06–2008ರ ಪತ್ರದಲ್ಲಿ ಕೋರಲಾಗಿತ್ತು.

ಅದರಂತೆ ಮೇಲೆ (3)ರಲ್ಲಿ ಓದಲಾದ ಪತ್ರಗಳೊಂದಿಗೆ 12 ಜನರ ಮೆಮೋರಿಯಲ್ಸ್‌ಗಳನ್ನೊಳಗೊಂಡ ಪ್ರಸ್ತಾವನೆಯನ್ನು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು ಇವರು ಸಲ್ಲಿಸಿದ್ದರು. ಆ ಪ್ರಸ್ತಾವನೆಯನ್ನು ಮೇಲೆ (4)ರಲ್ಲಿ ಓದಲಾದ ನೋಟರಿಗಳ ತಿದ್ದುಪಡಿ ನಿಯಮಗಳು 2009ರನ್ವಯ ಕರ್ನಾಟಕ ರಾಜ್ಯದಿಂದ ನೋಟರಿಗಳ ನೇಮಕಕ್ಕಾಗಿ ಮೇಲೆ (5)ರಲ್ಲಿ ಓದಲಾದ ದಿನಾಂಕ : 24–07–2010ರ ಅಧಿಸೂಚನೆಯಲ್ಲಿ ರಚಿಸಲಾಗಿರುವ ಸಂದರ್ಶನ ಮಂಡಳಿಯ ಪರಿಶೀಲನೆಗೆ ಕಳುಹಿಸಿ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನ ಮಂಡಳಿಯ ಮುಂದೆ ಸಂದರ್ಶನಕ್ಕೆ

ಹಾಜರಾಗುವಂತೆ ಮೇಲೆ (6)ರಲ್ಲಿ ಓದಲಾದ ದಿನಾಂಕ : 13-01-2012ರ ಸೂಚನಾ ಪತ್ರದಲ್ಲಿ ಸೂಚಿಸಲಾಗಿತ್ತು. ಅದರಂತೆ ಸಂದರ್ಶನ ಮಂಡಳಿಯು ಸಂದರ್ಶನ ನಡೆಸಿ ವರದಿ ಸಲ್ಲಿಸಿದೆ.

ಸಂದರ್ಶನ ಮಂಡಳಿಯ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ. ಅದರಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಲಾ 75 ಎಲ್‌ಸಿಎಲ್ 2008, ಬೆಂಗಳೂರು, ದಿನಾಂಕ : 27-03-2012

ನೋಟರಿಗಳ ಅಧಿನಿಯಮ, 1952 ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿಗಳ ನಿಯಮಗಳು, 1956 ಹಾಗೂ ನಂತರದ ತಿದ್ದುಪಡಿ ನಿಯಮಗಳನ್ವಯ ಪರಿಶೀಲಿಸಿ ನಿಯಮ 8(1)ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ಶ್ರೀ ವೀರೇಶ್ ರಾವ್ ಬೊಬಾಡೆ ಬಿನ್ ಲೇಟ್ ವೆಂಕಟರಾವ್ ಬೊಬಾಡೆ, ಗವಡಗೆರೆ ವಿಲೇಜ್, ಪೋಸ್ಟ್ ಮತ್ತು ಹೋಬಳಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ-571610ರವರನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಹುಣಸೂರು ಕಂದಾಯ ತಾಲ್ಲೂಕಿನ ನೋಟರಿಯನ್ನಾಗಿ ನೇಮಿಸಿದೆ.

ಸದರಿ ವಕೀಲರು ಲೆಕ್ಕ ಶೀರ್ಷಿಕೆ 0070- ಇತರೆ ಆಡಳಿತಾತ್ಮಕ ಸೇವೆಗಳು-01-ನ್ಯಾಯ ಪರಿಪಾಲನೆ -501-0-ಇತರೆ ಸ್ವೀಕೃತಿಗಳು-06 ಇತರೆ ಬಾಬ್ತುಗಳಿಗೆ (0070-01-501-0-06) ನೋಟರಿ ನಿಯಮಗಳಲ್ಲಿ ನಿಗದಿಪಡಿಸಲಾದ ರೂ. 1000.00 (ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಜಮಾ ಮಾಡಿ ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಗಳನ್ನು ಹಾಜರುಪಡಿಸಿದ ನಂತರ ಅವರಿಗೆ ವೃತ್ತಿ ಪ್ರಮಾಣ ಪತ್ರ ನೀಡಲಾಗುವುದು.

ವೃತ್ತಿ ಪ್ರಮಾಣ ಪತ್ರ ನೀಡಿದ ನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ, 1952ರ ಕಲಂ 4ನೇ ಪ್ರಕರಣದಡಿ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುಕ್ಮಿಣಿ ದಿವಾಕರ್

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-2)

ಪಿ.ಆರ್. 1166 ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.

ಸಹಕಾರ ಸಚಿವಾಲಯ

ವಿಷಯ : ಸುನಿತಾ ಮಹಿಳಾ ಮಂಡಳಿ, ಮಂಡ್ಯ ಇದಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :

1. ಸಹಕಾರ ಸಂಘಗಳ ನಿಬಂಧಕರು ಬೆಂಗಳೂರು ಇವರ ಪತ್ರ ಸಂಖ್ಯೆ : ಆರ್‌ಸಿಎಸ್/ಎಡಿಎಂ/135/ಎಸ್‌ಓಆರ್/2010-11 ದಿನಾಂಕ : 18-02-2011.
2. ಕಾರಣ ಕೇಳುವ ನೋಟಿಸಿನ ಸಂಖ್ಯೆ ಸಇ 26 ಸಸಂನೋ 2011 ದಿನಾಂಕ : 08-04-2011.
3. ಕಾರಣ ಕೇಳುವ ನೋಟಿಸಿಗೆ ಲಿಖಿತ ಹೇಳಿಕೆ ದಿನಾಂಕ : 12-05-2011.
4. ಸರ್ಕಾರದ ಪತ್ರ ಸಂಖ್ಯೆ ಸಇ 26 ಸಸಂನೋ 2011 ದಿನಾಂಕ : 18-06-2011.
5. ಸಹಕಾರ ಸಂಘಗಳ ನಿಬಂಧಕರು ಬೆಂಗಳೂರು ರವರ ಪತ್ರ ಸಂಖ್ಯೆ ಆರ್‌ಸಿಎಸ್/ಎಡಿಎಂ/135/ಎಸ್‌ಓಆರ್-3/2010-11 ದಿನಾಂಕ : 27-01-2012.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಸುನಿತಾ ಮಹಿಳಾ ಮಂಡಳಿ, ಮಂಡ್ಯ ಸಂಘವು ನೋಂದಣಿ ಸಂಖ್ಯೆ : 31/1990-1991ರ ದಿನಾಂಕ : 10-05-1990 ರಂದು ಮಂಡ್ಯದಲ್ಲಿ ನೋಂದಣಿ ಆಗಿದ್ದು ಸದರಿ ಸಂಸ್ಥೆಯು 2006-07 ರಿಂದ 2009-2010ನೇ ಸಾಲಿನ ವರೆಗೆ ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 11 & 13 ರನ್ವಯ ವಾರ್ಷಿಕ ಮಹಾಸಭೆ ನಡೆಸಲು ಲೆಕ್ಕಪರಿಶೋಧನೆ ವೇಳೆ ಆರ್ಥಿಕ ತಃಖ್ತೆಗಳ ಪಟ್ಟಿ ಮತ್ತು ಕಾರ್ಯಕಾರಿ ಸಮಿತಿಯ ಪಟ್ಟಿ ಸಲ್ಲಿಸಲು ವಿಫಲರಾಗಿದ್ದು ಹಾಗೂ ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿ ಒದಗಿಸಿಲ್ಲವೆಂದು ಮತ್ತು ಸಹಕಾರ ಸಂಘಗಳ ಉಪ ನಿಬಂಧಕರು ಅನೇಕ ಬಾರಿ ನೋಟಿಸ್ ನೀಡಿದಾಗ್ಯೂ ಯಾವುದೇ ರೀತಿಯಲ್ಲಿ ಸ್ಪಂದಿಸಿರುವುದಿಲ್ಲವೆಂದು ತಿಳಿಸಿದ್ದಾರೆ. ಈ ಕಾರಣದಿಂದ ಸದರಿ ಸಂಘದ ಉಸ್ತುವಾರಿ ಹಾಗೂ ಸಂಘವನ್ನು ಸುವ್ಯವಸ್ಥಿತವಾಗಿ ನಡೆಸಿಕೊಂಡು ಹೋಗಲು ಸಂಘಕ್ಕೆ ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರನ್ವಯ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಸಂಸ್ಥೆಗೆ ಆಡಳಿತಾಧಿಕಾರಿಯನ್ನು ನೇಮಿಸಲು ಸಹಕಾರ ಸಂಘಗಳ ಉಪ ನಿಬಂಧಕರು ಶಿಫಾರಸ್ಸು ಮಾಡಿರುವುದನ್ನು ಪರಿಗಣಿಸಲು ಕೋರಿದ್ದಾರೆ.

ಮೇಲೆ (2)ರಲ್ಲಿ ಓದಲಾದ ಕಾರಣ ಕೇಳುವ ನೋಟಿಸಿನಲ್ಲಿ ಸಂಸ್ಥೆಯು 2006-07 ರಿಂದ 2009-10ನೇ ಸಾಲಿನವರೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 11 ಮತ್ತು 13 ರನ್ವಯ ವಾರ್ಷಿಕ ಮಹಾಸಭೆ ನಡೆಸಲು, ಲೆಕ್ಕಪರಿಶೋಧನೆ ವೇಳೆ ಆರ್ಥಿಕ ತಃಖ್ತೆಗಳ ಪಟ್ಟಿ ಮತ್ತು ಕಾರ್ಯಕಾರಿ ಸಮಿತಿಯ ಪಟ್ಟಿ ಸಲ್ಲಿಸಲು ವಿಫಲವಾಗಿರುವುದರಿಂದ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ಪ್ರಕಾರ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದು ಎಂಬ ಬಗ್ಗೆ ಲಿಖಿತ/ಮೌಖಿಕ ಹೇಳಿಕೆಯನ್ನು ಈ ಸೂಚನಾ ಪತ್ರ ತಲುಪಿದ 15 ದಿವಸಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸಲು ತಪ್ಪಿದಲ್ಲಿ ಸಂಘವು ಹೇಳುವುದು ಏನು ಇಲ್ಲವೆಂದು ಭಾವಿಸಿ ಮುಂದಿನ ಸೂಕ್ತ ಕ್ರಮ ಜರುಗಿಸಲಾಗುವುದೆಂದು ಸಂಘದ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಸೂಚನೆ ನೀಡಲಾಗಿತ್ತು.

ಮೇಲೆ (3)ರಲ್ಲಿ ಓದಲಾದ ದಿನಾಂಕ : 12-05-2011ರ ಪತ್ರದಲ್ಲಿ ಸದರಿ ಸಂಘದ ಕಾರ್ಯದರ್ಶಿಗಳು ಹೇಳಿಕೆ ನೀಡಿ ಅನಾರೋಗ್ಯದ ನಿಮಿತ್ತ 2006-07ನೇ ಸಾಲಿನಿಂದ 2009-10ನೇ ಸಾಲಿನವರೆಗೆ ವಾರ್ಷಿಕ ಲೆಕ್ಕಪತ್ರಗಳನ್ನು ಸಕಾಲದಲ್ಲಿ ಜಿಲ್ಲಾ ನೋಂದಣಾಧಿಕಾರಿಗಳಿಗೆ ಸಲ್ಲಿಸಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡುವುದನ್ನು ಕೈಬಿಟ್ಟು ಲೆಕ್ಕಪತ್ರಗಳನ್ನು ಅಂಗೀಕರಿಸಬೇಕಾಗಿ ಕೋರಿದ್ದಾರೆ.

ಮೇಲೆ (4)ರಲ್ಲಿ ಓದಲಾದ ದಿನಾಂಕ : 18-06-2011ರ ಪತ್ರದಲ್ಲಿ ಸುನಿತಾ ಮಹಿಳಾ ಮಂಡಳಿ ಮಂಡ್ಯ ಈ ಸಂಸ್ಥೆಗೆ ಆಡಳಿತಾಧಿಕಾರಿಯನ್ನು ನೇಮಿಸಲು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಸಂಘಕ್ಕೆ ಇನ್ನೂ 3 ತಿಂಗಳ ಕಾಲಾವಕಾಶ ಕೊಟ್ಟು (ಕೊನೆಯದಾಗಿ) 2006-07 ರಿಂದ 2009-10ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿತ್ತು. ಆಗಲೂ ಸಲ್ಲಿಸದಿದ್ದಲ್ಲಿ ಆಡಳಿತಾಧಿಕಾರಿಯವರನ್ನು ನೇಮಿಸಬೇಕಾಗುತ್ತದೆಂದು ಸಹಕಾರ ಸಂಘಗಳ ನಿಬಂಧಕರು ಬೆಂಗಳೂರು ಹಾಗೂ ಸಂಸ್ಥೆಯ ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ (5)ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಪ್ರಕರಣ 11 ರಂತೆ ವಾರ್ಷಿಕ ಮಹಾ ಸಭೆ ನಡೆಸದೆ ಪ್ರಕರಣ 13 ರಂತೆ ಸಂಘ ಸಂಸ್ಥೆಗಳ ನೋಂದಣಾಧಿಕಾರಿಗಳಿಗೆ ವಾರ್ಷಿಕ ಲೆಕ್ಕಪತ್ರಗಳನ್ನು ಸಲ್ಲಿಸಲು ವಿಫಲವಾಗಿರುವುದರಿಂದ ಸುನಿತಾ ಮಹಿಳಾ ಮಂಡಳಿ, ಮಂಡ್ಯ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಪ್ರಕರಣ 27(ಎ)(1) (ಎ), ಬಿ ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸಇ 26 ಸಸಂನೋ 2011, ಬೆಂಗಳೂರು, ದಿನಾಂಕ : 30–03–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸುನಿತಾ ಮಹಿಳಾ ಮಂಡಳಿ ಮಂಡ್ಯ, ಈ ಸಂಸ್ಥೆಯ ಹಾಲಿ ಇರುವ ಆಡಳಿತ ಮಂಡಳಿಯನ್ನು ರದ್ದುಗೊಳಿಸಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ)ರನ್ವಯ, ಸದರಿ ಸಂಸ್ಥೆಗೆ ಆರು (6) ತಿಂಗಳ ಅವಧಿಗೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಸಂಘಗಳ ಉಪನಿಬಂಧಕರ ಕಛೇರಿ ಮಂಡ್ಯ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಗಳು ಸದರಿ ಅವಧಿಯಲ್ಲಿ ಆಡಳಿತ ಮಂಡಳಿಯ ಅವ್ಯವಹಾರಗಳನ್ನು ಸರಿಪಡಿಸಿ ಸಂಸ್ಥೆಗೆ ಚುನಾವಣೆ ನಡೆಸಿ ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸುವಂತೆ ಹಾಗೂ ಈ ರೀತಿ ತೆಗೆದುಕೊಂಡ ಕ್ರಮಗಳ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎ.ಎಸ್. ವಿಶ್ವೇಶ್ವರಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ–2
ಸಹಕಾರ ಇಲಾಖೆ

ಪಿ.ಆರ್. 1167

ಸಹಕಾರ ಸಚಿವಾಲಯ

ವಿಷಯ : ಗ್ರಾಂಟ್ ಸಂಖ್ಯೆ : 18ರಡಿ ಮುಖ್ಯ ಲೆಕ್ಕಶೀರ್ಷಿಕೆ 6860 ರಡಿಯಲ್ಲಿ ಹಣ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಂಡ್ಯ ಇವರ ಪತ್ರ ಸಂಖ್ಯೆ : ಎಡಿಎಂಎಲ್/500/2011–12, ದಿನಾಂಕ : 28–03–2012.
2. ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ 462 ಬಿಆರ್‌ಎಸ್ 2012, ದಿನಾಂಕ : 30–03–2012.
3. ಆರ್ಥಿಕ ಇಲಾಖೆಯ ಆಂತರಿಕ ಟಿಪ್ಪಣಿ ಸಂಖ್ಯೆ : ಎಫ್‌ಡಿ 114 ಇಎಕ್ಸ್‌ಪಿ 2/12, ದಿನಾಂಕ : 30–03–2012.

ಪ್ರಸ್ತಾವನೆ :

ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ನಿಯಮಿತ, ಪಾಂಡವಪುರ, ಮಂಡ್ಯ ಜಿಲ್ಲೆ, ಇದಕ್ಕೆ ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಮಂಡ್ಯ ಇದು ಸರ್ಕಾರದ ಖಾತರಿಯ ಆಧಾರದ ಮೇಲೆ ಸಾಲಗಳನ್ನು ನೀಡಿದ್ದು, ಈ ಸಾಲಗಳು ಪೂರ್ಣವಾಗಿ ಸುಸ್ತಿಯಾಗಿದ್ದು, ಸುಸ್ತಿ ಸಾಲದ ಅಸಲು ಮತ್ತು ಬಡ್ಡಿಯನ್ನು ಕೊಡಿಸಿಕೊಡುವಂತೆ ರಾಜ್ಯ ಸರ್ಕಾರದ ಖಾತರಿಯನ್ನು ಇನ್‌ವೋಕ್ ಮಾಡಲಾಗಿರುತ್ತದೆ. ಅಲ್ಲದೇ ಪ್ರೊ.ಎ. ವೈದ್ಯನಾಥನ್ ವರದಿಯ ಶಿಫಾರಸ್ಸಿನಂತೆ ರಾಜ್ಯ ಸರ್ಕಾರವು ಬದ್ಧತೆಯುಳ್ಳ ಜವಾಬ್ದಾರಿಗಳನ್ನು ತೀರುವಳಿ ಮಾಡಬೇಕಾಗಿದ್ದು ಅಸಲು ರೂ. 892.54 ಲಕ್ಷ ಮತ್ತು ಬಡ್ಡಿ ರೂ. 608.59 ಲಕ್ಷ ಸೇರಿ ಒಟ್ಟು ರೂ. 1501.13 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿ ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಮೇಲೆ ಓದಲಾದ (1)ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವವನ್ನು ಸಲ್ಲಿಸಿರುವ ಮೇರೆಗೆ, ಆರ್ಥಿಕ ಇಲಾಖೆಯು ಮೇಲೆ ಓದಲಾದ (2)ರ ಆದೇಶದಲ್ಲಿ ರೂ. 1500.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಆದುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಒ 333 ಸಿಎಲ್‌ಎಸ್ 2011 (ಭಾಗ), ಬೆಂಗಳೂರು, ದಿನಾಂಕ : 30–03–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ನಿಯಮಿತ, ಪಾಂಡವಪುರ, ಮಂಡ್ಯ ಜಿಲ್ಲೆ ಇದಕ್ಕೆ ಸಕ್ಕರೆ ಕಾರ್ಖಾನೆಯ ಸಾಲಗಳ ಏಕಕಾಲಿಕ ತೀರುವಳಿ ಉದ್ದೇಶಕ್ಕಾಗಿ ಲೆಕ್ಕಶೀರ್ಷಿಕೆ 6852–02–800–0–01–394 (ಯೋಜನೆ) ಇದರಡಿ ಲಭ್ಯವಿರುವ ಉಳಿತಾಯದ ಅನುದಾನದ ಮೊತ್ತದಿಂದ ರೂ. 1500.00 ಲಕ್ಷಗಳನ್ನು (ಒಂದು ಸಾವಿರದ ಐದುನೂರು ಲಕ್ಷ ರೂಪಾಯಿಗಳು ಮಾತ್ರ) ಲೆಕ್ಕಶೀರ್ಷಿಕೆ 6860–04–101–0–10–394 (ಯೋಜನೆ) ಇದರಡಿ ಮರುಹೊಂದಾಣಿಕೆ ಮೂಲಕ ಭರಿಸಲು ಮಂಜೂರಾತಿ ನೀಡಲಾಗಿದೆ.

ಈ ಹಣವನ್ನು ಸಹಕಾರ ಸಂಘಗಳ ಅಪರ ನಿಬಂಧಕರು (ಪತ್ತು) ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು ಇವರು ಹಣ ಸಂದಾಯ ರಶೀದಿ ಮೂಲಕ ಸಹಕಾರ ಸಂಘಗಳ ನಿಬಂಧಕರ ಮೇಲು ಸಹಿ ಪಡೆದು ಖಜಾನೆಯಿಂದ ಪಡೆಯತಕ್ಕದ್ದು. ಖಜಾನೆಯಿಂದ ಡ್ರಾ ಮಾಡಿದ ಮೊತ್ತವನ್ನು ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿಯಮಿತ, ಬೆಂಗಳೂರು ಇಲ್ಲಿ ಠೇವಣಿಸಿ, ನಂತರ ಅಪೆಕ್ಸ್ ಬ್ಯಾಂಕಿನಲ್ಲಿರುವ ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಚಾಲ್ತಿ ಖಾತೆಗೆ ವರ್ಗಾಯಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 462 ಬಿಆರ್‌ಎಸ್ 2012, ದಿನಾಂಕ : 30–03–2012 ಮತ್ತು ಆರ್ಥಿಕ ಇಲಾಖೆಯ ಆಂತರಿಕ ಟಿಪ್ಪಣಿ ಸಂಖ್ಯೆ : ಎಫ್‌ಡಿ 114 ಇಎಕ್ಸ್‌ಪಿ 2/12, ದಿನಾಂಕ : 30–03–2012 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಬಿ.ಸಿ. ಸತೀಶ್
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಸಹಕಾರ ಇಲಾಖೆ

ಪಿ.ಆರ್. 1168

ಸಹಕಾರ ಸಚಿವಾಲಯ

ವಿಷಯ : ಮೈಸೂರಿನ ವಿದ್ಯಾವರ್ಧಕ ಸಂಘ(ರಿ) ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ : 1. ಸಹಕಾರ ಸಂಘಗಳ ಜಂಟಿ ನಿಬಂಧಕರು, ಸಂಘ ಸಂಸ್ಥೆಗಳು ಇವರ ಪತ್ರ ಸಂಖ್ಯೆ ಆರ್‌ಸಿಎಸ್/ಎಡಿಎಂ/74/ಎಸ್‌ಓಆರ್–3/2008–09, ದಿನಾಂಕ : 02–04–2012.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಮೈಸೂರು ವಿದ್ಯಾವರ್ಧಕ ಸಂಘದ ಬಗ್ಗೆ ಈ ಕೆಳಕಂಡ ಅಂಶಗಳನ್ನು ಪ್ರಸ್ತಾಪಿಸಿರುತ್ತಾರೆ.

1. ಸದರಿ ಸಂಘದ ಆಡಳಿತ ಮಂಡಳಿಯ ಅವಧಿಯು ದಿನಾಂಕ : 29–03–2012 ರಂದು ಮುಕ್ತಾಯಗೊಳ್ಳುತ್ತದೆ.
2. ರಿಟ್ ಅರ್ಜಿ ಸಂಖ್ಯೆ : 6884/2012 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಆಡಳಿತ ಮಂಡಳಿಯ ಚುನಾವಣೆಯನ್ನು 3 ತಿಂಗಳ ಅವಧಿಯವರೆಗೆ ನಡೆಸದಂತೆ ಮಧ್ಯಂತರ ಆದೇಶ ನೀಡಿದೆ. ಆದರೆ ಆಡಳಿತಾಧಿಕಾರಿ ನೇಮಕ ಮಾಡುವ ಸಂಬಂಧ ಯಾವುದೇ ಆದೇಶ ನೀಡಿರುವುದಿಲ್ಲವೆಂದು ವರದಿ ಮಾಡಿರುತ್ತಾರೆ.
3. ಸಂಘದ ಬೈಲಾದಲ್ಲಿ ಬೈಲಾ ಸಂಖ್ಯೆ 5 ಮತ್ತು 6(4)ರನ್ವಯ ಆಡಳಿತ ಮಂಡಳಿಯ ಚುನಾವಣೆ ನಡೆಯದಿದ್ದ ಪಕ್ಷದಲ್ಲಿ ಮುಂದಿನ ಚುನಾವಣೆಯವರೆಗೆ ಮತ್ತು ನೂತನ ಆಡಳಿತ ಮಂಡಳಿ ಅಧಿಕಾರ ವಹಿಸಿಕೊಳ್ಳುವವರೆಗೂ ಪ್ರಸಕ್ತ ಆಡಳಿತ ಮಂಡಳಿ ಅಧಿಕಾರದಲ್ಲಿ ಮುಂದುವರೆಯುವ ಅವಕಾಶವಿರುತ್ತದೆ ಎಂದು ತಿಳಿಸಿರುತ್ತಾರೆ.
4. ಆದರೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27 ಎ(ಬಿ) ರಲ್ಲಿ ತಿಳಿಸಿರುವಂತೆ ಯಾವುದೇ ಕಾರಣಕ್ಕಾಗಲಿ ಹೊಸ ಆಡಳಿತ ಮಂಡಳಿಯನ್ನು ಪ್ರಸಕ್ತ ಆಡಳಿತ ಮುಂಡಳಿಯ ಅವಧಿಯು ಮುಗಿದರೂ ಚುನಾವಣೆ ಮೂಲಕ ರಚಿಸದಿದ್ದರೆ, ಸದರಿ ಸಂಘಕ್ಕೆ ಅವಧಿ ಮುಗಿದ ನಂತರ ಆಡಳಿತಾಧಿಕಾರಿಯನ್ನು ನೇಮಿಸಬಹುದಾಗಿದ್ದು, ಕಾಯ್ದೆಯಲ್ಲಿನ ಕಾನೂನು, ಸಂಘದ ಬೈಲಾ ಅವಕಾಶವನ್ನು over-ride ಮಾಡುತ್ತಾರೆಂಬ ಅಂಶವನ್ನು ಸಹಕಾರ ಸಂಘಗಳ ನಿಬಂಧಕರು ವರದಿ ಮಾಡಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಇ 48 ಸಸಂನೋ 2008, ಬೆಂಗಳೂರು, ದಿನಾಂಕ : 09–04–2012

ವಿದ್ಯಾವರ್ಧಕ ಸಂಘ (ರಿ) ಮೈಸೂರು, ಈ ಸಂಘದ ಆಡಳಿತ ಮಂಡಳಿ ಅವಧಿಯು ದಿನಾಂಕ : 29–03–2012ಕ್ಕೆ ಮುಕ್ತಾಯವಾಗಿದೆ. ಆದ್ದರಿಂದ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27–ಎ(1)(ಸಿ) ರನ್ವಯ ವಿದ್ಯಾವರ್ಧಕ ಸಂಘ (ರಿ), ಮೈಸೂರು, ಈ ಸಂಘಕ್ಕೆ ದಿನಾಂಕ : 30–03–2012 ರಿಂದ ಜಾರಿಗೆ ಬರುವಂತೆ ಆರು (06) ತಿಂಗಳ ಅವಧಿಗೆ ಜಿಲ್ಲಾಧಿಕಾರಿಗಳು ಮೈಸೂರು ಜಿಲ್ಲೆ, ಮೈಸೂರು ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಸದರಿ ಅವಧಿಯಲ್ಲಿ ಸಂಘದಲ್ಲಿ ಹಾಲಿ ಇರುವ ಸದಸ್ಯರಿಂದ ಸಂಘಕ್ಕೆ ಚುನಾವಣೆಯನ್ನು ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸುವವರೆಗೆ ಅಥವಾ ಆರು (06) ತಿಂಗಳ ಅವಧಿಗೆ ಇದರಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ನೇಮಿಸಿದೆ.

ಈ ಆದೇಶವು ರಿಟ್ ಅರ್ಜಿ ಸಂಖ್ಯೆ 6884/2012ರಲ್ಲಿ ರಾಜ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎ.ಎಸ್. ವಿಶ್ವೇಶ್ವರಯ್ಯ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1169 ಸಹಕಾರ ಇಲಾಖೆ

ಸಹಕಾರ ಸಚಿವಾಲಯ

ವಿಷಯ : ಸೆಂಟ್ರಲ್ ಎಜುಕೇಷನ್ ಸೊಸೈಟಿ (ರಿ), ಊರ್ಡಿಗೆರೆ, ತುಮಕೂರು ತಾಲ್ಲೂಕು ಈ ಸಂಸ್ಥೆಗೆ ನೇಮಕ ಮಾಡಿರುವ ಆಡಳಿತಾಧಿಕಾರಿಗಳ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಸಇ 101 ಸಸಂನೋ 2010, ದಿನಾಂಕ : 16–09–2010.
2. ಸರ್ಕಾರದ ಆದೇಶ ಸಂಖ್ಯೆ : ಸಇ 23 ಸಸಂನೋ 2010, ದಿನಾಂಕ : 20–10–2010.
3. ಸರ್ಕಾರದ ಸಮ ಸಂಖ್ಯೆಯ ಆದೇಶ ಸಂಖ್ಯೆ : ಸಇ 23 ಸಸಂನೋ 2010, ದಿನಾಂಕ : 30–07–2011.
4. ಸಹಕಾರ ಸಂಘಗಳ ಜಂಟಿ ನಿಬಂಧಕರು (ಸಂಘ ಸಂಸ್ಥೆಗಳು) ಇವರ ಪತ್ರ ಸಂಖ್ಯೆ ಆರ್‌ಸಿಎಸ್/ಎಡಿಎಂ–135/ಎಸ್‌ಒಆರ್–1/2011–12, ದಿನಾಂಕ : 02–03–2012.

ಪ್ರಸ್ತಾವನೆ :

ಮೇಲೆ (1) (2) ಮತ್ತು (3)ರಲ್ಲಿ ಓದಲಾದ ಆದೇಶಗಳಲ್ಲಿ ಸೆಂಟ್ರಲ್ ಎಜುಕೇಷನ್ ಸೊಸೈಟಿ (ರಿ), ಊರ್ಡಿಗೆರೆ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆಗೆ ನೇಮಕ ಮಾಡಲಾಗಿದ್ದ ಆಡಳಿತಾಧಿಕಾರಿಗಳ ಅವಧಿಯನ್ನು ಸಂಸ್ಥೆಯ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಹಿತದೃಷ್ಟಿಯಿಂದ ಕ್ರಮವಾಗಿ ದಿನಾಂಕ : 19–03–2010 ರಿಂದ 06 ತಿಂಗಳ ಅವಧಿಗೆ, ಮತ್ತು ದಿನಾಂಕ : 19–09–2010 ರಿಂದ ಪುನಃ 6 ತಿಂಗಳ ಅವಧಿಗೆ ಹಾಗೂ ದಿನಾಂಕ : 19–03–2011 ರಿಂದ ಮತ್ತೆ 06 ತಿಂಗಳ ಅವಧಿಗೆ ವಿಸ್ತರಿಸಿ, ಕರ್ನಾಟಕ ನೋಂದಣಿ ಕಾಯ್ದೆಯ ಕಲಂ 30(1) ರಡಿಯಲ್ಲಿ ಹೊಸ ಸದಸ್ಯರುಗಳನ್ನು ನೇಮಿಸಿಕೊಂಡು ಚುನಾವಣೆ ನಡೆಸಿ, ಹೊಸ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (4)ರ ಸಹಕಾರ ಸಂಘಗಳ ಜಂಟಿ ನಿಬಂಧಕರ ಪತ್ರದಲ್ಲಿ ನೂತನ ಆಡಳಿತ ಮಂಡಳಿಗೆ ಆಡಳಿತಾಧಿಕಾರಿಗಳು ಪ್ರಭಾರ ವಹಿಸಿಕೊಡುವಲ್ಲಿ ಕೆಲ ದಿನಗಳ ಅವಧಿಯು ಕೊರತೆ ಇರುವುದರಿಂದ ದಿನಾಂಕ : 19–09–2011 ರಿಂದ ದಿನಾಂಕ : 30–09–2011 ರವರೆಗೆ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸುವ ಪ್ರಸ್ತಾವನೆಯನ್ನು ಪರಿಗಣಿಸಲು ಕೋರಿದ್ದಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಸರ್ಕಾರವು ಆಡಳಿತಾಧಿಕಾರಿ ಅವಧಿಯನ್ನು ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಇ 23 ಸಸಂನೋ 2010, ಬೆಂಗಳೂರು, ದಿನಾಂಕ : 07–04–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಡಳಿತಾಧಿಕಾರಿಗಳು, ಸೆಂಟ್ರಲ್ ಎಜುಕೇಷನ್ ಸೊಸೈಟಿ (ರಿ), ಊರ್ಡಿಗೆರೆ, ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ ಈ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆಡಳಿತಾಧಿಕಾರಿಯಾಗಿ ನೇಮಕವಾಗಿರುವ ಉಪ ವಿಭಾಗಾಧಿಕಾರಿಗಳು, ತುಮಕೂರು ಉಪ ವಿಭಾಗ, ತುಮಕೂರು ಇವರ ಆಡಳಿತಾಧಿಕಾರಿಗಳ ಅವಧಿಯನ್ನು ದಿನಾಂಕ : 19–09–2011 ರಿಂದ 30–09–2011ರ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎ.ಎಸ್. ವಿಶ್ವೇಶ್ವರಯ್ಯ

ಸರ್ಕಾರದ ಅಧೀನ ಕಾರ್ಯದರ್ಶಿ–2

ಸಹಕಾರ ಇಲಾಖೆ

ಪಿ.ಆರ್. 1170

ಶಿಕ್ಷಣ ಸಚಿವಾಲಯ

ವಿಷಯ : ಶ್ರೀಮತಿ ಎ.ದೇಜಮ್ಮ, ಅರೆಕಾಲಿಕ ವಾಣಿಜ್ಯಶಾಸ್ತ್ರ ಉಪನ್ಯಾಸಕರು, ಕೆನರಾ ಕಾಲೇಜು, ಮಂಗಳೂರು ಇವರ ಸೇವಾ ಸಕ್ರಮಾತಿ ಬಗ್ಗೆ.

ಓದಲಾಗಿದೆ : **1.** ಕಾಲೇಜು ಶಿಕ್ಷಣ ಆಯುಕ್ತರ ಪತ್ರ ಸಂಖ್ಯೆ : ಕಾಶಿಇ : 21 : ಅಕಾಉ/2005–06/ನೇ.ವಿ., ದಿನಾಂಕ: 06–02–2012.

ಪ್ರಸ್ತಾವನೆ :

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ದಿನಾಂಕ : 06–02–2012ರ ಪ್ರಸ್ತಾವನೆಯಲ್ಲಿ ಶ್ರೀಮತಿ ದೇಜಮ್ಮ, ವಾಣಿಜ್ಯಶಾಸ್ತ್ರ ಅರೆಕಾಲಿಕ ಉಪನ್ಯಾಸಕರು, ಕೆನರಾ ಕಾಲೇಜು, ಮಂಗಳೂರು ಇವರು ಸಾಮಾನ್ಯ ವರ್ಗಕ್ಕೆ ಸೇರಿದವರಾಗಿದ್ದು, ಕೆನರಾ ಕಾಲೇಜು, ಮಂಗಳೂರು ಇಲ್ಲಿ ಖಾಲಿ ಇರುವ ವಾಣಿಜ್ಯಶಾಸ್ತ್ರ ವಿಷಯದ ಹುದ್ದೆಯು ಪರಿಶಿಷ್ಟ ಜಾತಿ ಅಭ್ಯರ್ಥಿಗೆ ಮೀಸಲಾಗಿರುವುದರಿಂದ, ಮಂಗಳೂರಿನ ಬೆಸೆಂಟ್ ಮಹಿಳಾ ಕಾಲೇಜಿನಲ್ಲಿ ತೆರವಾದ ಹುದ್ದೆಯನ್ನು ಪರಿಶಿಷ್ಟ ಜಾತಿಗೆ ಸೇರಿದ ಅಭ್ಯರ್ಥಿ ಮೂಲಕ ಭರ್ತಿ ಮಾಡಬೇಕಾಗಿದೆ ಎಂದು ಆಡಳಿತ ಮಂಡಳಿಯು ತಿಳಿಸಿರುವುದರಿಂದ, ಕೆನರಾ ಕಾಲೇಜಿನ ವಾಣಿಜ್ಯ ವಿಭಾಗದಲ್ಲಿ 2 ಉಪನ್ಯಾಸಕರ ಹುದ್ದೆಗಳು ಖಾಲಿ ಇರುವುದರಿಂದ (ಮೂರು ಮಂಜೂರಾದ ಅನುದಾನಿತ ಹುದ್ದೆಗಳ ಪೈಕಿ ಪ್ರಸ್ತುತ ಒಬ್ಬರು ಮಾತ್ರ ಸೇವೆಯಲ್ಲಿದ್ದು/ಎರಡು ಹುದ್ದೆಗಳು ನಿವೃತ್ತಿಯಿಂದ ತೆರವಾಗಿರುತ್ತದೆ) ಸಂಬಂಧಿಸಿದ ಕಾಲೇಜಿನ ಆಡಳಿತ ಮಂಡಳಿಯು ಶ್ರೀಮತಿ ದೇಜಮ್ಮ ಇವರನ್ನು ಕೆನರಾ ಕಾಲೇಜಿನಲ್ಲಿಯೇ ಸಕ್ರಮಾತಿ ಮಾಡಬೇಕೆಂದು ಕೋರಿ ಠರಾವು ಮಾಡಿ ಒಪ್ಪಿದ್ದು, ಸದರಿ ಕೆನರಾ ಕಾಲೇಜಿನಲ್ಲಿ ವಾಣಿಜ್ಯಶಾಸ್ತ್ರ ವಿಷಯದಲ್ಲಿ 2011–12ನೇ ಸಾಲಿನಲ್ಲಿ 62 ಗಂಟೆಗಳ ಕಾರ್ಯಭಾರವಿದ್ದು, ಹಾಲಿ ಒಬ್ಬ ಖಾಯಂ ಉಪನ್ಯಾಸಕರಿಗೆ 16 ಗಂಟೆಗಳು ಹಂಚಿದಲ್ಲಿ 46 ಗಂಟೆಗಳ ಕಾರ್ಯಭಾರ ಉಳಿಯುವುದಾಗಿ ತಿಳಿಸಿರುತ್ತಾರೆ. ಸದರಿ ಪ್ರಕರಣಕ್ಕೆ ಹೋಲುವ ಪ್ರಕರಣದಲ್ಲಿ ಅಂದರೆ ನಿಗದಿತ ಅರ್ಜಿ ಸಲ್ಲಿಸದೇ ಇದ್ದ ಪ್ರಯುಕ್ತ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ : 31445/2008 ಅನ್ನು ಶ್ರೀ ಅಜಿತ್ ಕುಮಾರ್ ಇವರು ಸಲ್ಲಿಸಿದ್ದು, ಸದರಿ ರಿಟ್ ಅರ್ಜಿಯು ದಿನಾಂಕ : 06–07–2010 ರಂದು ವಿಲೇಯಾಗುತ್ತಾ, 1993–94 ಮತ್ತು 1994–95ನೇ ಸಾಲಿನಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದಂತಹ ವ್ಯಕ್ತಿಯ ಸೇವಾ ಸಕ್ರಮಾತಿ ಕೋರಿಕೆಯನ್ನು ಅವರು ನಿಗದಿತ ಅರ್ಜಿ ಸಲ್ಲಿಸದ ಪ್ರಯುಕ್ತ ತಿರಸ್ಕರಿಸುವುದು ಸಮಂಜಸವಲ್ಲವೆಂದು ಹಾಗೂ ಸದರಿಯವರ ಸೇವಾ ಸಕ್ರಮಾತಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತೀರ್ಪು ನೀಡಿರುತ್ತದೆ. 2011–12ನೇ ಸಲಿನ ಕಾರ್ಯಭಾರ ಪಟ್ಟಿಯಲ್ಲಿ ಯುಜಿಸಿ ನಿಯಮಾವಳಿ ಪ್ರಕಾರ 46 ಗಂಟೆಗಳ ಕಾರ್ಯಭಾರವಿರುವುದಾಗಿ, ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು 2003ರ ಪ್ರಕಾರ ಖಾಸಗಿ ಕಾಲೇಜಿನ ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಹಾಗೂ ಸೇವಾ ಸಕ್ರಮಾತಿಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಆದುದರಿಂದ, ಸಾಮಾನ್ಯ ವರ್ಗಕ್ಕೆ ಸೇರಿದ ಶ್ರೀಮತಿ ದೇಜಮ್ಮ ಇವರಿಗೆ 16 ಗಂಟೆಗಳ ಕಾರ್ಯಭಾರದೊಂದಿಗೆ ಸೇವಾ ಸಕ್ರಮಾತಿಗೊಳಿಸಿ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗೆ ಶ್ರೀ ಸುರೇಶ್ ಕುಮಾರ್ ನಂದಗಾಂವ್ ಇವರ ಪ್ರಕರಣದಲ್ಲಿ ತೆಗೆದುಕೊಂಡ ತೀರ್ಮಾನದಂತೆ ಶ್ರೀಮತಿ ದೇಜಮ್ಮ ಇವರು ನಿಗದಿತ ಅರ್ಜಿ ಸಲ್ಲಿಸದಿರುವುದನ್ನು ಮನ್ನಾ ಮಾಡಿ ಸದರಿಯವರ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55% ಕ್ಕಿಂತ ಹೆಚ್ಚು ಅಂಕ ಹಾಗೂ ಎಂ.ಫಿಲ್. ಪದವಿ ಪಡೆದ ಪ್ರಯುಕ್ತ ಅವರ ಸೇವೆಯನ್ನು ಯುಜಿಸಿ ವೇತನ ಶ್ರೇಣಿಯಡಿ ಸೇವಾ ಸಕ್ರಮಾತಿಗೊಳಿಸಲು ತೀರ್ಮಾನ ಕೈಗೊಳ್ಳಲಾಗಿರುವ ಹಿನ್ನೆಲೆಯಲ್ಲಿ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಡಿ 106 ಯುಪಿಸಿ 2012, ಬೆಂಗಳೂರು, ದಿನಾಂಕ : 10–04–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ದೇಜಮ್ಮ, ವಾಣಿಜ್ಯಶಾಸ್ತ್ರ ಅರೆಕಾಲಿಕ ಉಪನ್ಯಾಸಕರು, ಕೆನರಾ ಕಾಲೇಜು, ಮಂಗಳೂರು ಇವರು ನಿಗದಿತ ಅರ್ಜಿ ಸಲ್ಲಿಸದಿರುವುದನ್ನು ಮನ್ನಾ ಮಾಡಿ ಸದರಿಯವರ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55% ಕ್ಕಿಂತ ಹೆಚ್ಚು ಅಂಕ ಹಾಗೂ ಎಂ.ಫಿಲ್. ಪದವಿ ಪಡೆದ ಪ್ರಯುಕ್ತ ಅವರ ಸೇವೆಯನ್ನು ಯುಜಿಸಿ ವೇತನ ಶ್ರೇಣಿಯಡಿ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಖಾಲಿ ಇರುವ ಹುದ್ದೆಗೆ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಕೆಳಕಂಡ ಷರತ್ತುಗಳಿಗೊಳಪಡಿಸಿ ವೇತನಾನುದಾನಕ್ಕೆ ಒಳಪಡಿಸಿ ಆದೇಶಿಸಲಾಗಿದೆ.

ಈ ಸಂಬಂಧ ಉಂಟಾಗಿರುವ ವೇತನ ವೆಚ್ಚವನ್ನು ಪ್ರಸಕ್ತ ಆರ್ಥಿಕ ವರ್ಷದಲ್ಲಿ ಇಲಾಖೆಗೆ ಒದಗಿಸಿರುವ ಅಯವ್ಯಯ ಹಂಚಿಕೆಯಲ್ಲಿ ಭರಿಸಿಕೊಳ್ಳಲು ಆದೇಶಿಸಿದೆ.

ಕ್ರಮ ಸಂಖ್ಯೆ	ಉಪನ್ಯಾಸಕರ ಹೆಸರು	ಖಾಲಿ ಹುದ್ದೆ ವಿವರ	ನೇಮಕಾತಿ ದಿನಾಂಕ	ಅನುದಾನಕ್ಕೆ ಒಳಪಟ್ಟಿರುವ ವಿಷಯ	ವೇತನ ಶ್ರೇಣಿ
1	ಶ್ರೀಮತಿ ದೇಜಮ್ಮ, ವಾಣಿಜ್ಯಶಾಸ್ತ್ರ ಅರೆಕಾಲಿಕ ಉಪನ್ಯಾಸಕರು	ಕೆನರಾ ಕಾಲೇಜು, ಮಂಗಳೂರು, (ಮೂರು ಮಂಜೂರಾದ ಹುದ್ದೆಗಳಿದ್ದು ಎರಡು ಹುದ್ದೆಗಳು ನಿವೃತ್ತಿಯಿಂದ ತೆರವಾಗಿರುತ್ತವೆ)	05–08–1993	ವಾಣಿಜ್ಯಶಾಸ್ತ್ರ	ಯುಜಿಸಿ

1. ಆದೇಶ ಸಂಖ್ಯೆ : ಇಡಿ 146 ಯುಪಿಸಿ 1979, ದಿನಾಂಕ : 03–10–1981 ಮತ್ತು ಈ ನಿಟ್ಟಿನಲ್ಲಿ ಆಗಿಂದಾಗ್ಗೆ ಹೊರಡಿಸಿರುವ ತಿದ್ದುಪಡಿ ಹಾಗೂ ಸ್ಪಷ್ಟೀಕರಣಗಳಿಗೆ ನಿಗದಿಪಡಿಸಿದ ಕಾರ್ಯಭಾರವನ್ನು ಹೊಂದಿರತಕ್ಕದ್ದು, ಅಲ್ಲದೆ ಮುಂದೆ ಸರ್ಕಾರ ವಿಧಿಸಬಹುದಾದ ಯಾವುದೇ ಷರತ್ತಿಗೊಳಪಟ್ಟಿರತಕ್ಕದ್ದು.
2. ಇನ್ನು ಮುಂದೆ ಭವಿಷ್ಯಾನುಸಾರ ಭರ್ತಿ ಮಾಡಬೇಕಾಗಿರುವ ಹುದ್ದೆಗಳಿಗೆ ಸಕ್ಷಮ ಅಧಿಕಾರಿಯಿಂದ ಪೂರ್ವಾನುಮತಿಯನ್ನು ಪಡೆಯತಕ್ಕದ್ದು.
3. ನೇರ ನೇಮಕಾತಿ, ಬಡ್ತಿ ಮತ್ತು ವಿದ್ಯಾರ್ಥಿಗಳ ಪ್ರವೇಶದ ವಿಷಯದಲ್ಲಿ ಕಾಲಕಾಲಕ್ಕೆ ಹೊರಡಿಸುವ ಸರ್ಕಾರಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
4. ಪ್ರವೇಶಾವಕಾಶದಲ್ಲಿ ನಿಗದಿಪಡಿಸಿರುವ ವಿದ್ಯಾರ್ಥಿಗಳ ಕನಿಷ್ಠ ಪ್ರಮಾಣವನ್ನು ವಿವರವಾಗಿ ಅನುಸರಿಸತಕ್ಕದ್ದು.
5. ಮುಂದೆ ಉದ್ಭವಿಸುವ ಹುದ್ದೆಗಳನ್ನು ಬ್ಯಾಕ್ ಲಾಗ್ ರಿಕ್ತಸ್ಥಾನಗಳೆಂದು ಪರಿಗಣಿಸಿ ಅವುಗಳನ್ನು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಮೀಸಲಾತಿಯ ಅನುಪಾತದನ್ವಯ ರಿಕ್ತಸ್ಥಾನ ತುಂಬುವತನಕ ಮುಂದುವರೆಸಿ ನೇಮಕಾತಿ ಮಾಡತಕ್ಕದ್ದು ಮತ್ತು ಈ ದಿಸೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಆದೇಶವನ್ನು ಪಾಲಿಸತಕ್ಕದ್ದು.
6. ಸದರಿ ಕಾಲೇಜಿನಲ್ಲಿ ಇನ್ನು ಮುಂದೆ ನೌಕರರ ರಾಜೀನಾಮೆ, ನಿವೃತ್ತಿ ಮತ್ತು ನಿಧನದಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬುವಾಗ ಸರ್ಕಾರದ ಮೀಸಲಾತಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
7. ಈ ಉಪನ್ಯಾಸಕರು ನೇಮಕಾತಿ ಹೊಂದಿದ ದಿನಾಂಕದಂದು ಹಾಗೂ ತದನಂತರ ಹೊಂದಿರುವ ವಿದ್ಯಾರ್ಹತೆಯನ್ವಯ ಇವರುಗಳಿಗೆ ವೇತನ ಶ್ರೇಣಿಯನ್ನು ನಿಗದಿಪಡಿಸತಕ್ಕದ್ದು.
8. ಸದರಿ ಉಪನ್ಯಾಸಕರಿಗೆ ವೇತನಾನುದಾನ ಬಿಡುಗಡೆ ಮಾಡುವ ಮುನ್ನ ನಿಯಮಗಳ ಪ್ರಕಾರ ವಯೋಮಿತಿ : ವಿದ್ಯಾರ್ಹತೆ ಮತ್ತಿತರ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಯು.ಬಿ. ಉಳವಿ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1171 ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಶಿಕ್ಷಣ ಸಚಿವಾಲಯ

ವಿಷಯ: ಶ್ರೀ ಬಿ. ನಾರಾಯಣ, ಹಿರಿಯ ಸಹಾಯಕ ನಿರ್ದೇಶಕರು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, (ಪ್ರಸ್ತುತ ನಿವೃತ್ತಿ) ಇವರ ಹಿಂದಿನ ಸೇವೆಯನ್ನು ಅರ್ಹತಾದಾಯಕ ಸೇವೆ ಎಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ: 1) ಆಯುಕ್ತರು, ಸಾ.ಶಿ.ಇ., ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿ1(6)ಅ.ಸೇ.ಸೇ– 44/2008–09, ದಿ: 19.03.2009.

2) ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಿ1(6)ಅ.ಸ.ಸೇ–44/2008–09 ದಿನಾಂಕ: 05.09.2011.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರದಲ್ಲಿ ಶ್ರೀ ಬಿ. ನಾರಾಯಣ, ಹಿರಿಯ ಸಹಾಯಕ ನಿರ್ದೇಶಕರು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, ಇವರು ದಿನಾಂಕ: 24.10.1984 ರಂದು 30 ವರ್ಷ ಮೀರಿದ ನಂತರ ಸರ್ಕಾರಿ ಸೇವೆಗೆ ಸೇರಿಕೊಂಡಿದ್ದು, ಸದರಿ ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ) ಪ್ರಕಾರ ನಿವೃತ್ತಿ ವೇತನಕ್ಕೆ ಅರ್ಹತಾದಾಯಕ ಸೇವೆಯನ್ನು ಪರಿಗಣಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(2)ರ ದಿನಾಂಕ: 05.09.2011ರ ಪತ್ರದಲ್ಲಿ ಬಿ. ನಾರಾಯಣ, ಹಿರಿಯ ಸಹಾಯಕ ನಿರ್ದೇಶಕರು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, ಇವರು ದಿನಾಂಕ: 31.08.2011ರಂದು ವಯೋ ನಿವೃತ್ತಿ ಹೊಂದುತ್ತಿರುವುದರಿಂದ ಸದರಿಯವರಿಗೆ ಕರ್ನಾಟಕ

ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ)ರಂತೆ ದೊರೆಯುವ ಹೆಚ್ಚುವರಿ ಸೇವೆಯನ್ನು ಅರ್ಹತಾದಾಯಕ ಸೇವೆ ಸೇರಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ

ಸರ್ಕಾರದ ಆದೇಶ ಸಂಖ್ಯೆ : ಇಡಿ 130 ಡಿಜಿಎಂ 2009, ಬೆಂಗಳೂರು, ದಿನಾಂಕ 07ನೇ ಏಪ್ರಿಲ್ 2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಬಿ. ನಾರಾಯಣ, ಹಿರಿಯ ಸಹಾಯಕ ನಿರ್ದೇಶಕರು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ)(1) ರನ್ವಯ 3 ವರ್ಷಗಳ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ಅವರ ನಿವೃತ್ತಿ ಸೌಲಭ್ಯಗಳಿಗೆ ಮಾತ್ರ ಸೇರ್ಪಡೆ ಮಾಡಿ ಆದೇಶಿಸಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಶಿಇ 521 ಐಎಫ್ಎಸ್ 2008, ದಿನಾಂಕ: 30.04.2009 ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 1218 ಸೇ–3/ 2011, ದಿನಾಂಕ: 28.11.2011 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1172

ಎಸ್. ಬಿ. ಸಸಾಲಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ,

ಶಿಕ್ಷಣ ಇಲಾಖೆ (ಆಡಳಿತ & ಸಮಿತಿಗಳು)

ಶಿಕ್ಷಣ ಸಚಿವಾಲಯ

ವಿಷಯ: ರಾಜ್ಯದ ಪಠ್ಯಕ್ರಮದ ಸಮಗ್ರ ಪರಿಷ್ಕರಣೆ ಹಾಗೂ ಪಠ್ಯಪುಸ್ತಕದ ರಚನಾ ಕಾರ್ಯಕ್ರಮಕ್ಕೆ ಸಂಯೋಜಕರನ್ನಾಗಿ ನೇಮಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಇಡಿ 15 ಯೋಯೋಕ 2010, ದಿನಾಂಕ: 23.01.2010 ಹಾಗೂ 27.8.2010.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ), ಬೆಂಗಳೂರುರವರ ಪತ್ರ ಸಂಖ್ಯೆ: ಎ1/ಕಪಪುಸಂ ಇತರೆ42/09– ದಿ: 17.09.2011

3) ಸರ್ಕಾರಿ ಆದೇಶ ಸಂಖ್ಯೆ:– ಇಡಿ 15 ಯೋಯೋಕ 2010 ದಿನಾಂಕ 29/11/2011.

ಪ್ರಸ್ತಾವನೆ:

1. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇಲೆ ಓದಲಾದ (1)ರ ಎನ್.ಸಿ.ಎಫ್–2005ರ ಮಾರ್ಗಸೂಚಿಯಂತೆ ರಾಜ್ಯ ಪಠ್ಯಕ್ರಮದ ಸಮಗ್ರ ಪರಿಷ್ಕರಣೆ ಹಾಗೂ ಪಠ್ಯಪುಸ್ತಕ ರಚನಾ ಕಾರ್ಯಕ್ರಮಗಳ ಮೇಲ್ವಿಚಾರಣೆ ಹಾಗೂ ಇಲಾಖೆ ಮತ್ತು ಸರ್ಕಾರದೊಂದಿಗೆ ಸಂಯೋಜನೆ ಮಾಡಲು ಶ್ರೀ ಜಿ.ಎಸ್ ಮುಡಂಬಡಿತ್ತಾಯ, ನಿವೃತ್ತಿ ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರನ್ನು ಸಂಯೋಜಕರನ್ನಾಗಿ ನೇಮಿಸಿ ದಿನಾಂಕ: 01–02–2010ರಿಂದ ಆರು ತಿಂಗಳ ಅವಧಿಗೆ ಆದೇಶ ಹೊರಡಿಸಲಾಗಿತ್ತು. ಹಾಗೂ ದಿನಾಂಕ: 27.8.10ರ ಸರ್ಕಾರಿ ಆದೇಶದಲ್ಲಿ ದಿ: 1.4.2010ರಿಂದ 30.09.2011ರವರೆಗೆ ಮುಂದುವರೆಸಿ ಆದೇಶ ಹೊರಡಿಸಲಾಗಿದೆ.
2. ಮೇಲೆ ಓದಲಾದ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರುರವರು ಎನ್.ಸಿ.ಎಫ್–2005ರ ಮಾರ್ಗಸೂಚಿಯಂತೆ ರಾಜ್ಯ ಪಠ್ಯಕ್ರಮದ ಸಮಗ್ರ ಪರಿಷ್ಕರಣೆ ಹಾಗೂ ರಾಜ್ಯ ಪಠ್ಯಪುಸ್ತಕ ರಚನಾ ಕಾರ್ಯಕ್ರಮಗಳ ಮೇಲ್ವಿಚಾರಣೆ ಮಾಡಲು ಹಾಗೂ 1,2,3,4,5 ಮತ್ತು 8ನೇ ತರಗತಿಗಳ ನೂತನ ಪಠ್ಯಪುಸ್ತಕಗಳು ಪೂರ್ಣಗೊಳ್ಳುವ ಹಂತದಲ್ಲಿ 6,7,9 ಮತ್ತು 10ನೇ ತರಗತಿಗಳ ಪಠ್ಯಪುಸ್ತಕಗಳು ರಚನಾ ಕಾರ್ಯ ಪ್ರಾರಂಭವಾಗಬೇಕಿದೆ. ಆದ್ದರಿಂದ, ಶ್ರೀ ಜಿ.ಎಸ್ ಮುಡಂಬಡಿತ್ತಾಯ, ನಿವೃತ್ತ ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರನ್ನು ಸಂಯೋಜಕರನ್ನಾಗಿ ನೇಮಿಸಲಾಗಿದ್ದು, ಸದರಿಯವರ ಅವಧಿಯು 31–03–2012ಕ್ಕೆ ಮುಗಿದಿರುವುದರಿಂದ ದಿನಾಂಕ: 01.04.2012ರಿಂದ 30.09.2012ರವರೆಗೆ ಮುಂದುವರೆಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 15 ಯೋಯೋಕ 2010 ದಿನಾಂಕ 29–11–2011ರಲ್ಲಿ ಆದೇಶಿಸಿದ ಅವಧಿಯು 31–03–2012ಕ್ಕೆ ಮುಗಿದಿರುವುದರಿಂದ ದಿನಾಂಕ 01–4–2012 ರಿಂದ 30–09–2012 ರವರೆಗೆ ಆರು ತಿಂಗಳು ಮುಂದುವರಿಸಲು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಡಿ 80 ಯೋಯೋಕ 2012 ಬೆಂಗಳೂರು, ದಿನಾಂಕ 11–04–2012

4. ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪರಿಶೀಲಿಸಿ ಶ್ರೀ ಜಿ.ಎಸ್. ಮುಡಂಬಡಿತ್ತಾಯ, ನಿವೃತ್ತ ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರನ್ನು ಎನ್.ಸಿ.ಎಫ್–2005ರ ಮಾರ್ಗಸೂಚಿಯಂತೆ ರಾಜ್ಯ ಪಠ್ಯಕ್ರಮದ ಸಮಗ್ರ ಪರಿಷ್ಕರಣೆ ಹಾಗೂ ಪಠ್ಯಪುಸ್ತಕ ರಚನಾ ಕಾರ್ಯದ ಮೇಲ್ವಿಚಾರಣೆ ಮಾಡಲು ಸಂಯೋಜಕರನ್ನಾಗಿ (ಗುತ್ತಿಗೆ ಆಧಾರದ ಮೇಲೆ) ದಿನಾಂಕ: 1–4–2012 ರಿಂದ 30–09–2012ರ ಆರು ತಿಂಗಳ ಅವಧಿಗೆ ನೇಮಕ ಮಾಡಿ ಮುಂದುವರೆಸಲಾಗಿದೆ.
5. ಸದರಿಯವರಿಗೆ ಮೇಲ್ಕಂಡ ಅವಧಿಗೆ ಮಾಹೆಯಾನ 10,000ರೂಗಳಂತೆ ಪಠ್ಯಪುಸ್ತಕ ಸಂಘಕ್ಕೆ ಒದಗಿಸಿರುವ ಅನುದಾನದ ಮಿತಿಯೊಳಗೆ ಭರಿಸುವಂತೆ ಸೂಚಿಸಲಾಗಿದೆ.
6. ಸದರಿಯವರಿಗೆ ಸಚಿವಾಲಯ ಸಿಬ್ಬಂದಿ ಮತ್ತು ವಾಹನ ಸೌಲಭ್ಯ ಡಿ.ಎಸ್.ಎ.ಆರ್.ಟಿ ಕಟ್ಟಡದಲ್ಲಿ ಕರ್ನಾಟಕ ಪಠ್ಯಪುಸ್ತಕ ಸಂಘವು ಒದಗಿಸುವುದು.

7. ನಿರ್ವಹಿಸಬೇಕಾದ ಕಾರ್ಯಗಳನ್ನು ಸದರಿಯವರು ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಪಠ್ಯಪುಸ್ತಕ ಸಂಘ ಇವರಿಬ್ಬರೂ ಸೇರಿ ಸಮಾಲೋಚಿಸಿ/ಚರ್ಚಿಸಿ, ಯಶಸ್ವಿಯಾಗಿ ನಿರ್ವಹಿಸುವಲ್ಲಿ ತೀರ್ಮಾನ ತೆಗೆದುಕೊಳ್ಳುವುದು.
8. ಸದರಿಯವರು ತಿಂಗಳಿಗೊಮ್ಮೆ ಪಠ್ಯಪುಸ್ತಕ ರಚನೆ ಬಗ್ಗೆ ಆಗುತ್ತಿರುವ ಪ್ರಗತಿಯನ್ನು ಸರ್ಕಾರಕ್ಕೆ ವರದಿ ಮಾಡುವಂತೆ ಸೂಚಿಸಲಾಗಿದೆ.
9. ಈ ಆದೇಶವನ್ನು ಶಿಕ್ಷಣ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಅನಧಿಕೃತ ಟಿಪ್ಪಣಿ ಸಂಖ್ಯೆ: ಶಿಇ 97 ಐಎಫ್ (ಬಿ&ಎ) 2010, ದಿನಾಂಕ: 13–01–2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಐ.ಎಫ್. ಮಾಗಿ

ವಿಶೇಷಾಧಿಕಾರಿ ಹಾಗೂ ಪದನಿಮಿತ್ತ

ಪಿ.ಆರ್. 1173 ಸರ್ಕಾರದ ಅಧೀನ ಕಾರ್ಯದರ್ಶಿ,

ಶಿಕ್ಷಣ ಇಲಾಖೆ (ಯೋಜನೆ)

ಶಿಕ್ಷಣ ಸಚಿವಾಲಯ

ವಿಷಯ: ಯಕ್ಷಗಾನ ವಿಷಯಕ್ಕೆ ಸಂಬಂಧಿಸಿದ ಪ್ರಾಥಮಿಕ ಹಂತ ಮತ್ತು ಮಾಧ್ಯಮಿಕ ಹಂತದ ಪಠ್ಯವಸ್ತುವನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1) ದಿನಾಂಕ: 12.05.2010 ರ ಸರ್ಕಾರದ ಆದೇಶ ಸಂಖ್ಯೆ ಇಡಿ 37 ಎಸ್‌ಟಿಬಿ 2010

2) ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯಪುಸ್ತಕ ಸಂಘ ಇವರ ದಿನಾಂಕ: 17.12.2011ರ ಪತ್ರ ಸಂಖ್ಯೆ: ಕ.ಪ.ಪು.ಸಂ/ಯ.ಪ.ವ.ಅ/01/2011–12.

ಪ್ರಸ್ತಾವನೆ:

1. ಮೇಲೆ 1 ರಲ್ಲಿ ಓದಲಾದ ದಿನಾಂಕ: 12.05.2010ರ ಆದೇಶದಲ್ಲಿ ಪ್ರಾಥಮಿಕ ಶಿಕ್ಷಣದಲ್ಲಿ ಯಕ್ಷಗಾನ– ಯಕ್ಷಗಾನ ಶಿಕ್ಷಣ ಎಂಬ ವಿಷಯದಲ್ಲಿ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ) ಬೆಂಗಳೂರು ಇವರಿಂದ ಪರೀಕ್ಷೆ ನಡೆಸಿ ಪ್ರಮಾಣ ಪತ್ರ ನೀಡಲು ಅನುಮೋದಿಸಿ ಸರ್ಕಾರದ ಆದೇಶ ಹೊರಡಿಸಲಾಗಿತ್ತು.
2. ಮೇಲೆ (2)ರಲ್ಲಿ ಓದಲಾದಂತೆ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯಪುಸ್ತಕ ಸಂಘ ಇವರು ಯಕ್ಷಗಾನ ವಿಷಯದಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು) ಬೆಂಗಳೂರು ಇವರಿಂದ ಪರೀಕ್ಷೆ ನಡೆಸಿ ಪ್ರಮಾಣ ಪತ್ರ ನೀಡಲು ಆದೇಶವಾಗಿರುತ್ತದೆ. ಆದರೆ ಯಕ್ಷಗಾನ ಪಠ್ಯವಸ್ತುವನ್ನು ಸರ್ಕಾರವು ಅನುಮೋದನೆ ಮಾಡಿರುವುದಿಲ್ಲವಾದ ಕಾರಣ ಯಕ್ಷಗಾನ ವಿಷಯಕ್ಕೆ ಸಂಬಂಧಿಸಿದ ಪ್ರಾಥಮಿಕ ಹಂತ ಮತ್ತು ಮಾಧ್ಯಮಿಕ ಹಂತದ ಪಠ್ಯವಸ್ತುವನ್ನು ಅನುಮೋದಿಸಲು ಕೋರಿರುವರು. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಡಿ 184 ಎಸ್.ಟಿ.ಬಿ 2011, ಬೆಂಗಳೂರು, ದಿನಾಂಕ 03.04.2012

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಯಕ್ಷಗಾನದ ಪ್ರಾಥಮಿಕ ಹಂತ ಮತ್ತು ಮಾಧ್ಯಮಿಕ ಹಂತದ ಪಠ್ಯವಸ್ತುವನ್ನು ಸರ್ಕಾರವು ಅನುಮೋದಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್. ಬಿ. ಪಟಗಾರ್

ಪಿ.ಆರ್. 1174 ಸರ್ಕಾರದ ಅಧೀನ ಕಾರ್ಯದರ್ಶಿ,

ಶಿಕ್ಷಣ ಇಲಾಖೆ (ಸಾಮಾನ್ಯ)

ಶಿಕ್ಷಣ ಸಚಿವಾಲಯ

ವಿಷಯ: ಎನ್.ಎಫ್.ಸಿ 2005 ರ ಆಧಾರಿತ ಸಿದ್ಧಪಡಿಸಿರುವ 6 ರಿಂದ 10ನೇ ತರಗತಿವರೆಗಿನ ಉರ್ದು ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಪಠ್ಯಪುಸ್ತಕದಲ್ಲಿ ಅಳವಡಿಸಲು ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ದಿನಾಂಕ: 03.08.2010 ಸರ್ಕಾರದ ಆದೇಶ ಸಂಖ್ಯೆ ಇಡಿ 73ಎಸ್ ಟಿಬಿ 2009.

2) ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯಪುಸ್ತಕ ಸಂಘ ಇವರದಿನಾಂಕ: 17.02.2012ರ ಪತ್ರ ಸಂಖ್ಯೆ:ಕ.ಪ.ಪು.ಸಂ/ಉತೃಭಾಪವಅ/ 03/2011–12.

ಪ್ರಸ್ತಾವನೆ:

1. ಮೇಲೆ 1 ರಲ್ಲಿ ಓದಲಾದ ದಿನಾಂಕ: 03.08.2011ರ ಆದೇಶದಲ್ಲಿ 2010–11ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರರೆಗೆ ಉರ್ದು ಭಾಷೆಯನ್ನು ತೃತೀಯ ಭಾಷೆಯಾಗಿ ಪರಿಗಣಿಸಿ ಪಠ್ಯ ಪುಸ್ತಕ ಕ್ರಮದಲ್ಲಿ ಅಳವಡಿಸಲು ಹಾಗೂ 10ನೇ ತರಗತಿಗೆ ಸಂಬಂಧಿಸಿದಂತೆ ಉರ್ದು ತೃತೀಯ ಭಾಷೆಗೆ ನಿಯಮಾನುಸಾರ ಪ್ರಶ್ನೆ ಪತ್ರಿಕೆ ತಯಾರಿಸಲು ಅನುಮತಿ ನೀಡಿ ಸರ್ಕಾರದ ಆದೇಶ ಹೊರಡಿಸಲಾಗಿದೆ.
2. ಮೇಲೆ (2)ರಲ್ಲಿ ಓದಲಾದಂತೆ ದಿನಾಂಕ: 17.02.2012ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯ ಪುಸ್ತಕ ಸಂಘ ಇವರು ಪ್ರಸ್ತಾವನೆ ಸಲ್ಲಿಸುತ್ತಾ ಎನ್.ಸಿ.ಎಫ್ 2005ರ ಆಧಾರಿತವಾಗಿ 1 ರಿಂದ 10ನೇ ತರಗತಿವರೆಗೆ (ಉರ್ದು ತೃತೀಯ ಭಾಷೆ ಹೊರತುಪಡಿಸಿ) ಎಲ್ಲಾ ಪಠ್ಯ ಪುಸ್ತಕಗಳಿಗೂ ಕರ್ನಾಟಕ ಪಠ್ಯಪುಸ್ತಕ ಸಂಘದ ವತಿಯಿಂದ ನೂತನವಾಗಿ ರಚನೆ ಮಾಡಲಾಗುತ್ತಿದ್ದು ಅದೇ ರೀತಿ ತೃತೀಯ ಭಾಷೆ ಉರ್ದು ಪಠ್ಯ ಪುಸ್ತಕಗಳು ಸಹ ರಚನೆಯಾಗಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಡಿ.ಎಸ್.ಇ.ಆರ್.ಟಿ ಯಿಂದ NCF 2005ರ

ಆಧಾರಿತವಾಗಿ ಸಿದ್ದಗೊಂಡಿರುವ 6 ರಿಂದ 10ನೇ ತರಗತಿವರೆಗಿನ ಉರ್ದು ತೃತೀಯ ಭಾಷೆಯ ಪಠ್ಯ ವಸ್ತುವಿನ ಶುದ್ಧ ಪ್ರತಿಯನ್ನು ಅನುಮೋದಿಸುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಡಿ 25 ಎಸ್.ಟಿ.ಬಿ 2012, ಬೆಂಗಳೂರು, ದಿನಾಂಕ 03.04.2012

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಡಿ.ಎಸ್.ಇ.ಆರ್.ಟಿ ಯಿಂದ NCF 2005 ರ ಆಧಾರಿತ ಸಿದ್ದಗೊಂಡಿರುವ 6 ರಿಂದ 10ನೇ ತರಗತಿವರೆಗಿನ ಉರ್ದು ತೃತೀಯ ಭಾಷೆಯ ಪಠ್ಯ ವಸ್ತುವನ್ನು ಪಠ್ಯಕ್ರಮದಲ್ಲಿ ಅಳವಡಿಸಿ ಜಾರಿಗೊಳಿಸಲು ಸರ್ಕಾರವು ಅನುಮೋದಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್. ಬಿ. ಪಟಗಾರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸಾಮಾನ್ಯ)

ಪಿ.ಆರ್. 1175

ಶಿಕ್ಷಣ ಸಚಿವಾಲಯ

ವಿಷಯ: ಶ್ರೀ ಎ.ವಿ. ಕೆಂಪರಂಗಯ್ಯ, ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ (ಅಮಾನತ್ತಿನಲ್ಲಿರುವ), ಕುರುಗೋಡು, ಬಳ್ಳಾರಿ ತಾಲ್ಲೂಕು ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:
1) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ, ಇವರ ಆದೇಶ ಸಂಖ್ಯೆ: ಸಿ2(5)ಪದೂ/23/2011–12/ದಿನಾಂಕ: 22/10/2011.
2) ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಲೋಕ್/ಐಎನ್‌ವಿ(ಜಿ)/ಸಿಟಿಎಲ್–/ಸಿಆರ್11/2011. ಬಳ್ಳಾರಿ ದಿನಾಂಕ: 14/03/2012.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 22/10/2011ರ ಆದೇಶದಲ್ಲಿ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರು ಶ್ರೀ ಎ.ವಿ. ಕೆಂಪರಂಗಯ್ಯ, ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ, ಕುರುಗೋಡು, ಬಳ್ಳಾರಿ ತಾಲ್ಲೂಕು ಇವರನ್ನು ಪೊಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬಳ್ಳಾರಿ ರವರ ದಿನಾಂಕ: 22/10/2011ರ ಪತ್ರದಲ್ಲಿ ತಿಳಿಸಿದಂತೆ ಸದರಿ ಅಧಿಕಾರಿ ದಿನಾಂಕ: 22/10/2011 ರಂದು ಫಿರ್ಯಾದುದಾರರಿಂದ ರೂ. 5,000/– ಗಳ ಲಂಚ ಪಡೆಯುವಾಗ ಬಳ್ಳಾರಿ ಲೋಕಾಯುಕ್ತ ಪೊಲೀಸರ ಬಲೆಗೆ ಸಿಕ್ಕಿಬಿದ್ದಿರುತ್ತಾರೆ. ಆದ್ದರಿಂದ ಸದರಿ ಅಧಿಕಾರಿ ಮೇಲೆ ಶಿಸ್ತುಕ್ರಮ ಜರುಗಿಸುವುದು ಅಗತ್ಯವೆಂದು ಭಾವಿಸಿ ಹಾಗೂ ಲೋಕಾಯುಕ್ತ ಪ್ರಕರಣದ ವಿಚಾರಣೆಗೆ ಅನುವು ಮಾಡಿಕೊಡಲು ವಿಚಾರಣೆ ಕಾಯ್ದಿರಿಸಿ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿ 1957ರ ನಿಯಮ 10(1)ರನ್ವಯ ಅಮಾನತ್ತುಗೊಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ: 14/03/2012ರ ಪತ್ರದಲ್ಲಿ ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರುರವರು ಆರೋಪಿತರ ಮನವಿ ಆಧರಿಸಿ ಈ ಹಂತದಲ್ಲಿ ಸದರಿ ಅಪಾದಿತರನ್ನು ಅಮಾನತ್ತಿನಿಂದ ತೆರವುಗೊಳಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬಹುದಾಗಿದೆ. ಸದರಿ ಆರೋಪಿತರನ್ನು ಅಮಾನತ್ತಿನಿಂದ ತೆರವುಗೊಳಿಸಿದರೆ ಟ್ರ್ಯಾಪ್ ನಡೆದ ಸ್ಥಳವನ್ನು ಹೊರತುಪಡಿಸಿ ಬೇರೆ ಸ್ಥಳಕ್ಕೆ ನಿಯೋಜಿಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯಿಸಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಪರಿಶೀಲಿಸಿ ಶ್ರೀ ಎ.ವಿ. ಕೆಂಪರಂಗಯ್ಯ, ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ (ಅಮಾನತ್ತಿನಲ್ಲಿರುವ), ಕುರುಗೋಡು, ಬಳ್ಳಾರಿ ತಾಲ್ಲೂಕು ಇವರ ಅಮಾನತ್ತನ್ನು ಸರ್ಕಾರವು ತೆರವುಗೊಳಿಸಿ ಸ್ಥಳನಿಯುಕ್ತಿಗೊಳಿಸಲು ತೀರ್ಮಾನಿಸಿ ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಡಿ 67 ಡಿಜಿಓ 2011, ಬೆಂಗಳೂರು, ದಿನಾಂಕ 5ನೇ ಏಪ್ರಿಲ್ 2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎ.ವಿ ಕೆಂಪರಂಗಯ್ಯ, ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ (ಅಮಾನತ್ತಿನಲ್ಲಿರುವ), ಕುರುಗೋಡು, ಬಳ್ಳಾರಿ ತಾಲ್ಲೂಕು ಇವರನ್ನು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿ 1957ರ ನಿಯಮ 10(5)(ಸಿ)ರಲ್ಲಿ ಪ್ರದತ್ತವಾದ ಅಧಿಕಾರದ ಅನ್ವಯ ಸರ್ಕಾರವು ಅವರ ವಿರುದ್ದ ವಿಚಾರಣೆಯನ್ನು ಕಾಯ್ದಿರಿಸಿ, ಸದರಿಯವರ ಅಮಾನತ್ತು ತೆರವುಗೊಳಿಸಿ ತಕ್ಷಣದಿಂದಲೇ ಜಾರಿಗೆ ಬರುವಂತೆ ಸೇವೆಗೆ ಪುನರ್ ಸ್ಥಾಪಿಸಿ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್. ಬಿ. ಸಸಾಲಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ & ಸಮಿತಿಗಳು).

ಪಿ.ಆರ್. 1176

ನಗರಾಭಿವೃದ್ಧಿ ಸಚಿವಾಲಯ

ವಿಷಯ : ವಿರಾಜಪೇಟೆ ಪಟ್ಟಣದ ಸೈಬರ್ ಕಾಫಿ ವರ್ಕ್ಸ್‌ನಿಂದ ಜಲಶುದ್ಧೀಕರಣದವರೆಗೆ **200** ಮಿ.ಮಿ ವ್ಯಾಸದ ಹೊಸ ಡಿ.ಐ. ಏರು ಕೊಳವೆ ಮಾರ್ಗವನ್ನು ಅಂದಾಜು ರೂ. 138.00 ಲಕ್ಷಗಳಲ್ಲಿ ಕಲ್ಪಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಕುರಿತು.

ಓದಲಾಗಿದೆ :
1. ವ್ಯವಸ್ಥಾಪಕ ನಿರ್ದೇಶಕರು, ಕನನೀಸ ಮತ್ತು ಒಚ ಮಂಡಳಿ, ವಿರಾಜಪೇಟೆ ರವರ ಪತ್ರ ಸಂಖ್ಯೆ: ಕಜಮಂ/ತಾಂತ್ರಿಕ/ಮೈಸೂರು/ವಿರಾಜಪೇಟೆ/3959/2011-12, ದಿನಾಂಕ: 22-02-2012.
2. ಸರ್ಕಾರದ ಆದೇಶ ಸಂಖ್ಯೆ: ನಅಇ 23 ಯುಎಂಎಸ್ 2011, ದಿನಾಂಕ: 27-02-2012.
3. ಸರ್ಕಾರದ ಆದೇಶ ಸಂಖ್ಯೆ: ನಅಇ 01 ಟಿಎಫ್‌ಟಿ 2008, ದಿನಾಂಕ: 16-05-2008.

ಪ್ರಸ್ತಾವನೆ :

ವಿರಾಜಪೇಟೆ ಪಟ್ಟಣಕ್ಕೆ ಶಾಶ್ವತ ನೀರು ಸರಬರಾಜು ವ್ಯವಸ್ಥೆಯನ್ನು ಕಲ್ಪಿಸಲು ವಿರಾಜಪೇಟೆ ಪಟ್ಟಣದಿಂದ 11.7 ಕಿ.ಮೀ. ದೂರದಲ್ಲಿರುವ ಬೇತ್ರಿ ಗ್ರಾಮದಲ್ಲಿ ಹರಿದು ಹೋಗುವ ಕಾವೇರಿ ನದಿಯಿಂದ 2 ನೇ ಹಂತದ ನೀರು ಸರಬರಾಜು ಯೋಜನೆಯನ್ನು ಕೈಗೊಳ್ಳಲು 2031ನೇ ಇಸವಿಗೆ ಅಂದಾಜಿಸಿದ 24,000 ಜನಸಂಖ್ಯೆಗೆ ದಿನಂಪ್ರತಿ ತಲಾ 70 ಲೀಟರ್ ನಂತೆ ವಿನ್ಯಾಸಿಸಿ ಯೋಜನೆಯ ಅಂದಾಜು ಪಟ್ಟಿಯನ್ನು 1999-2000ನೇ ಸಾಲಿನ ದರಪಟ್ಟಿಯ ಪ್ರಕಾರ ರೂ.260.00 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಯುಡಿಡಿ/58/ಯುಡಬ್ಲ್ಯೂಎಸ್/99 ದಿನಾಂಕ: 19-10-2000ರಲ್ಲಿ ನೀಡಲಾಗಿದೆ. ಈ ಯೋಜನೆಯನ್ನು ದಿನಾಂಕ: 28-02-2004ರಂದು ಚಾಲನೆಗೊಳಿಸಲಾಗಿದೆ.

ವಿರಾಜಪೇಟೆ ಪಟ್ಟಣದ ಎರಡನೇ ಹಂತದ ಯೋಜನೆಯಲ್ಲಿ ಪಟ್ಟಣದಿಂದ 12.2ಕಿ.ಮೀ. ದೂರದಲ್ಲಿರುವ ಬೇತ್ರಿ ಬಳಿಯ ಕಾವೇರಿ ನದಿಯ ಮೂಲಸ್ಥಾವರದಿಂದ ಕೇವಲ 9.2 ಕಿ.ಮೀ. ಮಾತ್ರ ಹೊಸದಾಗಿ ಕಚ್ಚಾ ನೀರಿನ 200ಮಿ.ಮೀ ವ್ಯಾಸದ ಡಿ.ಐ. ಏರು ಕೊಳವೆ ಮಾರ್ಗವನ್ನು ಅಳವಡಿಸಿ ಕದನೂರಿನ ಸೈಬರ್ ಕಾಫಿ ವರ್ಕ್ಸ್ ಬಳಿ 1968ರಲ್ಲಿ ಚಾಲನೆಗೊಳಿಸಿದ ಮೊದಲನೇ ಹಂತದಲ್ಲಿ ಅಳವಡಿಸಿದ 200ಮಿ.ಮೀ ವ್ಯಾಸದ ಸಿ.ಐ. ಉದ್ದದ ಏರು ಕೊಳವೆ ಮಾರ್ಗದಲ್ಲಿ ಆಗಾಗ್ಗೆ ನೀರು ಸೋರುವಿಕೆ ಆಗುತ್ತಿದ್ದು, ನೀರು ಸರಬರಾಜಿಗೆ ತೀವ್ರ ತೊಂದರೆಯಾಗುತ್ತಿದೆ. ಅದಲ್ಲದೆ, ಈ 3 ಕಿ.ಮೀ.ನಲ್ಲಿ ಹಳೆಯ ಕೊಳವೆ ಮಾರ್ಗವು ರಸ್ತೆಯ ಮಧ್ಯದಲ್ಲಿದ್ದು, ಈ ರಸ್ತೆಯಲ್ಲಿ ವಾಹನಗಳು ಜಾಸ್ತಿಯಾಗಿ ಓಡಾಡುತ್ತಿರುತ್ತದೆ. ಇದರಿಂದಾಗಿ ನೀರು ಸೋರುವಿಕೆಯು ಅಧಿಕವಾಗಿದೆ. ಇದರಿಂದ ವಿರಾಜಪೇಟೆ ಪಟ್ಟಣದ ನೀರು ವಿತರಣಾ ಕಾರ್ಯದಲ್ಲಿ ಅಡಚಣೆ ಉಂಟಾಗುತ್ತಿದ್ದು ಜನರಿಗೆ ಸಮರ್ಪಕ ನೀರು ಸರಬರಾಜು ಮಾಡಲು ತೊಂದರೆ ಉಂಟಾಗುತ್ತಿದೆ. ಈ ತೊಂದರೆಗಳ ಶಾಶ್ವತ ಪರಿಹಾರಕ್ಕಾಗಿ ಸೈಬರ್ ಕಾಫಿ ವರ್ಕ್ಸ್‌ನಿಂದ ಜಲಶುದ್ಧೀಕರಣ ಘಟಕದವರೆಗೂ ಹೊಸ ಕೊಳವೆ ಮಾರ್ಗ ಅಳವಡಿಸುವುದೇ ಸೂಕ್ತ ಪರಿಹಾರವಾಗುತ್ತದೆಂದು ತಾಂತ್ರಿಕ ಅಭಿಪ್ರಾಯವಿರುತ್ತದೆ.

ಈ ಮೇಲಿನ ಕಾರಣಗಳಿಂದಾಗಿ, ವಿರಾಜಪೇಟೆ ಪಟ್ಟಣದ ಸೈಬರ್ ಕಾಫಿ ವರ್ಕ್ಸ್‌ನಿಂದ ಜಲಶುದ್ಧೀಕರಣದ ವರೆಗೆ 200ಮಿ.ಮೀ. ವ್ಯಾಸದ ಕೆ-7 ಕ್ಲಾಸ್ ಡಿ.ಐ. ಕೊಳವೆ ಮಾರ್ಗವನ್ನು ಒದಗಿಸಿ, ಅಳವಡಿಸುವ ಕಾಮಗಾರಿಯ ಅಂದಾಜನ್ನು 2011-12ನೇ ಸಾಲಿನ ಮಂಡಳಿ ಹಾಗೂ ಮಂಗಳೂರು ವೃತ್ತದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ದರಪಟ್ಟಿಯಂತೆ ರೂ.138.00 ಲಕ್ಷಗಳಿಗೆ ತಯಾರಿಸಲಾಗಿದೆ.

ಈ ಯೋಜನೆಯನ್ನು ಸರ್ಕಾರವು ದಿನಾಂಕ: 20-07-2011ರಂದು ಹೊರಡಿಸಿದ ಆದೇಶದಲ್ಲಿ ನಿಗದಿ ಪಡಿಸಿದಂತೆ ಈ ಕೆಳಕಂಡ ಆರ್ಥಿಕ ಮಾದರಿಯಲ್ಲಿ ಕೈಗೆತ್ತಿಕೊಳ್ಳಲು ಪ್ರಸ್ತಾವನೆಯನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರು ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ಯೋಜನೆಯನ್ನು ಮೇಲೆ ಓದಲಾದ ಕ್ರಮಾಂಕ (2) ರ ಆದೇಶದಲ್ಲಿ ಮಂಡಳಿಯ 2011-12ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆಯಲ್ಲಿ ಸೇರಿಸಿ ರೂ.50.00 ಲಕ್ಷಗಳ ಮೊತ್ತವನ್ನು ಪ್ರಸ್ತುತ ಸಾಲಿನಲ್ಲಿ ಅನುವು ಮಾಡಲಾಗಿದೆ.

ಕ್ರಮ ಸಂಖ್ಯೆ	ವಿವರ	ಮೊತ್ತ
1.	ಸರ್ಕಾರದಿಂದ ಸಾಲ (ಶೇ.95)	ರೂ. 131.10 ಲಕ್ಷಗಳು
2.	ಆರ್ಥಿಕ ಸಂಸ್ಥೆಗಳಿಂದ ಸಾಲ (ಶೇ.5)	ರೂ. 6.90 ಲಕ್ಷಗಳು
	ಒಟ್ಟು	ರೂ. 138.00 ಲಕ್ಷಗಳು

ಮೇಲೆ ಓದಲಾದ ಕ್ರಮಾಂಕ (3) ರ ಆದೇಶದಲ್ಲಿ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ನಅಇ 01 ಟಿಎಫ್‌ಟಿ 2008, ದಿನಾಂಕ: 16-05-2008 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ರೂ.5.00 ಕೋಟಿಗಳಿಗೂ ಕಡಿಮೆ ಮೊತ್ತವಿರುವ ಮತ್ತು ಪ್ರಸ್ತುತ ಸಾಲಿನಲ್ಲಿ ಸದರಿ ಯೋಜನೆಗೆ ಸೂಕ್ತ ಹಣಕಾಸಿನ ವ್ಯವಸ್ಥೆ ಒದಗಿಸಿರುವ ಯೋಜನೆಗಳ ಅನುಮೋದನೆಯನ್ನು ನೀಡಲು ಅಧಿಕಾರ ನಿಯೋಜನೆ ಮಾಡಲಾಗಿದೆ. ಈ ಯೋಜನೆಗೆ ಮೇಲೆ ಓದಲಾದ ಕ್ರಮಾಂಕ (2) ರ ಆದೇಶದಲ್ಲಿ ಸೂಕ್ತ ಮೊತ್ತವನ್ನು ಅನುವು ಮಾಡಿ ಮಂಡಳಿಯ ಕ್ರಿಯಾ ಯೋಜನೆಯಲ್ಲಿ ಸೇರಿಸಿರುವ ಹಿನ್ನಲೆಯಲ್ಲಿ ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಬಹುದಾಗಿದೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 05 ಯುಡಬ್ಲ್ಯೂಎಸ್ 2012 ಬೆಂಗಳೂರು, ದಿನಾಂಕ: 30-03-2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ವಿರಾಜಪೇಟೆ ಪಟ್ಟಣದ ಸೈಬರ್ ಕಾಫಿ ವರ್ಕ್ಸ್‌ನಿಂದ ಜಲಶುದ್ಧೀಕರಣದವರೆಗೆ 200 ಮಿ.ಮೀ. ವ್ಯಾಸದ ಹೊಸ ಡಿ.ಐ. ಏರು ಕೊಳವೆ ಮಾರ್ಗವನ್ನು ಅಂದಾಜು ರೂ.138.00 ಲಕ್ಷಗಳಲ್ಲಿ (ರೂ. ನೂರ ಮೂವತ್ತೆಂಟು ಲಕ್ಷಗಳು ಮಾತ್ರ) ಕಲ್ಪಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿದೆ.

1. The consent of the ULB shall be obtained for the extra cost that might occur due to deviations, extra item works or variations in the Scheme.
2. Adequate provision to be made by the Board in the following Years for timely completion of the Project.
3. Water rates as proposed by KUWS&DB have to be implemented to meet O & M cost of UGD.
4. KTPP provisions, quality control and timely completion should ensured.
5. ಅಂದಾಜು ಪರಿಷ್ಕರಣೆಗೆ ಯಾವುದೇ ಅವಕಾಶ ನೀಡತಕ್ಕದ್ದಲ್ಲ.
6. ಸದರಿ ಕಾಮಗಾರಿಯನ್ನು ನಿಗದಿತ ಅವಧಿಯ ಒಳಗೆ ಪೂರ್ಣಗೊಳಿಸುವುದು.
7. ಈ ಯೋಜನೆಯಡಿ ಅಗತ್ಯವಿರುವ ಭೂಮಿಯನ್ನು ಪಟ್ಟಣ ಪಂಚಾಯಿತಿಯ ವತಿಯಿಂದ ಮಂಡಳಿಗೆ ಹಸ್ತಾಂತರಿಸಲು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಹಾಗೂ ಯೋಜನೆಯನ್ನು ಕಾರ್ಯಗತ ಮಾಡುವ ಸಮಯದಲ್ಲಿ ದರಗಳ ಹೆಚ್ಚಳಗಳಿಂದ ಹಾಗೂ ಇನ್ನಿತರ ಕಾರಣಗಳಿಂದ ಅಂದಾಜು ಮೊತ್ತದಲ್ಲಿ ಪರಿಷ್ಕರಣೆ ಉಂಟಾದಲ್ಲಿ ಸ್ಥಳೀಯ ಸಂಸ್ಥೆಯೇ ಭರಿಸಲು ಒಪ್ಪಿರುವ ಹಿನ್ನಲೆಯಲ್ಲಿ ಹೆಚ್ಚುವರಿ ಮೊತ್ತವನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ವಸತಿ ಕಾನೂನು ಮತ್ತು ನಗರಾಭಿವೃದ್ಧಿ ಇಲಾಖೆ ರವರ ಟಿಪ್ಪಣಿ ಸಂಖ್ಯೆ: ವನಇ 148 ಆಂಆಸ 2012 ದಿನಾಂಕ: 28–03–2012 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ. ವಾಸುದೇವರಾವ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1177 ನಗರಾಭಿವೃದ್ಧಿ ಇಲಾಖೆ

ಕಂದಾಯ ಸಚಿವಾಲಯ

ತಿದ್ದುಪಡಿ ಆದೇಶ

ಸಂ: ಆರ್‌ಡಿ 174 ಟಿಎನ್‌ಆರ್ 2010, ಬೆಂಗಳೂರು, ದಿನಾಂಕ: 29–03–2012

ಸರ್ಕಾರದ ಆದೇಶ ಸಂ: ಕಂಇ 174 ಟಿಎನ್‌ಆರ್ 2010, ದಿನಾಂಕ: 21–02–2012ರ ಆದೇಶ ಭಾಗದಲ್ಲಿನ **"ರೂ.1.40 ಲಕ್ಷದಿಂದ ರೂ.1.50 ಲಕ್ಷಗಳಿಗೆ"** ಎಂಬುದರ ಬದಲಾಗಿ **"ಕೆಂಪು ಮಣ್ಣು ಪ್ರದೇಶದಲ್ಲಿ** ರೂ.1.30 ಲಕ್ಷದಿಂದ ರೂ.1.40 ಲಕ್ಷಗಳಿಗೆ ಹಾಗೂ **ಕಪ್ಪು ಮಣ್ಣು ಪ್ರದೇಶದಲ್ಲಿ** ರೂ.1.40 ಲಕ್ಷಗಳಿಂದ ರೂ.1.50 ಲಕ್ಷಗಳಿಗೆ**"** ಎಂದು ತಿದ್ದಿಕೊಂಡು ಓದುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಎಂ. ಆನಂದಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1178 ಕಂದಾಯ ಇಲಾಖೆ (ವಿ.ನಿ. & ಸೇವೆಗಳು–2)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಡಾ: ಹೆಚ್.ಆರ್. ಗಿರೀಶ್, ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕಲ್ಲೂರು, ಗುಬ್ಬಿ ತಾಲ್ಲೂಕು ತುಮಕೂರು ಜಿಲ್ಲೆ. ಇವರನ್ನು ಅನಧಿಕೃತ ಗೈರುಹಾಜರಿ ಪ್ರಕರಣದಲ್ಲಿ ಸರ್ಕಾರಿ ಸೇವೆಯಿಂದ ವಿಮೋಚನೆಗೊಳಿಸುವ ಬಗ್ಗೆ.

ಓದಲಾಗಿದೆ : ಆಯುಕ್ತರು ಆಕುಕ ಸೇವೆಗಳು ಬೆಂಗಳೂರು ರವರ ಪತ್ರ ಸಂಖ್ಯೆ: ಡಿಪಿಜಿ/ಬೆಂ.ವಿ–11/ತು/04/2008–09, ದಿನಾಂಕ: 27–12–2011.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ: 27–12–2011ರಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು. ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ, ಡಾ: ಹೆಚ್.ಆರ್. ಗಿರೀಶ್, ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕಲ್ಲೂರು, ಗುಬ್ಬಿ ತಾಲ್ಲೂಕು ತುಮಕೂರು ಜಿಲ್ಲೆ. ಇವರು ದಿನಾಂಕ: 02–01–2008 ರಿಂದ 05–01–2008ರವರೆಗೆ ನಂತರ ದಿನಾಂಕ: 07–01–2008 ರಿಂದ 22–06–2008ರವರೆಗೆ ನಂತರ ಒಟ್ಟು 172 ದಿನಗಳು ಸರ್ಕಾರಿ ಸೇವೆಗೆ ಅನಧಿಕೃತ ಗೈರುಹಾಜರಾಗಿದ್ದು, ಸದರಿ ವೈದ್ಯಾಧಿಕಾರಿಗಳು ಖಾಯಂಪೂರ್ವ ಸೇವಾವಧಿಯಲ್ಲಿದ್ದು. ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆಯದೆ ಕರ್ತವ್ಯಕ್ಕೆ ಅನಧಿಕೃತ ಗೈರುಹಾಜರಿಯಾಗಿರುವುದರಿಂದ ಸದರಿಯವರಿಗೆ ಕಠಿಣ ದಂಡನೆಯನ್ನು ವಿಧಿಸುವಂತೆ ಕೋರಿರುತ್ತಾರೆ.

ಸರ್ಕಾರವು ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ ಡಾ: ಹೆಚ್.ಆರ್. ಗಿರೀಶ್, ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕಲ್ಲೂರು. ಗುಬ್ಬಿ ತಾಲ್ಲೂಕು ತುಮಕೂರು ಜಿಲ್ಲೆ. ಇವರು ಖಾಯಂಪೂರ್ವ ಸೇವಾವಧಿಯಲ್ಲಿದ್ದರೂ ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆಯದೆ ದಿನಾಂಕ: 02–01–2008 ರಿಂದ 05–01–2008ರವರೆಗೆ ನಂತರ ದಿನಾಂಕ: 07–01–2008ರಿಂದ 22–06–2008ರವರೆಗೆ ಒಟ್ಟು 172 ದಿನಗಳು ಕರ್ತವ್ಯಕ್ಕೆ ಅನಧಿಕೃತ ಗೈರುಹಾಜರಾಗಿದ್ದು, ಸದರಿಯವರ ಸೇವೆಯು ತೃಪ್ತಿಕರವಾಗಿಲ್ಲದೆ ಇರುವುದರಿಂದ ಇವರನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಾವಳಿಗಳು 1977ರ ನಿಯಮ (6)(1)(2)ರ ಅಡಿಯಲ್ಲಿ ಸರ್ಕಾರಿ ಸೇವೆಯಿಂದ ವಿಮೋಚನೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಆದೇಶ ಸಂಖ್ಯೆ: ಆಕುಕ 8 ಎಂಎಸ್‌ಎ 2012 ಬೆಂಗಳೂರು, ದಿನಾಂಕ: 03–04–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಡಾ:ಹೆಚ್.ಆರ್. ಗಿರೀಶ್. ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕಲ್ಲೂರು, ಗುಬ್ಬಿ ತಾಲ್ಲೂಕು ತುಮಕೂರು ಜಿಲ್ಲೆ. ಇವರು ಪರಿವೀಕ್ಷಣಾ ಅವಧಿಯಲ್ಲಿದ್ದರೂ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೆ ಕರ್ತವ್ಯಕ್ಕೆ ಸತತ ಗೈರುಹಾಜರಾಗಿದ್ದು, ಸದರಿಯವರ ಸೇವೆಯು ತೃಪ್ತಿಕರವಾಗಿಲ್ಲದಿರುವುದರಿಂದ ಇವರನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಾವಳಿಗಳು 1977ರ ನಿಯಮ (6)(1)(2)ರ ಅಡಿಯಲ್ಲಿ ಸರ್ಕಾರಿ ಸೇವೆಯಿಂದ ವಿಮೋಚನೆಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಬಿ.ಎಫ್. ಹುಬ್ಬಳ್ಳಿ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1179 ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿ ಸರ್ಕಾರಿ ಆಸ್ಪತ್ರೆ / ಕೇಂದ್ರಗಳನ್ನು ನಡೆಸಲು ಜಾರಿಗೊಳಿಸುತ್ತಿರುವ ಆರೋಗ್ಯಬಂಧು ಯೋಜನೆಯಡಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ :
1. ಮಾನ್ಯ ಮುಖ್ಯ ಮಂತ್ರಿಯವರ 2011–12ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 96.
2. ದಿನಾಂಕ: 19–04–2011 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಗಳು.
3. ಸರ್ಕಾರಿ ಆದೇಶ ಸಂಖ್ಯೆ: ಆಕುಕ 143 ಸಿಜಿಎಂ 2011 ದಿನಾಂಕ: 02–05–2011.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರ ಪತ್ರ ಸಂಖ್ಯೆ: ಹೆಚ್‌ಎಸ್‌ಪಿ (3)/60/11–12, ದಿನಾಂಕ: 23–02–2012.
5. ದಿನಾಂಕ: 20–03–2012 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

2011–12ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ–96 ರಲ್ಲಿ ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿದ್ದರು:–.

"ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಈಗಾಗಲೇ ಆರೋಗ್ಯಬಂಧು ಯೋಜನೆಯನ್ನು 56 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಂಬಂಧಪಟ್ಟಂತೆ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಡಿಯಲ್ಲಿ ಜಾರಿಗೊಳಿಸುತ್ತಿದೆ. ಇದರ ಪರಿಷ್ಕೃತ ಯೋಜನೆಯನ್ನು ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೂ ವಿಸ್ತರಿಸಿ ಆರೋಗ್ಯ ಕ್ಷೇತ್ರದಲ್ಲಿ ಅನುಭವ ಮತ್ತು ಪರಿಣಿತಿ ಇರುವ ಸಂಸ್ಥೆಗಳಿಗೆ ಆದ್ಯತೆ ಕೊಟ್ಟು ನೆರವನ್ನು ನೀಡಲಾಗುವುದು"

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರಸ್ತುತ ಆರೋಗ್ಯಬಂಧು ಎಂಬ ಯೋಜನೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿ ಜಾರಿಗೊಳಿಸುತ್ತಿದೆ. ಈ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಂದರೆ, ಆರೋಗ್ಯ ಸೂಚ್ಯಾಂಕಗಳು ಅತಿ ಕಡಿಮೆ ಇರುವ; ಹೆದ್ದಾರಿ ಹಾಗೂ ನಗರ ಪ್ರದೇಶಗಳಿಂದ 15 ಕಿ.ಮೀ. ದೂರದಲ್ಲಿರುವ ಮತ್ತು ದೀರ್ಘಕಾಲದಿಂದ ವೈದ್ಯರು/ಸಿಬ್ಬಂದಿ ಹುದ್ದೆಗಳು ಖಾಲಿ ಇರುವಂತಹವುಗಳನ್ನು ಸರ್ಕಾರೇತರ ಸಂಸ್ಥೆಗಳಿಗೆ ಹಾಗೂ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ನಿರ್ವಹಣೆಗಾಗಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿ ನೀಡಲಾಗಿದೆ. ಪ್ರಸ್ತುತ ಇಂತಹ 56 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಸದರಿ ಯೋಜನೆಯ ಪ್ರಮುಖಾಂಶಗಳು ಕೆಳಕಂಡಂತಿವೆ:–

1. ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಈ ಕೆಳಕಂಡ ವೈದ್ಯರು/ಸಿಬ್ಬಂದಿ ಹುದ್ದೆಗಳನ್ನು ಸೃಜಿಸಲಾಗಿದೆ:–
   1) ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ
   2) ಔಷಧಿ ವಿತರಕ
   3) ಪ್ರಯೋಗ ಶಾಲಾ ತಂತ್ರಜ್ಞ
   4) ಶುಶ್ರೂಷಕಿ
   5) ಕಿರಿಯ ಪುರುಷ ಆರೋಗ್ಯ ಸಹಾಯಕ
   6) ದ್ವಿತೀಯ ದರ್ಜೆ ಸಹಾಯಕ ಹಾಗೂ
   7) ಉಪಕೇಂದ್ರಗಳಿಗೆ ಹೊಂದಿಕೊಂಡ 4 ರಿಂದ 5 ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು
2. ಮೇಲ್ಕಂಡ ವೈದ್ಯಾಧಿಕಾರಿ ಮತ್ತು ಸಿಬ್ಬಂದಿ ಸೇವೆಯನ್ನು ಸದರಿ ಖಾಸಗಿ ಸಂಸ್ಥೆಗಳೇ ನೇಮಕ ಮಾಡಿ ಆರೋಗ್ಯ ಕೇಂದ್ರವನ್ನು ನಿರ್ವಹಿಸಬೇಕು ಹಾಗೂ ಅವರುಗಳ ವೇತನ ಮತ್ತು ಭತ್ಯೆಗಳನ್ನು ಸಂಪೂರ್ಣವಾಗಿ ಸರ್ಕಾರವೇ (ಸರ್ಕಾರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ನೀಡುತ್ತಿರುವ ವೇತನ ಶ್ರೇಣಿಯಂತೆಯೇ) ಪಾವತಿಸುತ್ತದೆ.
3. ಇದಲ್ಲದೆ, ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇರುವ ಪದ್ಧತಿಯಂತೆ ಖಾಸಗಿ ನಿರ್ವಹಣೆಗಾಗಿ ವಹಿಸಲ್ಪಟ್ಟ ಪ್ರತೀ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ. 1 ಲಕ್ಷ ಮೌಲ್ಯದ ಔಷಧಿಗಳನ್ನು ಸಹ ಸರ್ಕಾರವೇ ನೀಡುತ್ತಿದೆ. ಮುಂದುವರೆದು, ಸಂಬಂಧಪಟ್ಟ ಆರೋಗ್ಯ ರಕ್ಷಾ ಸಮಿತಿಗಳ ಮೂಲಕ ಪ್ರತೀ ಪ್ರಾಥಮಿಕ ಆರೋಗ್ಯ ಕೇಂದ್ರ ರೂ. 1.75 ಲಕ್ಷ ಮೊತ್ತಕ್ಕೆ ಅನುಗುಣವಾಗಿ ಇತರೆ ಸಾಂದರ್ಭಿಕ ವೆಚ್ಚಗಳನ್ನು ಸಹ ಭರಿಸಲು ಅವಕಾಶವಿದೆ.

4. ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಮತ್ತು ಉಪಕರಣಗಳನ್ನು as is where is basis ಖಾಸಗಿ ಸಂಸ್ಥೆಗಳಿಗೆ ನೀಡಲಾಗುವುದು ಹಾಗೂ ಸದರಿ ಸಂಸ್ಥೆಗಳು ವೈದ್ಯರು ಮತ್ತು ಸಿಬ್ಬಂದಿಯನ್ನು ನೇಮಕ ಮಾಡಿ ಆರೋಗ್ಯ ಕೇಂದ್ರವನ್ನು ನಿರ್ವಹಿಸಬೇಕು. ಆದರೆ ಸ್ವಲ್ಪ ದಿನಗಳ ಮಟ್ಟಿಗೆ ಸದರಿ ಕೇಂದ್ರದಲ್ಲಿ ಲಭ್ಯವಿರುವ ಸರ್ಕಾರಿ ಸಿಬ್ಬಂದಿಯ ಸೇವೆಯನ್ನು ನಿಯೋಜನೆ ಮೇಲೆ ತಾತ್ಕಾಲಿಕವಾಗಿ ಖಾಸಗಿ ಸಂಸ್ಥೆ ಉಪಯೋಗಿಸಿಕೊಳ್ಳಬಹುದು.

2011–12ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮೇಲೆ ತಿಳಿಸಿದಂತೆ, ಘೋಷಿಸಿದ್ದನ್ವಯ ಆರೋಗ್ಯಬಂಧು ಯೋಜನೆಯನ್ನು ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೂ ವಿಸ್ತರಿಸುವ ಬಗ್ಗೆ ಇಲಾಖಾ ಮುಖ್ಯಸ್ಥರಿಂದ ಪ್ರಸ್ತಾವನೆಯನ್ನು ಸ್ವೀಕರಿಸಲಾಗಿತ್ತು. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ದಿನಾಂಕ: 19–04–2011 ರಂದು ಮಂಡಿಸಲಾಗಿತ್ತು. ಸಾಮಾನ್ಯವಾಗಿ ನಗರ ಪ್ರದೇಶಗಳಲ್ಲಿನ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ವೈದ್ಯರು ಮತ್ತು ಸಿಬ್ಬಂದಿ ಲಭ್ಯವಾಗುತ್ತಿದ್ದು, ಅವುಗಳನ್ನು ನಡೆಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಯಾವುದೇ ತೊಂದರೆ ಇರುವುದಿಲ್ಲ. ಆದಾಗ್ಯೂ, ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಎಲ್ಲಾ ನಗರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ವಿಸ್ತರಿಸಲು ಕೆಲವು ಮಾನದಂಡಗಳನ್ನು ಅನುಸರಿಸುವುದು ಸೂಕ್ತವೆಂದು ಮೇಲೆ (2) ರಲ್ಲಿ ಓದಲಾದ ದಿನಾಂಕ: 19–04–2011 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಅಭಿಪ್ರಾಯಪಡಲಾಯಿತು. ಆದುದರಿಂದ, ಡಾ: ನಂಜುಂಡಪ್ಪ ಸಮಿತಿಯು ಗುರುತಿಸಿರುವಂತೆ ಆರೋಗ್ಯ ಸೂಚ್ಯಾಂಕಗಳು ಕಡಿಮೆ ಇರುವಂತಹ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿನ ಎಲ್ಲಾ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿಯಲ್ಲಿ ನಿರ್ವಹಿಸಲು ಮುಂದೆ ಬಂದಲ್ಲಿ, ಅವುಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ಆರೋಗ್ಯಬಂಧು ಯೋಜನೆಯ ಮಾರ್ಗಸೂಚಿಗಳಂತೆಯೇ ಪರಿಗಣಿಸಿ ನಿರ್ವಹಿಸಲು ಖಾಸಗಿ ಸಂಸ್ಥೆಗಳು/ವೈದ್ಯಕೀಯ ಮಹಾವಿದ್ಯಾಲಯಗಳಿಗೆ ವಹಿಸಬಹುದಾಗಿದೆ ಎಂಬುದಾಗಿ ಸದರಿ ಸಮಿತಿಯಲ್ಲಿ ತೀರ್ಮಾನಿಸಿದ ಪ್ರಕಾರ ಮೇಲೆ (3) ರಲ್ಲಿ ಓದಲಾದ ದಿನಾಂಕ: 02–05–2011ರ ಸರ್ಕಾರಿ ಆದೇಶವನ್ನು ಹೊರಡಿಸಲಾಗಿದೆ.

ಸದರಿ ಆದೇಶ ಹೊರಡಿಸಿದ ನಂತರವೂ ಸಹ, ಆರೋಗ್ಯಬಂಧು ಯೋಜನೆಯಡಿ ಸರ್ಕಾರಿ ಆಸ್ಪತ್ರೆ / ಕೇಂದ್ರಗಳನ್ನು ಖಾಸಗಿ ಸಹಭಾಗಿತ್ವದಡಿಯಲ್ಲಿ ವಹಿಸಿಕೊಳ್ಳಲು ಖಾಸಗಿ ಸಂಸ್ಥೆಗಳು ಹಾಗೂ ವೈದ್ಯಕೀಯ ಮಹಾವಿದ್ಯಾಲಯಗಳು ಅಷ್ಟಾಗಿ ಆಸಕ್ತಿ ವಹಿಸಿರುವುದಿಲ್ಲ. 2012–13ನೇ ಸಾಲಿನ ಆಯವ್ಯಯ ಕುರಿತಂತೆ ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ಯೋಜನೆ ಕುರಿತಂತೆ ಚರ್ಚಿಸಲಾಗಿ, ಆರೋಗ್ಯಬಂಧು ಯೋಜನೆಯಡಿ ಇನ್ನಷ್ಟು ಪ್ರದೇಶಗಳನ್ನು ಒಳಪಡಿಸಲು ಕೆಲವು ಮಾನದಂಡಗಳನ್ನು ಅಳವಡಿಸಿ ಸರ್ಕಾರಿ ಆದೇಶವನ್ನು ಹೊರಡಿಸಬೇಕೆಂದು ತೀರ್ಮಾನಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಮೇಲೆ (4) ರಲ್ಲಿ ಓದಲಾದ ಪತ್ರ ದಿನಾಂಕ: 23–12–2011 ರಂದು ಆಯುಕ್ತರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಈ ಯೋಜನೆಯನ್ನು ಇನ್ನೂ ಕೆಲವು ಪ್ರದೇಶಗಳಿಗೆ ವಿಸ್ತರಿಸುವ ಸಲುವಾಗಿ ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳು ಹಾಗು ಜಿಲ್ಲಾ ಆಸ್ಪತ್ರೆಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದ ಮೇಲೆ ವಹಿಸುವಾಗ ಈ ಕೆಳಕಂಡ ಮಾನದಂಡಗಳನ್ನು ಸಹ ಅನುಸರಿಸಬಹುದೆಂದು ಆಯುಕ್ತರು ಸದರಿ ಪ್ರಸ್ತಾವನೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ:

1. ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಮಾತ್ರ ಸೀಮಿತಗೊಳಿಸಿ ವಹಿಸತಕ್ಕದ್ದು;
2. ವಹಿಸಲಾಗುವ ಆಸ್ಪತ್ರೆ / ಕೇಂದ್ರಗಳಲ್ಲಿನ ಹಾಸಿಗೆಗಳ ಬಳಕೆ ಪ್ರಮಾಣ ಕಳೆದ ಮೂರು ವರ್ಷಗಳ ಪ್ರತಿ ಸಾಲಿನಲ್ಲಿ ಶೇಕಡ 30 ಕ್ಕಿಂತ ಕಡಿಮೆ ಇರಬೇಕು ಹಾಗು
3. ದೀರ್ಘಕಾಲದಿಂದ ಸದರಿ ಆಸ್ಪತ್ರೆ / ಕೇಂದ್ರಗಳಲ್ಲಿ ವೈದ್ಯರ / ಸಿಬ್ಬಂದಿ ಹುದ್ದೆಗಳು ತೆರವಾಗಿರಬೇಕು.

ಸದರಿ ಪ್ರಸ್ತಾವನೆಯನ್ನು ಮೇಲೆ (5) ರಲ್ಲಿ ಓದಲಾದ ದಿನಾಂಕ: 20–03–2012 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಲಾಗಿ, ಡಾ: ನಂಜುಂಡಪ್ಪ ಸಮಿತಿಯು ಗುರುತಿಸಿರುವಂತೆ ಆರೋಗ್ಯ ಸೂಚ್ಯಾಂಕಗಳು ಕಡಿಮೆಯಿರುವ ರಾಜ್ಯದ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿನ ಎಲ್ಲಾ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿಯಲ್ಲಿ ನಿರ್ವಹಿಸಲು ಮುಂದೆ ಬಂದಲ್ಲಿ, ಅವುಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ಆರೋಗ್ಯಬಂಧು ಯೋಜನೆಯ ಮಾರ್ಗಸೂಚಿಗಳಂತೆಯೇ ಪರಿಗಣಿಸಿ ನಿರ್ವಹಿಸಲು ಖಾಸಗಿ ಸಂಸ್ಥೆಗಳು / ವೈದ್ಯಕೀಯ ಮಹಾವಿದ್ಯಾಲಯಗಳಿಗೆ ವಹಿಸಲು ಈಗಾಗಲೇ ಸರ್ಕಾರಿ ಆದೇಶ ಸಂಖ್ಯೆ: ಆಕುಕ 143 ಸಿಜಿಎಂ 2011 ದಿನಾಂಕ: 02–05–2011ರಲ್ಲಿ ಆದೇಶಿಸಿರುವುದರ ಜೊತೆಗೆ ರಾಜ್ಯದಲ್ಲಿನ ಇತರೇ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಆಸ್ಪತ್ರೆಗಳನ್ನು ನಿರ್ವಹಿಸುವ ಸಲುವಾಗಿ ಸದರಿ ಆರೋಗ್ಯಬಂಧು ಯೋಜನೆಯಡಿ ಪರಿಗಣಿಸುವಾಗ ಮೇಲೆ ತಿಳಿಸಿದ ಮೂರು ಮಾನದಂಡಗಳ ಪ್ರಕಾರ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ.

ಆದುದರಿಂದ, ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಆಕುಕ 118 ಸಿಜಿಎಂ 2012 ಬೆಂಗಳೂರು, ದಿನಾಂಕ: 20–03–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಡಾ: ನಂಜುಂಡಪ್ಪ ಸಮಿತಿಯು ಗುರುತಿಸಿರುವಂತೆ ಆರೋಗ್ಯ ಸೂಚ್ಯಾಂಕಗಳು ಕಡಿಮೆಯಿರುವ ರಾಜ್ಯದ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿನ ಎಲ್ಲಾ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಡಿಯಲ್ಲಿ ನಿರ್ವಹಿಸಲು ಮುಂದೆ ಬಂದಲ್ಲಿ, ಅವುಗಳನ್ನು ಪ್ರಸ್ತುತ ಚಾಲ್ತಿಯಲ್ಲಿರುವ ಆರೋಗ್ಯಬಂಧು ಯೋಜನೆಯ ಮಾರ್ಗಸೂಚಿಗಳಂತೆಯೇ ಪರಿಗಣಿಸಿ ನಿರ್ವಹಿಸಲು ಖಾಸಗಿ ಸಂಸ್ಥೆಗಳು / ವೈದ್ಯಕೀಯ ಮಹಾವಿದ್ಯಾಲಯಗಳಿಗೆ ವಹಿಸಲು ಈಗಾಗಲೇ ಸರ್ಕಾರಿ ಆದೇಶ ಸಂಖ್ಯೆ: ಆಕುಕ 143 ಸಿಜಿಎಂ 2011 ದಿನಾಂಕ: 02–05–2011 ರಲ್ಲಿ ಆದೇಶಿಸಿರುವುದರ ಜೊತೆಗೆ ರಾಜ್ಯದಲ್ಲಿನ ಇತರೇ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಆಸ್ಪತ್ರೆಗಳನ್ನು ನಿರ್ವಹಿಸುವ ಸಲುವಾಗಿ ಸದರಿ ಆರೋಗ್ಯಬಂಧು ಯೋಜನೆಯಡಿ ಪ್ರಸ್ತಾವನೆಗಳನ್ನು ಪರಿಗಣಿಸುವಾಗ ಈ ಕೆಳಕಂಡ ಮೂರು ಮಾನದಂಡಗಳನ್ನು ಅನುಸರಿಸಿ ಕ್ರಮ ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿದೆ:

1. ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಮಾತ್ರ ಸೀಮಿತಗೊಳಿಸಿ ವಹಿಸತಕ್ಕದ್ದು;
2. ವಹಿಸಲಾಗುವ ಆಸ್ಪತ್ರೆ / ಕೇಂದ್ರಗಳಲ್ಲಿನ ಹಾಸಿಗೆಗಳ ಬಳಕೆ ಪ್ರಮಾಣ ಕಳೆದ ಮೂರು ವರ್ಷಗಳ ಪ್ರತಿ ಸಾಲಿನಲ್ಲಿ ಶೇಕಡ 30 ಕ್ಕಿಂತ ಕಡಿಮೆ ಇರಬೇಕು ಹಾಗು
3. ದೀರ್ಘಕಾಲದಿಂದ ಸದರಿ ಆಸ್ಪತ್ರೆ / ಕೇಂದ್ರಗಳಲ್ಲಿ ವೈದ್ಯರ / ಸಿಬ್ಬಂದಿ ಹುದ್ದೆಗಳು ತೆರವಾಗಿರಬೇಕು.

ಈ ಆದೇಶವನ್ನು ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ: 20-03-2012 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ. ನಾರಾಯಣ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1180 ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ವಿಷಯ : ಶ್ರೀ ಶಿವಣ್ಣ, ಸಹಾಯಕ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಜಿಲ್ಲಾ ಕೈಗಾರಿಕಾ ಕೇಂದ್ರ, ಗುಲ್ಬರ್ಗಾ (ಲೀನ್ ಸ್ಥಾನ) ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ನೇಮಕ ಮಾಡುವ ಬಗ್ಗೆ

ಓದಲಾಗಿದೆ :
1. ಉಪ ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ: ಲೋಕ್/ಐಎನ್‌ವಿ (ಜಿ) ಎಲ್-14/ಸಿಆರ್-5/2011, ಮಂಡ್ಯ ದಿನಾಂಕ:17-03-2011.
2. ಪತ್ರ ಸಂಖ್ಯೆ: ಆಡಳಿತ /ಸಿಬ್ಬಂದಿ ಇ4/03/2011-11, ದಿನಾಂಕ:07-08.04.2011.
3. ಸರ್ಕಾರಿ ಆದೇಶ ಸಂಖ್ಯೆ: ವಾಕೈ 53 ಕೈಸೇವಿ 2011, ದಿನಾಂಕ:30-05-2011.
4. ಪತ್ರ ಸಂಖ್ಯೆ:ಆಡಳಿತ/ಸಿಬ್ಬಂದಿ/ಇ4/03/2011-12, ದಿನಾಂಕ:04/08-11-2011.
5. ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ:ಲೋಕ್/ಐಎನ್‌ವಿ(ಜಿ)ಎಂ-14/ಸಿಆರ್-5/2011/ಮಂಡ್ಯ ದಿನಾಂಕ:31-01-2012.

ಪ್ರಸ್ತಾವನೆ :

ಮೇಲೆ ಓದಲಾದ (1)ರಲ್ಲಿ ಶ್ರೀ ಶಿವಣ್ಣ, ಸಹಾಯಕ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಜಿಲ್ಲಾ ಕೈಗಾರಿಕಾ ಕೇಂದ್ರ ಮಂಡ್ಯ ಇವರು ಶ್ರೀ ಬಿ.ಪಿ. ಸುಂದರಮೂರ್ತಿ, ಮರಗೆಲಸ, ಹೊಸ ಬೂದನೂರು ಗ್ರಾಮ, ಇವರು ಮಂಡ್ಯ ಇವರಿಂದ ರೂ.5,000/-ಗಳ ಲಂಚ ನೀಡಬೇಕೆಂದು ಒತ್ತಾಯಿಸಿದ್ದು, ಸದರಿಯವರ ವಿರುದ್ಧ ಮೊ.ನಂ. 05/2011ರ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡ ದಿನಾಂಕ: 07-03-2011ರಂದು ಬೀಸಿದ ಬಲೆಯ ಯಶಸ್ವಿಯಾಗಿದ್ದು, ಸದರಿ ಅಧಿಕಾರಿಯವರ ಮೇಲಿನ ಭ್ರಷ್ಟಾಚಾರದ ಆಪಾದನೆ ಮೇಲ್ನೋಟಕ್ಕೆ ಸಾಬಿತಾದ ಹಿನ್ನೆಲೆಯಲ್ಲಿ ಇವರನ್ನು ಅಮಾನತ್ತಿನಲ್ಲಿಡಬೇಕೆಂದು ಹಾಗೂ ಅವರ ಲೀನ್ (ಸ್ಥಾನ)ವನ್ನು ಬೇರೆ ಕಡೆಗೆ ವರ್ಗಾಯಿಸಬೇಕೆಂದು ಕೈಗಾರಿಕಾಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆರವನ್ನು ಕೋರಿರುವ ಮೇರೆಗೆ ಶ್ರೀಯುತರನ್ನು ಅಮಾನತ್ತುಗೊಳಿಸಿ ಶ್ರೀಯುತರ ಲೀನ್ ಸ್ಥಾನವನ್ನು ಬೆಂಗಳೂರು ಕೇಂದ್ರ ಕಛೇರಿಯಲ್ಲಿ ಖಾಲಿಯಿರುವ ಸಹಾಯಕ ನಿರ್ದೇಶಕರು (ಎಂ.ಎಸ್.ಎಂ.ಇ.) ಹುದ್ದೆಗೆ ಸ್ಥಳಾಂತರಿಸಲು ಅಪರ ನಿರ್ದೇಶಕರು (ಆಡಳಿತ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆರವರು ಉಲ್ಲೇಖ (2)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಶ್ರೀ ಶಿವಣ್ಣ ಸಹಾಯಕ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಜಿಲ್ಲಾ ಕೈಗಾರಿಕಾ ಕೇಂದ್ರ ಮಂಡ್ಯ, ಇವರ ಮೇಲಿನ ಭ್ರಷ್ಟಾಚಾರದ ಆಪಾದನೆ ಮೇಲ್ನೋಟಕ್ಕೆ ಸಾಬಿತಾದ ಮೇರೆಗೆ ಇವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ/ಇಲಾಖಾ ವಿಚಾರಣೆ ಕಾಯ್ದಿರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10(1)(ಎ) ರ ಅನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿ ಶ್ರೀಯುತರ (ಲೀನ್) ಸ್ಥಾನವನ್ನು ಸಹಾಯಕ ನಿರ್ದೇಶಕರು (ಆಡಳಿತ) ಜಿಲ್ಲಾ ಕೈಗಾರಿಕಾ ಕೇಂದ್ರ, ಗುಲಬರ್ಗಾ ಇಲ್ಲಿ ಖಾಲಿ ಇರುವ ಹುದ್ದೆಗೆ ಉಲ್ಲೇಖ (3)ರಲ್ಲಿ ವರ್ಗಾಯಿಸಿ ಆದೇಶಿಸಿಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಶ್ರೀ ಶಿವಣ್ಣ, ಸಹಾಯಕ ನಿರ್ದೇಶಕರು, (ಸ್ವತಂತ್ರ ಪ್ರಭಾರ) (ಲೀನ್ ಸ್ಥಾನ) ಜಿಲ್ಲಾ ಕೈಗಾರಿಕಾ ಕೇಂದ್ರ, ಗುಲ್ಬರ್ಗಾ ಇವರ ಸೇವೆಯು ಕೇವಲ 01 ವರ್ಷ 07 ತಿಂಗಳು ಮಾತ್ರ ಬಾಕಿ ಉಳಿದಿರುವುದರಿಂದ ಸದರಿಯವರನ್ನು ಬೆಂಗಳೂರಿನಲ್ಲಿ ಕರ್ತವ್ಯ ನಿರ್ವಹಿಸಲು ಅನುವಾಗುವಂತೆ ಅವರ ಸೇವೆಯನ್ನು ಮರು ಸ್ಥಾಪಿಸಿ ಸ್ಥಳ ನಿಯುಕ್ತಿಗೊಳಿಸಲು ಅಪರ ನಿರ್ದೇಶಕರು (ಆಡಳಿತ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರು ಕೋರಿದ್ದರು.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಶ್ರೀ ಶಿವಣ್ಣ, ಸಹಾಯಕ ನಿರ್ದೇಶಕರು (ಸ್ವತಂತ್ರ ಪ್ರಭಾರ) ಇವರ ಅಮಾನತ್ತಿನಿಂದ ತೆರವುಗೊಳಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬಹುದಾಗಿರುತ್ತದೆ ಎಂದು ತಿಳಿಸಿ ಸದರಿ ಅಧಿಕಾರಿಯವರನ್ನು ಅಮಾನತ್ತಿನಿಂದ ಬಿಡುಗಡೆ ಮಾಡಿದಲ್ಲಿ ಅವರನ್ನು ಮರು ನೇಮಕ ಮಾಡುವಾಗ ಘಟನಾ ಸ್ಥಳವನ್ನು ಹೊರತುಪಡಿಸಿ ಬೇರೆ ಸ್ಥಳದಲ್ಲಿ ನೇಮಕ ಮಾಡಲು ಹಾಗೂ ಸದರಿ ವಿಷಯದಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ನೀಡುವಂತೆ ಅಪರ ಪೊಲೀಸ್ ಮಾಹಾ ನಿರ್ದೇಶಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ತಿಳಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ವಾಕೈ 53 ಕೈಸೇವಿ 2011, ಬೆಂಗಳೂರು, ದಿನಾಂಕ: 31ನೇ ಮಾರ್ಚ್ 2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10 (5) (ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಶಿವಣ್ಣ, ಸಹಾಯಕ ನಿರ್ದೇಶಕರು, (ಸ್ವತಂತ್ರ ಪ್ರಭಾರ) ಅಮಾನತ್ತು (ಲೀನ್ ಸ್ಥಾನ) ಜಿಲ್ಲಾ ಕೈಗಾರಿಕಾ ಕೇಂದ್ರ, ಗುಲಬರ್ಗಾ ಇವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ/ಕ್ರಿಮಿನಲ್ ಮೊಕದ್ದಮೆ ಶಿಸ್ತು ಕ್ರಮಗಳನ್ನು ಕಾಯ್ದಿರಿಸಿ, ಇವರ ಅಮಾನತ್ತನ್ನು ತೆರವುಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸದರಿ ಅಧಿಕಾರಿಯವರನ್ನು ಸಹಾಯಕ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೋಲಾರ ಇಲ್ಲಿನ ಖಾಲಿ ಇರುವ ಹುದ್ದೆಗೆ ಮುಂದಿನ ಆದೇಶದವರೆಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1078

ಎಲ್.ಎಸ್.ವಾಸನ್

ಸರ್ಕಾರದ ಅಧೀನ ಕಾರ್ಯದರ್ಶಿ

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸೇವೆಗಳು)

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಶ್ರೀ ಜೈಕೃಷ್ಣ, ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಿಯೋಜನೆ ಮೇರೆಗೆ ಕಾರ್ಯನಿರ್ವಾಹಣಾಧಿಕಾರಿ, ತಾಲ್ಲೂಕು ಪಂಚಾಯತ್, ಚಾಮರಾಜನಗರ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಬಗ್ಗೆ.

ಓದಲಾಗಿದೆ :

1. ಕಾರಣ ಕೇಳುವ ನೋಟಿಸು ಸಂಖ್ಯೆ: ಸಿಐ 82 ಐಎನ್‌ಡಿ 2008, ದಿ:06–08–2009
2. ಅಧಿಕಾರಿಯವರ ಪತ್ರ 22–09–2009
3. ಸರ್ಕಾರಿ ಪತ್ರ ಸಂಖ್ಯೆ: ಸಿಐ 82 ಐಎನ್‌ಡಿ 2008 **ದಿ:30–10–2009. 06–11–2009, 16–02–2010, 16–07–2010, 09–11–2010 ಮತ್ತು 24–01–2011, 05–04–2011 ಮತ್ತು 05–07–2011**
4. ಕಾರಣ ಕೇಳುವ ನೋಟೀಸ್ ಸಂಖ್ಯೆ: ಸಿಐ 82 ಐಎನ್‌ಡಿ 2008, ದಿ: 31–01–2012.

ಪ್ರಸ್ತಾವನೆ :

ಶ್ರೀ ಜೈಕೃಷ್ಣ, ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಿಯೋಜನೆ ಮೇರೆಗೆ ಕಾರ್ಯನಿರ್ವಾಹಣಾಧಿಕಾರಿ, ತಾಲೂಕು ಪಂಚಾಯತ್, ಚಾಮರಾಜನಗರ, ಇವರು ಈ ಹಿಂದೆ 2003–2004ನೇ ಸಾಲಿನವರೆಗೆ ಸರ್ಕಾರಕ್ಕೆ ಸಲ್ಲಿಸಿರುವ ಆಸ್ತಿ ಮತ್ತು ದಾಯಿತ್ವ ತಃಖ್ತೆಗಳನ್ನು ಪರಿಶೀಲಿಸಿ ಸದರಿ ಅಧಿಕಾರಿಯವರಿಂದ ಹೆಚ್ಚುವರಿ ಮಾಹಿತಿಯನ್ನು ದಾಯಿತ್ವ ವಿವರಗಳನ್ನು ಒದಗಿಸುವಂತೆ ಉಲ್ಲೇಖ (1)ರ ಪತ್ರದಲ್ಲಿ ಕೋರಲಾಗಿದ್ದು, ಸದರಿ ಪತ್ರಕ್ಕೆ ಸಂಬಂಧಪಟ್ಟಂತೆ ಅಧಿಕಾರಿಯವರು ಉಲ್ಲೇಖ (2)ರ ಪತ್ರದೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುವ ಮಾಹಿತಿ/ವಿವರಗಳನ್ನು ಪರಿಶೀಲಿಸಲಾಗಿ, ಈ ಬಗ್ಗೆ ಹೆಚ್ಚುವರಿ ಮಾಹಿತಿಯನ್ನು ಹಾಗೂ **2004–2005 ರಿಂದ 2010–11ನೇ ಸಾಲುಗಳವರೆಗಿನ ಆಸ್ತಿ ಮತ್ತು ದಾಯಿತ್ವ ತಃಖ್ತೆಗಳನ್ನು ಒದಗಿಸುವಂತೆ ಉಲ್ಲೇಖ (3)ರ ಪತ್ರಗಳಲ್ಲಿ ಅಧಿಕಾರಿಯವರಿಗೆ ತಿಳಿಸಲಾಗಿತ್ತು.**

ಆದರೆ, ಸದರಿ ಅಧಿಕಾರಿಯವರು ಮಾಹಿತಿ/ವಿವರಗಳನ್ನು ಒದಗಿಸದೇ ಇದ್ದ ಕಾರಣ, ಉಲ್ಲೇಖ (4) ರನ್ವಯ ಕಾರಣ ಕೇಳುವ ನೋಟಿಸಿನೊಂದಿಗೆ ಅನುಬಂಧ 1–4ನ್ನು ಜಾರಿಗೊಳಿಸಿ 15 ದಿನಗಳೊಳಗಾಗಿ ವಿವರಣೆಯನ್ನು ನೀಡುವಂತೆ ತಪ್ಪದಲ್ಲಿ ನಿಯಮಾವಳಿ ರೀತ್ಯ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಅಧಿಕಾರಿಯವರಿಗೆ ತಿಳಿಸಲಾಗಿತ್ತು ಆದರೆ, ಅಧಿಕಾರಿಯವರು ಸದರಿ ನೋಟೀಸಿಗೆ ಯಾವುದೇ ಉತ್ತರ/ಮಾಹಿತಿ/ವಿವರಗಳನ್ನು ಸಲ್ಲಿಸಿರುವುದಿಲ್ಲ.

ಸರ್ಕಾರವು ಸದರಿ ಅಧಿಕಾರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಐ 82 ಐಎನ್‌ಡಿ 2008, ಬೆಂಗಳೂರು ದಿನಾಂಕ: 31ನೇ ಮಾರ್ಚ್ 2012

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಜೈಕೃಷ್ಣ, ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಿಯೋಜನೆ ಮೇರೆಗೆ ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯತ್, ಚಾಮರಾಜನಗರ, ಇವರು ಸರ್ಕಾರದಿಂದ ಕೋರಿರುವ ಮಾಹಿತಿಯನ್ನು ಹಾಗೂ 2004–2005ನೇ ಸಾಲಿನಿಂದ 2010–2011ನೇ ಸಾಲುಗಳವರೆಗಿನ ಆಸ್ತಿ ಮತ್ತು ದಾಯಿತ್ವ ತಃಖ್ತೆಗಳನ್ನು ನಿಗಧಿತ ಅವಧಿಯಲ್ಲಿ ಸರ್ಕಾರಕ್ಕೆ ಸಲ್ಲಿಸದೇ ಇರುವುದು ಕರ್ನಾಟಕ ಸಿವಿಲ್ ಸೇವಾ (ನಡತೆ)ನಿಯಮಾವಳಿ 1966ರ ನಿಯಮ 3 (i) (ii) (iii) ರ ನಿಯಮ ಹಾಗೂ ನಿಯಮ 23ನ್ನು ಉಲ್ಲಂಗಿಸಿದ್ದು, ಈ ಉಲ್ಲಂಘನೆಯನ್ನು ದುರ್ನಡತೆ ಎಂದು ಪರಿಗಣಿಸಿ ಕೆ.ಸಿ.ಎಸ್. (ಸಿಸಿಎ) ನಿಯಮಾವಳಿ 1957ರ ನಿಯಮ 12 ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು **"ಶ್ರೀ ಚಂದ್ರಶೇಖರ ಗುರುಬಸಪ್ಪ ಹುನಗುಂದ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 303, ಜೆ. 2ಬಿ ಜ್ಯೂಡಿಷಿಯಲ್ ಬ್ಲಾಕ್ ಎನ್‌ಜಿವಿ ಕಾಂಪ್ಲೆಕ್ಸ್, ಕೋರಮಂಗಲ, ಬೆಂಗಳೂರು–560047"** ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮದಡಿ ಶಿಸ್ತು ಪ್ರಾಧಿಕಾರದ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಗಳ ಮುಂದೆ ಮಂಡಿಸಲು **ಉಪ ನಿರ್ದೇಶಕರು (ಆಡಳಿತ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು** ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಿದೆ.

ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಕೈಗಾರಿಕಾಭಿವೃದ್ಧಿ ಆಯಕ್ತರ ಕಛೇರಿಯಲ್ಲಿ ಅಥವಾ ಅವರು ಗುರುತಿಸಿ ನಿಗಡಿಪಡಿಸುವ ಸ್ಥಳದಲ್ಲಿ ನಡೆಸತಕ್ಕದ್ದು. ಈ ಉದ್ದೇಶಕ್ಕಾಗಿ ಲಭ್ಯವಿರುವ ಶೀಘ್ರಲಿಪಿಗಾರರು/ಬೆರಳಚ್ಚುಗಾರರ ಸಹಾಯವನ್ನು ಮತ್ತು ಲೇಖನ ಸಾಮಗ್ರಿಗಳನ್ನು ಒದಗಿಸಲು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಸೂಚಿಸಲಾಗಿದೆ.

ವಿಚಾರಣಾಧಿಕಾರಿಗಳು ಮೂರು ತಿಂಗಳೊಳಗಾಗಿ ವಿಚಾರನೆಯನ್ನು ಪೂರೈಸಿ ವಿಚಾರಣಾ ವರದಿಯನ್ನು ಶಿಸ್ತು ಪ್ರಾಧಿಕಾರಕ್ಕೆ ಸಲ್ಲಿಸುವಂತೆ ಆದೇಶಿಸಿದೆ. ಸರ್ಕಾರಿ ಆದೇಶ ಸಂಖ್ಯೆ: **ಸಿಆಸುಇ 6 ಸೇಇವಿ 2010 ದಿ:28–04–2011** ರನ್ವಯ ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳು ಸಂಭಾವನೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1079

ಎಲ್.ಎಸ್.ವಾಸನ್

ಸರ್ಕಾರದ ಅಧೀನ ಕಾರ್ಯದರ್ಶಿ

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, (ಸೇವೆಗಳು)

COMMERCE AND INDUSTRIES SECRETARIAT

CORRIGENDUM No. CI 88 SPI 2012, BANGALORE, DATED:28-03-2012

Sub : Administrative sanction for procurement of Consultant for Event Management services for conducting Global Investors Meet 2012.

Read : 1. Government Order No. CI 88 SPI 2012, dated:24-03-2012

2. Request of the Managing Director, Karnataka Udyog Mitra dated:28-03-2012

In the order portion of the Government Order No. CI 88 SPI 2012, dated:24-03-2012, the word **"M/s MM Activ Pvt. Ltd."** Shall be read as **"M/s MM Activ Sci-Tech Communications Pvt. Ltd."**

Other terms and conditions remain the same as in the G.O. read above.

By Order and in the name of the Governor of Karnataka,

PR.1080

Jyothi R.J.

Desk Officer (Technical Cell)

Commerce and Industries Department

ಇಂಧನ ಸಚಿವಾಲಯ

ವಿಷಯ : ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟಗಳಿಗೆ ಪಿಂಚಣಿ ಹಣ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ : 1. ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಇ 14 ಪಿಎಸ್ಆರ್ 2002 ದಿನಾಂಕ 31–05–2002.

2. ಸರ್ಕಾರಿ ಆದೇಶ ಸಂಖ್ಯೆ: ಡಿಇ 15 ಪಿಎಸ್ಆರ್ 2002 ದಿನಾಂಕ: 19–12–2002

3. ಸರ್ಕಾರಿ ಆದೇಶ ಸಂಖ್ಯೆ: ಇಎನ್ 19 ಪಿಎಸ್ಆರ್ 2011 ದಿನಾಂಕ:29–04–2011, 10–06–2011, 03–08–2011, 10–11–2011, 22–12–2011 ಮತ್ತು 30–01–2012

4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 298 ವೆಚ್ಚ–1/2012, ದಿನಾಂಕ:31–03–2012

ಪ್ರಸ್ತಾವನೆ :

1. ಮೇಲೆ (1)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ (ಕವಿಪ್ರನಿನಿ) ಉದ್ಯಮಗಳು ಮತ್ತು ಅದರ ಸಿಬ್ಬಂದಿಯು ವಿದ್ಯುಚ್ಛಕ್ತಿ ವಿತರಣಾ ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ವರ್ಗಾವಣೆ) ನಿಯಮಗಳು ,2002, ನಿಯಮ 4(13)(1) ಪ್ರಕಾರ ನಿರ್ದಿಷ್ಟಪಡಿಸಲಾದ ಸಿಬ್ಬಂದಿಯ ಸೇವೆಗಳನ್ನು ಎರಡನೇ ವರ್ಗಾವಣೆ ದಿನಾಂಕದ ಜಾರಿಗೆ ಮೊದಲು ಮತ್ತು ಕರ್ನಾಟಕ ವಿದ್ಯುತ್ ಮಂಡಳಿ ಮತ್ತು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಕ್ಕೆ (ಕವಿಪ್ರನಿನಿ) ನಿರ್ದಿಷ್ಟಪಡಿಸಲಾದ ಸಿಬ್ಬಂದಿಯು ಸಲ್ಲಿಸಿದ ಸೇವೆಗಳಿಗಾಗಿ ನಿವೃತ್ತಿ ವೇತನ ನಿಧಿಗಳು ಮತ್ತು ಶಾಸನ ಪ್ರದತ್ತ ಹಾಗೂ ಇತರೇ ಸಿಬ್ಬಂದಿ ಸಂಬಂಧಿತ ನಿಧಿಗಳ ಸಂಗ್ರಹಣೆಗೆ ರಾಜ್ಯ ಸರ್ಕಾರವು ಜವಾಬ್ದಾರಿಯಾಗಿರುವುದೇ ಹೊರತು ವಿದ್ಯುತ್ ಸರಬರಾಜು ಕಂಪನಿಯದಲ್ಲ ಮತ್ತು ನಿರ್ದಿಷ್ಟಪಡಿಸಲಾದ ಸಿಬ್ಬಂದಿಯ ಎರಡನೇ ವರ್ಗಾವಣೆ ಜಾರಿಯಾದ ಆಯಾಯ ದಿನಾಂಕದಲ್ಲಿದ್ದಂತೆ ನಿಧಿ ಸಂಗ್ರಹಣೆ ಮಾಡದ ಮಟ್ಟಿಗೆ ರಾಜ್ಯ ಸರ್ಕಾರವು ಹೊಣೆಯಾಗಿರುವುದೇ ಹೊರತು ವಿದ್ಯುತ್ ಸರಬರಾಜು ಕಂಪನಿಯದಲ್ಲವೆಂದು ತಿಳಿಸಲಾಗಿದೆ.
2. ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದ ಪ್ರಕಾರ, ಕವಿಪ್ರನಿನಿ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ನ್ನು, "ಕವಿಪ್ರನಿನಿ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗಳೆಂದು" ಮರುನಾಮಕರಣ ಮಾಡಿ, Pay as You Go ಪದ್ಧತಿಯನ್ನು ಅನುಸರಿಸಿ ಕವಿಪ್ರನಿನಿ ಮತ್ತು ಎಸ್ಕಾಂಗಳ ನೌಕರರ ನಿವೃತ್ತಿ ಸೌಲಭ್ಯಗಳನ್ನು (Terminal Benefits) ಪಾವತಿಸಲು ಒಪ್ಪಿಗೆ ನೀಡಿದೆ.
3. 2011–12ನೇ ಸಾಲಿನ ಆಯವ್ಯಯದಲ್ಲಿ ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್‌ಗಳಿಗೆ ಪಿಂಚಣಿ ವಂತಿಗಾಗಿ "2801–80–101–1–13–106 (ಯೋಜನೇತರ)" ಲೆಕ್ಕಶೀರ್ಷಿಕೆಯಡಿ ರೂ.400.00 ಕೋಟಿಗಳನ್ನು ನಿಗದಿಪಡಿಸಲಾಗಿರುತ್ತದೆ. ಈ ಮೊತ್ತವನ್ನು ಸಂಪೂರ್ಣವಾಗಿ ಮೇಲೆ ಕ್ರಮಾಂಕ–(3)ರಲ್ಲಿ ಓದಲಾದ ಸರ್ಕಾರಿ ಆದೇಶಗಳಲ್ಲಿ, 2011–12ನೇ ಸಾಲಿಗೆ ಬಿಡುಗಡೆ ಮಾಡಿದೆ.
4. ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗಳ ಕೋರಿಕೆಯನ್ನು ಸರ್ಕಾರವು ಪರಿಶೀಲಿಸಿ, 2011–12ನೇ ಸಾಲಿಗೆ ರೂ.50 ಕೋಟಿಗಳ ಅನುದಾನ ಬಿಡುಗಡೆ ಮಾಡಲು ಪೂರಕ ಅಂದಾಜುಗಳು–III ರಲ್ಲಿ ಹಣ ಒದಗಿಸಿದೆ. ಈ ಅನುದಾನ ಬಿಡುಗಡೆ ಮಾಡಲು ಪ್ರಸ್ತುತ ಸರ್ಕಾರಿ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 19 ಪಿಎಸ್ಆರ್ 2011, ಬೆಂಗಳೂರು ದಿನಾಂಕ: 31ನೇ ಮಾರ್ಚ್ 2012

1. ಸರ್ಕಾರವು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗೆ 2011–12ನೇ ಸಾಲಿಗೆ ರೂ.50.00 ಕೋಟಿಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.
2. ಈ ವೆಚ್ಚವನ್ನು "2801–80–101–1–13–106" ಸಹಾಯಧನ (ಯೋಜನೇತರ) ಲೆಕ್ಕ ಶೀರ್ಷಿಕೆಯಡಿ ಭರಿಸತಕ್ಕದ್ದು.
3. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಸರ್ಕಾರದ ಪ್ರಧಾನವು ಕಾರ್ಯದರ್ಶಿ, ಇಂಧನ ಇಲಾಖೆಯವರ ಮೇಲು ರುಜುವನ್ನು ಸ್ವೀಕೃತಿ ರಸೀದಿಯಲ್ಲಿ ಪಡೆದು ಹಣವನ್ನು ಪಡೆಯತಕ್ಕದ್ದು.
4. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು "ಕವಿಪ್ರನಿನಿ ಮತ್ತು ಎಸ್ಕಾಂಗಳ ಪಿಂಚಣಿ ಮತ್ತು ಗ್ರಾಚ್ಯುಟಿ ಟ್ರಸ್ಟ್‌ಗೆ" ಬಿಡುಗಡೆ ಮಾಡಿರುವ ಅನುದಾನದ ಬಳಕೆಯ ಬಗ್ಗೆ ದೃಢೀಕರಣ ಪತ್ರ (Utilisation Certification) ನ್ನು ಸಲ್ಲಿಸತಕ್ಕದ್ದು.
5. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 298 ವೆಚ್ಚ–1/2012 ದಿನಾಂಕ 30–03—2012ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1081

ಕೌಸಲ್ಯಾ

ಸರ್ಕಾರದ ಅಧೀನ ಕಾರ್ಯದರ್ಶಿ

ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಹಂಚಿಕೆಯಾಗಿರುವ 200 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 31.20 ಮೆ.ವ್ಯಾ. ಸಾಮರ್ಥ್ಯವನ್ನು ಮೆ: ತಡಸ್ ವಿಂಡ್ ಎನರ್ಜಿ ಲಿಮಿಟೆಡ್, ರವರಿಗೆ ವರ್ಗಾವಣೆ ಮಾಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಇಎನ್ 42 ಎನ್‌ಸಿಇ 2006, ದಿನಾಂಕ : 20–04–2006.
2. ಸರ್ಕಾರದ ಆದೇಶ ಸಂಖ್ಯೆ : ಇಎನ್ 462 ಎನ್‌ಸಿಇ 2006, ದಿನಾಂಕ : 19–12–2006.
3. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಎನ್ 322 ಎನ್‌ಸಿಇ 2011, ದಿನಾಂಕ : 28–10–2011.
4. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/TWEL-31.20 MW (VWILLP-200 MW)/2012/964, ದಿನಾಂಕ : 09–27–03–2012

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ: Logaer Machines (I) Ltd., ಕಂಪನಿಗೆ ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ 150.66 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ: Logaer Machines (I) Ltd. ಕಂಪನಿಯ ಹೆಸರನ್ನು ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಎಂದು ಬದಲಾಯಿಸಲು ಹಾಗೂ ಮೆ: Logaer Machines (I) Ltd. ರವರಿಗೆ ಹಂಚಿಕೆಯಾಗಿರುವ ಎಲ್ಲಾ ಪವನ ವಿದ್ಯತ್ ಯೋಜನೆಗಳನ್ನು ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಇವರಿಗೆ ವರ್ಗಾಯಿಸಲು ಅನುಮೋದನೆ ನೀಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ, ಕಂಪನಿಗೆ ಮಂಜೂರಾಗಿದ್ದ 150.66 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅಂಶಿಕ ಸಾಮರ್ಥ್ಯವಾದ 69.63 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮಥ್ಯವನ್ನು 200 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹೆಚ್ಚಿಸಿ ಆದೇಶಿಸಲಾಗಿತ್ತು.

Sl.No.	Geographical Area Detais of the Project	Sanctioned capacity in MW	Enhancement Proposed in MW	No.of WTGs & rating in KW
1.	A large plain area spread around the village of Timmapura, Kabnur, Ingalagi, Ramapura in Haveri and Dharwad District and it lso consists of plains with higher elevations and has two main peaks. The proposed area is held by the following Geographical co-ordinates:- **Latitude**: 15˚1'55" - 15˚8'0"N **Longitude:**75˚08'56"-75˚14'23"E **Ridge peaks:** 701, 714, 682, 717, 713, 698, 733, 722m AMSL	19.80 MW	59.40 MW	79.20 MW (99 x 800 KW)
2.	A very vast area encompasses high plains and small	49.83 (part	70.97	120.80 MW

	ridges spread around the villages Kongapura, Sisvinhal, Shanlipur, Huvinsigli, Sigli, Gudgeri and Ramgeri, A railway track runs into this area. This area has moderate evelations varying from 580 to 680 Mtrs and also consists of several peaks. The main places of this areas are Halgur, Gudgeri, Lakshmeshwar, Sigli, Karadgi, Nelgudda etc and the area is covered in the following Geographical co-ordinates:- **Latitued :** 15˚0'0" - 15˚10'30"N **Longitude:** 75˚15'0" - 75˚28'19"E **Ridge peaks:** 681, 671, 676, 638, 624, 698, 664, 701, 720, 663, 682, 664, 708, 665, 664m AMSL	capacity of 67.65 MW)		(151 x 800 KW)

ಮೇಲೆ ಓದಲಾದ (4)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಹಾವೇರಿ ಮತ್ತು ಧಾರವಾಡ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 200 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 31.20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಮೆ:ತಡಸ್ ವಿಂಡ್ ಎನರ್ಜಿ ಲಿಮಿಟೆಡ್ ರವರಿಗೆ ವರ್ಗಾಯಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ. ಅಲ್ಲದೆ, ಸದರಿ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿದ್ದು, ಈ ಯೋಜನೆಯನ್ನು 31–03–2012ರೊಳಗೆ ಅನುಷ್ಠಾನಗೊಳಿಸುವ, ಉತ್ಪಾದನೆ ಆಗುವ ವಿದ್ಯುತ್ತನ್ನು REC Mechanism ನ ಅಡಿಯಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಪ್ಪಂದದ ಮೂಲಕ ಸರಬರಾಜು ಮಾಡಲಾಗುವುದೆಂದು ವರದಿ ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ.:

ಸರ್ಕಾರದ ಆದೇಶ ಸಂಖ್ಯೆ : ಇಎನ್ 138 ಎನ್‌ಸಿಇ 2012, ಬೆಂಗಳೂರು, ದಿನಾಂಕ: 29ನೇ ಮಾರ್ಚ್ 2012

ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಹಾವೇರಿ ಮತ್ತು ಧಾರವಾಡ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 200 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ 31.20 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಮೆ: ತಡಸ್ ವಿಂಡ್ ಎನರ್ಜಿ ಲಿಮಿಟೆಡ್ ರವರಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು **ವರ್ಗಾಯಿಸಲಾಗಿದೆ:–**

Land details of the Project

Village Name	Taluk/District	MW	Land Survey Number	WTG's No.	Extent of Land per WTG (Acres)	Lattitude, Longitude and Ridge peaks
Mantrodi	Savanoor/Haveri	0.8	108	264	1.1	Lat: 15˚0 53.2 N Long:75˚16'37.7" E
Mantrodi	Savanoor/Haveri	0.8	83/3A/1	265	1.1	Lat:15˚033.8 N Long:75˚16'33.8"E
Jakkinakati	Savanoor/Haveri	0.8	23/1C	263	1.1	Lat:15˚01'53.4 N Long:75˚16'53.4"E
Mantrodi	Savanoor/Haveri	0.8	82/2	127	1.1	Lat 15˚0'24.1 N Long:75˚17'24.1" E
Jakkinakati	Savanoor/Haveri	0.8	45/1	138	1.1	Lat 15˚03'20.3 N Long: 75˚16'20.3" E
Kongapura	Shiggaon/Haveri	0.8	19/3A	137	1.1	Lat:15˚03'22.5 N Long:75˚16'22.5" E
Jakkinkati	Savanoor/Haveri	0.8	82/85	99	1.1	Lat: 15˚02'47.8 N Long:75˚16'47.8" E
Mantrodi	Savanoor/Haveri	0.8	94	125	1.1	Lat:15˚0'6.9 N Long: 75˚17'6.9" E
Jakkinkati	Savanoor/Haveri	0.8	74/2C	108	1.1	Lat 15˚02'26.7 N Long:75˚17'26.7"E

Mantrodi	Savanoor/Haveri	0.8	146	112	1.1	Lat 15˚0'19.8 N Long: 75˚17'19.8" E
Mantrodi	Savanoor/Haveri	0.8	135	120	1.1	Lat:15˚0"35.3 N Long: 75˚17'35.3"E
Mantrodi	Savanoor/Haveri	0.8	80	123	1.1	Lat: 15˚0'28.6 N Long: 75˚17'28.6"E
Jakkinkati	Savanoor/Haveri	0.8	73	106	1.1	Lat: 15˚02'23.1 N Long: 75˚17'23.1" E
Jakkinkati	Savanoor/Haveri	0.8	73	105	1.1	Lat15˚022'22 N Long:75˚17'22" E
Mantrodi	Savanoor/Haveri	0.8	144/3	119	1.1	Lat::15˚02'22.6 N Long:75˚17'22.6"E
Kongapura	Shiggaon/Haveri	0.8	45/2-p2	102	1.1	Lat:15˚02'3.9 N Long:75˚16'3.9" E
Madapura	Savanoor/Haveri	0.8	25/1	133	1.1	Lat:15˚03'21.6 N Long:75˚17'21.6" E
Madapura		0.8	50/2	131	1.1	Lat:15˚`03'1.2 N Long:75˚17'1.2" E
Madapura		0.8	23/2	135	1.1	Lat:15˚03'22.6 N Long:75˚17'22.6" E
Mantrodi		0.8	154/1+2B	113	1.1	Lat:15˚01'26.3 N Long:75˚17'26.3" E
Madapura		0.8	23/2	134	1.1	Lat:15˚03'24.9 N Long:75˚17'24.9" E
Madapura		0.8	50/2	130	1.1	Lat:15˚03'3.7 N Long:75˚17'3.7" E
Madapura		0.8	51/2	129	1.1	Lat:15˚03'52.1 N Long:75˚16'52.1" E
Kongapura	Shiggaon/Haveri	0.8	45/2p2	101	1.1	Lat:15˚02'5.4 N Long:75˚16'5.4" E
Mantrodi		0.8	143/3	118	1.1	Lat:15˚0'25.6 N Long:75˚17'25.6" E
Madapura	Savanoor/Haveri	0.8	47/1A	132	1.1	Lat: 15˚03'12.7 N Long:75˚17'12.7" E
Mantrodi		0.8	69/1+2B	121	1.1	Lat: 15˚0'48.6 N Long: 75˚17'48.6" E
Hiremallur	Shiggaon/Haveri	0.8	95/3B	115	1.1	Lat:15˚01'51.8 N Long:75˚16'51.8" E
Mantrodi		0.8	69/1+2B	122	1.1	Lat: 15˚0'49.6 N Long: 75˚17'49.6" E
Mantrodi	Savanoor/Haveri	0.8	159/2B	114	1.1	Lat:15˚01'25.4 N Long: 75˚17'25.4" E
Jakkinkati		0.8	37/1	103	1.1	Lat:15˚02'33.8 N Long:75˚16'33.8"E

Kongapura	Shiggaon/Haveri	0.8	42/1+2A	100	1.1	Lat: 15˚02'6.9 N Long: 75˚16'6.9"E
Jakkinkati		0.8	74/1-C	107	1.1	Lat:15˚02'24.5 N Long:75˚17'24.5" E
Mantrodi		0.8	156/1A	116	1.1	Lat: 15˚01'18.8 N Long: 75˚17'18.8" E
Mantrodi		0.8	156/1B	117	1.1	Lat:15˚0'20.7 N Long:75˚17'20.7" E
Jakkinkati	Savanoor/Haveri	0.8	22	109	1.1	Lat:15˚01'59.1 N Long: 75˚16'59.1" E
Jakkinkati		0.8	23/1A	111	1.1	Lat: 15˚01'49.9 N Long: 75˚16'49.9" E
Jakkinkati		0.8	28/1	104	1.1	Lat: 15˚02'45.9 N Long:75˚16'45.9" E
Jakkinkati		0.8	18/3	110	1.1	Lat:15˚01'16.7 N Long:75˚17'16.7" E
		31.20				

1. **ಮೆ: ತಡಸ್ ವಿಂಡ್ ಎನರ್ಜಿ ಲಿಮಿಟೆಡ್** ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06–01–2012ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. **ಮೆ: ತಡಸ್ ವಿಂಡ್ ಎನರ್ಜಿ ಲಿಮಿಟೆಡ್** ರವರು REC Mechanism ನ ಅಡಿಯಲ್ಲಿ ವಿದ್ಯುತ್ ಖರೀದಿ ಒಪ್ಪಂದವನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇವರೊಂದಿಗೆ ಮಾಡಿಕೊಳ್ಳತಕ್ಕದ್ದು.
3. 'ಸದರಿ ಯೋಜನೆಯನ್ನು ದಿನಾಂಕ 30–04–2012ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು. ಈ ಕುರಿತಂತೆ ಕ್ರೆಡಲ್ ಅಭಿವೃದ್ಧಿದಾರರಿಂದ ಒಪ್ಪಿಗೆ ಪತ್ರ ಪಡೆಯತಕ್ಕದ್ದು. (commitment letter)
4. ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1082

ಕೌಸಲ್ಯಾ

ಸರ್ಕಾರದ ಅಧೀನ ಕಾರ್ಯದರ್ಶಿ

ಇಂಧನ ಇಲಾಖೆ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಕಲಂ–9 ರನ್ವಯ ಟೆಂಡರ್ ಕರೆಯುವ ಪ್ರಾಧಿಕಾರ ಮತ್ತು ಟೆಂಡರ್ ಒಪ್ಪಿಗೆ ನೀಡುವ ಪ್ರಾಧಿಕಾರದ ನಿಯುಕ್ತಿ ಬಗ್ಗೆ.

ಪ್ರಸ್ತಾವನೆ :

ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 20 ಇಕಾಅ 2012 ದಿನಾಂಕ: 6–03–2012 ರ ಪ್ರಕಾರ 'ಸಕಾಲ ಮಿಷನ್': ಅನ್ನು ಸಿಆಸುಇ (ಆಸು) ಯ ಅಂಗವಾಗಿ ರಚಿಸಲಾಗಿದೆ.

ಸಕಾಲ ಮಿಷನ್ ಅನ್ನು ಒಂದು ಅಭಿಯಾನ ಮೂಲಕ ಸಕಾಲ ಸೇವೆಗಳ ಖಾತರಿ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದಕ್ಕೆ ಎಲ್ಲಾ ಬೇಕಾಗಿರತಕ್ಕ ಕ್ರಮವನ್ನು ಸಮಯಬದ್ಧವಾಗಿ ತೆಗೆದುಕೊಳ್ಳುವ ಅವಶ್ಯಕತೆ ಇರುತ್ತದೆ. ಈ ಸಂದರ್ಭದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999. ಕಲಂ 9 ರನ್ವಯ ಸಕಾಲ ಮಿಷನ್ ಎಲ್ಲಾ ಟೆಂಡರ್‌ಗಳನ್ನು ಕರೆಯುವ ಸಲುವಾಗಿ "ಟೆಂಡರ್ ಅಂಗೀಕಾರ ಪ್ರಾಧಿಕಾರ" ಮತ್ತು "ಟೆಂಡರ್ ಕರೆಯುವ ಪ್ರಾಧಿಕಾರ" ನೇಮಕಾತಿ ಆದೇಶ ಹೊರಡಿಸಬೇಕಾಗಿರುತ್ತದೆ. ಅದರಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 136 ಇಕಾಅ 2012 ಬೆಂಗಳೂರು, ದಿನಾಂಕ: 25–05–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 (ಕರ್ನಾಟಕದ 2000ರ 29ನೇ ಅಧಿನಿಯಮ) ರಲ್ಲಿನ ಕಲಂ 9 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಇಲಾಖೆ (ಆಡಳಿತ ಸುಧಾರಣೆ)ಯಿಂದ ಈ ಕೆಳಕಂಡ ಅಧಿಕಾರಿಗಳನ್ನು "ಸಕಾಲ ಮಂಡಳಿಯ" ಎಲ್ಲಾ ಟೆಂಡರ್ ಮತ್ತು ಸಂಗ್ರಹಣೆಗಳ ಸಲುವಾಗಿ ನೇಮಿಸಲಾಗಿದೆ.

1) ಟೆಂಡರ್ ಅಂಗೀಕಾರ ಪ್ರಾಧಿಕಾರ	ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಿಆಸುಇ (ಆಸು), ಮತ್ತು ಮಂಡಳಿ ನಿರ್ದೇಶಕರು, ಸಕಾಲ ಮಂಡಳಿ
2) ಟೆಂಡರ್ ಕರೆಯುವ ಪ್ರಾಧಿಕಾರ	ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಡಳಿತ ಸುಧಾರಣೆ)

ಈ ಆದೇಶವನ್ನು ಆರ್ಥಿಕ ಇಲಾಖೆ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 1996, ದಿನಾಂಕ: 10–07–1996ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಡಾ|| ಗೀತಾ ಎಲ್.

ಸರ್ಕಾರದ ಅಧೀನ ಕಾರ್ಯದರ್ಶಿ

ಪಿಆರ್ ನಂ. 1501 ಸಿಆಸುಇ ಇಲಾಖೆ. (ಆಸು–ನಾಗರೀಕ ಸೇವೆಗಳು)

HOME SECRETARIAT

Sub: Extension of time limit upto 30-09-2012 for Private Security Agencies/Companies for Registration-Reg.

Read: Letter No. ISD/DIGP-01/2009-10, dated 04-05-2012 of Additional Director General of Police, Internal Security Division, Bangalore.

PREAMBLE:

As per section 4 of the Private Security Agencies (Regulation) Act-2005, the Agencies which provide Private Security Services shall obtain licence within a period of one year of their inception. There are a number of agencies/organizations providing security services and only some have registered for obtaining licence, so far.

Due to several reasons, not many agencies are fully aware of the need to obtain a licence. In this connection discussion was held in the meeting taken on 28-03-2012 under the Chairmanship of Principal Secretary, Home Department regarding the need to bring all such agencies under the ambit of Government. It was decided to permit all such agencies/organization providing Private Security personnel, to apply for a licence under the Private Security Agencies (Regulations) Act-2005. It was hence decided to extend the time limit up to 30th September 2012 to register Private Security Service Providers.

Hence this Order.

Government Order No. HD 274 SST 2010 Bangalore, Dated: 21-05-2012

Government is pleased to extend the time limit for Private Security Agencies/Companies to register themselves for obtaining licence, under the Private Security Agencies (Regulation) Act-2005, on or before 30-09-2012.

This Order shall come into force with immediate effect.

By order and and in the name of the Governor of Karnataka

Prakash Y.K.

PR No. 1502 Under Secretary to Government

Home Department (Law and Order)

ಲೋಕೋಪಯೋಗಿ, ಬಂದರುಗಳು ಹಾಗೂ ಒಳನಾಡು ಜಲಸಾರಿಗೆ ಸಚಿವಾಲಯ

ವಿಷಯ : ವಿಜಾಪೂರ ಜಿಲ್ಲೆ ಸಿಂದಗಿ ತಾಲ್ಲೂಕಿನ ಮಾರಟಗಿ ಕ್ರಾಸ್‌ದಿಂದ ಸುಕ್ಷೇತ್ರ ಘತ್ತರಗಿ ಭಾಗ್ಯವಂತ ದೇವಸ್ಥಾನಕ್ಕೆ ಹೋಗುವ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ : 1. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ, ಇವರ ಪತ್ರಗಳು ಸಂಖ್ಯೆ: ಸಿಇಎನ್/ತಾಸ––5/ಸಇ೦1/ವಿಜಾಪೂರ ರಸ್ತೆ/2011–12/10561 ದಿನಾಂಕ: 11–01–2012.

ಪ್ರಸ್ತಾವನೆ :

1. ಮೇಲೆ ಓದಲಾದ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ, ಇವರ ಪತ್ರದಲ್ಲಿ ಇವರು ವಿಜಾಪೂರ ಜಿಲ್ಲೆ ಸಿಂದಗಿ ತಾಲ್ಲೂಕಿನ ಮಾರಟಗಿ ಕ್ರಾಸ್‌ನಿಂದ ಸುಕ್ಷೇತ್ರ ಘತ್ತರಗಿ ಭಾಗ್ಯವಂತ ದೇವಸ್ಥಾನಕ್ಕೆ ಹೋಗುವ ರಸ್ತೆಯ ಅಭಿವೃದ್ಧಿ ಪ್ರಸ್ತಾವನೆಯನ್ನು ರೂ. 900.00 ಲಕ್ಷಗಳ ಅಂದಾಜು ಪಟ್ಟಿಯೊಂದಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಸಲ್ಲಿಸಿರುತ್ತಾರೆ.

(i) ಸದರಿ ರಸ್ತೆಯು ಒಟ್ಟು ಉದ್ದ 9.5 ಕಿ.ಮೀ ಇದ್ದು (3.3) ಕಿಮೀ. ಜಿಲ್ಲಾ ಮುಖ್ಯ ರಸ್ತೆಯಾಗಿದ್ದು, ಉಳಿದ 6.2 ಕಿ.ಮೀ ರಸ್ತೆಯು ರಾಜ್ಯ ಹೆದ್ದಾರಿ ಸಂಖ್ಯೆ: 124ರ ಬರಖೇಡ–ಬೀಳಗಿ ರಸ್ತೆ ಸರಪಳಿ 116.80 ಕಿ.ಮೀ. ಯಿಂದ 123.00 ಕಿ.ಮೀ.) ಭಾಗವಾಗಿರುತ್ತದೆ.

(ii) ಉತ್ತರ ಕರ್ನಾಟಕದ ಪ್ರಮುಖ ದೇವಸ್ಥಾನವಾದ ಶ್ರೀ ಘತ್ತರಗಿ ಭಾಗ್ಯವಂತೆ ದೇವಸ್ಥಾನವನ್ನು ಸಂದರ್ಶಿಸಲು ಸದರಿ ರಸ್ತೆಯ ಮುಖಾಂತರ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಪ್ರಯಾಣಿಸುತ್ತಿರುವುದರಿಂದ ಈ ರಸ್ತೆಯನ್ನು ಅಭಿವೃದ್ಧಿಗೊಳಿಸುವುದು

ಅವಶ್ಯವಾಗಿದೆ. ಅಲ್ಲದೇ ಫ್ಯಾಕ್ಟರಿಯನ್ನು ಸಿಂಧಗಿ ತಾಲ್ಲೂಕಿನ ಕಬ್ಬು ಬೆಳೆಗಾರರು ತಮ್ಮ ಕಬ್ಬು ಫಸಲನ್ನು ಈ ರಸ್ತೆಯ ಮೂಲಕವೇ ಶ್ರೀ ರೇಣುಕಾ ಶುಗರ್ ಕಾರ್ಖಾನೆಗೆ ಸಾಗಿಸುತ್ತಾರೆ.

2. ಇದೇ ವೇಳೆಯಲ್ಲಿ ಶ್ರೀ ರೇಣುಕಾ ಶುಗರ್ ಫ್ಯಾಕ್ಟರಿಯ ನಿರ್ದೇಶಕರು ತಮ್ಮ ದಿನಾಂಕ: 27-10-2011 ಮತ್ತು 25-01-2012 ಪತ್ರಗಳಲ್ಲಿ ಸದರಿ ರಸ್ತೆಯ ಅಭಿವೃದ್ಧಿಗಾಗಿ ಅಂದಾಜು ಮೊತ್ತದ 1/3ನೇ ಭಾಗದ ಮೊತ್ತವಾದ ರೂ. 300.00 ಲಕ್ಷಗಳನ್ನು ಭರಿಸಲು ತಮ್ಮ ಒಪ್ಪಿಗೆ ನೀಡಿರುತ್ತಾರೆ. ಇದಕ್ಕೆ ಒಪ್ಪಿದಲ್ಲಿ, ಲೋಕೋಪಯೋಗಿ ಇಲಾಖೆಯು ಅಂದಾಜು ಮೊತ್ತದ ಉಳಿದ ಭಾಗವಾದ ರೂ. 600.00 ಲಕ್ಷಗಳನ್ನು ಭರಿಸುವದರೊಂದಿಗೆ, ಲೋಕೋಪಯೋಗಿ ಇಲಾಖೆಯು ಶ್ರೀ ರೇಣುಕಾ ಶ್ಯೂಗರ್ಸ್ ಲಿಮಿಟೆಡ್‌ರರೊಂದಿಗೆ ಮೆಮೊರಂಡಮ್ ಆಫ್ ಅಂಡರ್‌ಸ್ಟ್ಯಾಂಡಿಂಗ್ (M.O.U.) ಸಹಿ ಮಾಡುವ ಮೂಲಕ ಜಂಟಿ ಅನುದಾನದೊಂದಿಗೆ ಈ ರಸ್ತೆಯನ್ನು ಅಭಿವೃದ್ಧಿಪಡಿಸಬಹುದು ಎಂದು ಅಭಿಪ್ರಾಯಿಸಿದೆ.

3. ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಪಿಡಬ್ಲ್ಯೂಡಿ 195 ಎಫ್‌ಸಿ-1/12 ದಿನಾಂಕ: 03-04-2012 ರಲ್ಲಿ ಲೋಕೋಪಯೋಗಿ ಇಲಾಖೆಯು 2012-13ನೇ ಸಾಲಿನ ಅಪೆಂಡಿಕ್ಸ್-ಇನಲ್ಲಿ ಲೆಕ್ಕಶೀರ್ಷಿಕೆ: 5054-ಓ.ಆರ್.ಎಫ್. ಅಡಿ ಸೂಕ್ತ ಅನುದಾನ ಒದಗಿಸುವ ಷರತ್ತಿಗೊಳಪಟ್ಟು ಸಹಮತಿ ನೀಡಿರುತ್ತದೆ. ಅದರಂತೆ ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಗಿನ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲೋಇ 584 ಸಿಆರ್‌ಎಂ 2011 ದಿನಾಂಕ : 17-05-2012

ಪ್ರಸ್ತಾವನೆಯಲ್ಲಿ ವಿವರಿಸಲಾದ ಸಂದರ್ಭದ ಹಿನ್ನೆಲೆಯಲ್ಲಿ ವಿಜಾಪೂರ ಜಿಲ್ಲೆ ಸಿಂದಗಿ ತಾಲ್ಲೂಕಿನ ಮಾರಟಗಿ ಕ್ರಾಸ್‌ನಿಂದ ಶ್ರೀಕ್ಷೇತ್ರ ಘತ್ತರಗಿ ಭಾಗ್ಯವಂತ ದೇವಸ್ಥಾನಕ್ಕೆ (ಕಿ.ಮೀ. 0.00 ಯಿಂದ ಕಿ.ಮೀ. 9.5) ಹೋಗುವ ರಸ್ತೆಯನ್ನು ರೂ. 900 ಲಕ್ಷಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸುವ ಕಾಮಗಾರಿಗೆ ಲೋಕೋಪಯೋಗಿ ಇಲಾಖೆಯಿಂದ ರೂ. 600 ಲಕ್ಷಗಳು ಮತ್ತು ಶ್ರೀ ರೇಣುಕಾ ಶುಗರ್ಸ್ ಲಿಮಿಟೆಡ್ ರವರಿಂದ ರೂ. 300.00 ಲಕ್ಷಗಳ ವಂತಿಗೆಯನ್ನು ಸ್ವೀಕರಿಸಿ, ಮೆಮೊರಂಡಮ್ ಆಫ್ ಅಂಡರ್‌ಸ್ಟ್ಯಾಂಡಿಂಗ್ ಸಹಿ ಮಾಡುವ ಮೂಲಕ ಜಂಟಿಯಾಗಿ ಅಭಿವೃದ್ಧಿಪಡಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎಸ್.ಆರ್. ರೇವಣ್ಣ
ಸರ್ಕಾರದ ಅಧೀನ ಕಾರ್ಯದರ್ಶಿ
ಲೋಕೋಪಯೋಗಿ, ಬಂದರುಗಳು ಹಾಗೂ
ಒಳನಾಡು ಜಲಸಾರಿಗೆ ಇಲಾಖೆ. (ಸಂಪರ್ಕ)

ಪಿಆರ್ ನಂ. 1503

ಶಿಕೌಖ ಸಂಪಾಲಂಚು

ವಿಷಯ : ಶ್ರೀ ಸಿದ್ದಣ್ಣ ಎನ್. ರಾಂಪೂರ, ಇತಿಹಾಸ ಉಪನ್ಯಾಸಕರು, ಬಸವೇಶ್ವರ ಕಲಾ ಕಾಲೇಜು, ಬಾಗಲಕೋಟೆ, ಇವರ ಸೇವಾ ಸಕ್ರಮಾತಿ ಕುರಿತು.

ಓದಲಾಗಿದೆ : 1. ರಾಜ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 19127/2007ಗೆ ಸಂಬಂಧಿಸಿದಂತೆ ದಿನಾಂಕ: 17-06-2011 ರಂದು ನೀಡಿದ ತೀರ್ಪು.

2. ಕಾಲೇಜು ಶಿಕ್ಷಣ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಕಾಶಿಇ/ಸೇಸ/ನೇವಿ/2011-12, ದಿನಾಂಕ: 30-01-2012.

ಪ್ರಸ್ತಾವನೆ :

ಬಾಗಲಕೋಟೆಯ ಬಸವೇಶ್ವರ ಕಲಾ ಕಾಲೇಜಿನಲ್ಲಿ ಇತಿಹಾಸ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಲ್.ಆರ್. ಪಾಟೀಲ್, ಇವರ ನಿವೃತ್ತಿಯಿಂದ ತೆರವಾದ ಅನುದಾನಿತ ಹುದ್ದೆಯ ಎದುರು ಕಾಲೇಜಿನ ಆಡಳಿತ ಮಂಡಳಿಯು ಶ್ರೀ ಸಿದ್ದನ್ನ ಎನ್. ರಾಂಪೂರ, ಇವರನ್ನು ಇತಿಹಾಸ ಉಪನ್ಯಾಸಕರಾಗಿ ಆಯ್ಕೆಮಾಡಿದ್ದು. ಅವರು ದಿನಾಂಕ: 30-07-1994 ರಿಂದ ಕರ್ತವ್ಯ ನಿರ್ವಹಿಸುತ್ತಿದ್ದರು. ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರು ತಾವು ಅನುದಾನಿತ ಹುದ್ದೆಯ ಎದುರು ಸುಮಾರು 14 ವರ್ಷದಿಂದ ಸೇವೆ ಸಲ್ಲಿಸಿದ್ದರೂ. ತಮ್ಮ ಸೇವೆಯನ್ನು ಸಕ್ರಮಾತಿಗೊಳಿಸದ ಪ್ರಯುಕ್ತ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 19127/2007ರನ್ನು ಸಲ್ಲಿಸಿದ್ದರು. ಸದರಿ ಅರ್ಜಿಯನ್ನು ರಾಜ್ಯ ಉಚ್ಚ ನ್ಯಾಯಾಲಯವು ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ತೀರ್ಪಿನ ಅನ್ವಯ ವಿಲೇ ಮಾಡಿ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ಹಾಗೂ ಕರ್ನಾಟಕ ರಾಜ್ಯ ಮತ್ತು ಇತರರು-Vs- ಶ್ರೀ ಎಂ.ಎಲ್. ಕೇಸರಿ ಮತ್ತು ಇತರರ ಪ್ರಕರಣದಲ್ಲಿ ನೀಡಲಾಗಿದ್ದ ತೀರ್ಪನ್ನು ಅರ್ಥೈಸಿರುವ ಹಿನ್ನಲೆಯಲ್ಲಿ ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರ ಪ್ರಕರಣವನ್ನು ಪರಿಗಣಿಸಬೇಕೆಂದು ನಿರ್ದೇಶಿಸಿ ಅದರಂತೆ ಆಯುಕ್ತಾಲಯವು ಸರ್ಕಾರಕ್ಕೆ ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಪತ್ರದಲ್ಲಿ ಸದರಿ ಪ್ರಕರಣದ ವಿವರಗಳನ್ನು ನೀಡುತ್ತಾ ರಾಜ್ಯ ಉಚ್ಚ ನ್ಯಾಯಾಲದ ತೀರ್ಪಿನ ಕುರಿತು ಸರ್ಕಾರದ ಮಾರ್ಗದರ್ಶನ ಕೋರಿರುತ್ತಾರೆ.

ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರ ಸೇವಾ ಸಕ್ರಮಾತಿ ಕುರಿತು ರಾಜ್ಯ ಉಚ್ಚ ನ್ಯಾಯಾಲಯವು ನೀಡಿದ ನಿರ್ದೇಶನದಂತೆ ಪ್ರಕರಣ ಪರಿಶೀಲಿಸಲಾಗಿದೆ. ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರು ದಿನಾಂಕ: 10-04-2006 ರಂದು ಯಾವುದೇ ನ್ಯಾಯಾಲಯದ ಮಧ್ಯಂತರ ತೀರ್ಪು/ಆದೇಶದ ನೆರವಿಲ್ಲದೇ ಸತತವಾಗಿ 10 ವರ್ಷಗಳ ಸೇವೆಯನ್ನು ಸಲ್ಲಿಸಿರುತ್ತಾರೆ. ಹಾಗೂ ಇವರನ್ನು ನಿವೃತ್ತಿಯಿಂದ ತೆರವಾದ ಅನುದಾನಿತ ಹುದ್ದೆಯ ಎದುರು ಆಯ್ಕೆಮಾಡಲಾಗಿದ್ದು ಪ್ರಸ್ತುತ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವುದಲ್ಲದೇ 2008ನೇ ಸಾಲಿನಲ್ಲಿ ಎಂ.ಫಿಲ್ ಪದವಿ ಸಹ ಪಡೆದಿರುತ್ತಾರೆ. ಆದುದರಿಂದ ಸರ್ವೋಚ್ಚ ನ್ಯಾಯಾಲಯವು ತೀರ್ಪಿನಂತೆ ಸದರಿಯವರ ನೇಮಕಾತಿಯು ನಿಯಮಬಾಹಿರಬಾಗಿರದೇ ಕೇವಲ ಅಸಹಜ ನೇಮಕಾತಿಯಾಗಿರುತ್ತದೆ. (irregular appointment) ಪ್ರಸ್ತುತ ಉಪನ್ಯಾಸಕರ ವಿದ್ಯಾರ್ಹತೆಯನ್ನು ಯುಜಿಸಿಯ ಪರಿಷ್ಕರಿಸಿರುವ ಹಿನ್ನೆಲೆಯಲ್ಲಿ ಹಾಗೂ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಹಿನ್ನಲೆಯಲ್ಲಿ ಸದರಿಯವರು ಸಕ್ರಮಾತಿ ಮುಖಾಂತರ ವೇತನಾನುದಾನದ ವ್ಯಾಪ್ತಿಗೆ ಒಳಪಡಿಸಲು ಎಲ್ಲಾ ರೀತಿಯಿಂದ ಅರ್ಹರಾಗಿರುತ್ತಾರೆಂದು ತೀರ್ಮಾನಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಇಡಿ 72 ಯುಪಿಸಿ 2012 ಬೆಂಗಳೂರು, ದಿನಾಂಕ : 22-05-2012

ಬಾಗಲಕೋಟೆಯ ಬಸವೇಶ್ವರ ಕಲಾ ಕಾಲೇಜಿನಲ್ಲಿ ಶ್ರೀ ಎಲ್.ಆರ್. ಪಾಟೀಲ್ ಇತಿಹಾಸ ಉಪನ್ಯಾಸಕರು, ಇವರ ನಿವೃತ್ತಿಯಿಂದ ತೆರವಾದ ಹುದ್ದೆಯ ಎದುರು ಇತಿಹಾಸ ಉಪನ್ಯಾಸಕರಾಗಿ ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ರಾಜ್ಯ ವೇತನ ಶ್ರೇಣಿಯಲ್ಲಿ (22800-43200) ಆರ್ಥಿಕ ಸೌಲಭ್ಯಗಳೊಂದಿಗೆ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಕ್ರಮಾತಿಗೊಳಿಸಿ ವೇತನಾನುದಾನದ ವ್ಯಾಪ್ತಿಗೆ ಒಳಪಡಿಸಲು ಆದೇಶಿಸಿದೆ.

ಷರತ್ತುಗಳು:

1. ಒಂದು ವೇಳೆ ಈ ಆದೇಶದಲ್ಲಿ ವೇತನಾನುದಾನಕ್ಕೆ ಒಳಪಟ್ಟ ಬೋಧಕರುಗಳ ಪೈಕಿ ಯಾವುದೇ ಅನರ್ಹತೆ ಕಂಡು ಬಂದಲ್ಲಿ ಯಾವುದೇ ಮುನ್ಸೂಚನೆಯಿಲ್ಲದೆ, ವೇತನಾನುದಾನವನ್ನು ಹಿಂದಕ್ಕೆ ಪಡೆಯುವ ಷರತ್ತಿಗೊಳಪಟ್ಟಿದೆ.
2. ಶ್ರೀ ಸಿದ್ದಣ್ಣ ಎನ್. ರಾಂಪೂರ, ಇವರು ಯು.ಜಿ.ಸಿ. ನಿಯಮಾವಳಿಗಳಂತೆ ಎನ್.ಇ.ಟಿ./ಎಸ್.ಎಲ್.ಇ.ಟಿ/ಪಿ.ಹೆಚ್.ಡಿ ವಿದ್ಯಾರ್ಹತೆ ಪಡೆಯುವ ದಿನಾಂಕದಿಂದ 2006ರ ಯುಜಿಸಿ ವೇತನ ಶ್ರೇಣಿಗಳಿಗೆ ಅರ್ಹರಾಗಿರುತ್ತಾರೆ.
3. ಈ ನೇಮಕಾತಿಗಳಲ್ಲಿ ಮೀಸಲಾತಿಯಲ್ಲಿ ವ್ಯತ್ಯಾಸವಾಗಿರುವುದು ಕಂಡುಬಂದಲ್ಲಿ ಅಂಥವರ ವೇತನಾನುದಾನವನ್ನು ಸಹ ಹಿಂದಕ್ಕೆ ಪಡೆಯುವ ಷರತ್ತಿಗೊಳಪಟ್ಟಿದೆ.
4. ವೇತನಾನುದಾನದ ವ್ಯಾಪ್ತಿಗೆ ಒಳಪಟ್ಟಂತಹ ಮೇಲ್ಕಂಡ ಉಪನ್ಯಾಸಕರುಗಳ ವೇತನವನ್ನು ಆದೇಶ ಹೊರಡಿಸಿದ ದಿನಾಂಕದಿಂದ ವಿಸ್ತರಿಸಿರುವ ವೇತನ ಶ್ರೇಣಿಯ ಕನಿಷ್ಠ ಮೂಲ ವೇತನದಲ್ಲಿ ನಿಗದಿಪಡಿಸತಕ್ಕದ್ದು ಹಾಗೂ ವೇತನಾನುದಾನದ ವ್ಯಾಪ್ತಿಗೆ ಒಳಪಡಿಸಲಾದ ಪೂರ್ವದಲ್ಲಿ ಸಲ್ಲಿಸಿರುವ ಸೇವೆಯನ್ನು ಯಾವುದೇ ಸೇವಾ ಹಾಗೂ ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸುವಂತಿಲ್ಲ.
5. ವೇತನಾನುದಾನದ ವ್ಯಾಪ್ತಿಗೆ ತರಲಾದ ಉಪನ್ಯಾಸಕರುಗಳ ಕಾರ್ಯಭಾರದಲ್ಲಿ ಕೊರತೆ ಉದ್ಭವಿಸಿದ ಪಕ್ಷದಲ್ಲಿ ಅಂತಹ ಉಪನ್ಯಾಸಕರುಗಳನ್ನು ಕಾರ್ಯಭಾರ ಇರುವಂತಹ ಅನುದಾನಿತ ಕಾಲೇಜು/ಸರ್ಕಾರಿ ಕಾಲೇಜುಗಳ ಕಾರ್ಯಭಾರದ ಎದುರಾಗಿ ನಿಯೋಜನೆ ಮೇಲೆ ಮರು ಹಂಚಿಕೆ ಮಾಡುವ ಷರತ್ತಿಗೊಳಪಟ್ಟಿದೆ.
6. ಅನುದಾನಿತ ಹುದ್ದೆಗಳಿಗೆ ವೇತನಾನುದಾನ ಬಿಡುಗಡೆ ಮಾಡುವ ಮುನ್ನಾ ನಿಯಮಗಳ ಪ್ರಕಾರ ವಯೋಮಿತಿ ವಿದ್ಯಾರ್ಹತೆ ಮತ್ತಿತರ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
7. ಇನ್ನು ಮುಂದೆ ಭವಿಷ್ಯಾನುಸಾರ ಭರ್ತಿ ಮಾಡಬೇಕಾಗಿರುವ ಹುದ್ದೆಗಳಿಗಾಗಿ ಸಕ್ಷಮ ಅಧಿಕಾರಿಯಿಂದ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.
8. ನೇರ ನೇಮಕಾತಿ ಬಡ್ತಿ ಮತ್ತು ವಿದ್ಯಾರ್ಥಿಗಳ ಪ್ರವೇಶದ ವಿಷಯದಲ್ಲಿ ಕಾಲಕಾಲಕ್ಕೆ ಹೊರಡಿಸಿರುವ ಸರ್ಕಾರದ ನಿಯಮಗಳು/ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
9. ಸದರಿ ಕಾಲೇಜಿನಲ್ಲಿ ಇನ್ನು ಮುಂದೆ ನೌಕರರ ರಾಜೀನಾಮೆ, ನಿವೃತ್ತಿ ಮತ್ತು ನಿಧನದಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬುವಾಗ ಸರ್ಕಾರದ ಪೂರ್ವಾನುಮತಿ ಪಡೆಯುವುದು ಮತ್ತು ಸರ್ಕಾರದ ಮೀಸಲಾತಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಬಿ. ಮನೋಹರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿಆರ್ ನಂ. 1504 ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ ಚಿತ್ತಾಪುರ ತಾಲ್ಲೂಕಿನ ಗೋಳಾ(ಕೆ) ಇಂಗಳಗಿ ಗ್ರಾಮದ ಮಧ್ಯೆ ಕಾಗಿಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್ ಅನುಮೋದಿಸುವ ಬಗ್ಗೆ.

ಓದಲಾಗಿದೆ : **1.** ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ಬಿಜೆಪಿ/ಪಿಬಿ-14/2012-13/2226, ದಿನಾಂಕ : 16-04-2012.

2. ಸರ್ಕಾರದ ಆದೇಶ ಸಂಖ್ಯೆ : ಸನೀಇ 96 ಮಸಾವಿ 2011(1) (ತಾಂತ್ರಿಕ) ದಿನಾಂಕ : 20-10-2011.

ಪ್ರಸ್ತಾವನೆ :

ಗುಲ್ಬರ್ಗಾ ಜಿಲ್ಲೆ ಚಿತ್ತಾಪುರ ತಾಲ್ಲೂಕಿನ ಗೋಳಾ(ಕೆ) ಇಂಗಳಗಿ ಗ್ರಾಮದ ಮಧ್ಯೆ ಕಾಗಿಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯು ಭಾರತ ಸರ್ಕಾರದ ಎ.ಐ.ಬಿ.ಪಿ. ಕಾರ್ಯಕ್ರಮದಡಿ ಅನುಮೋದನೆಗೊಂಡಿರುತ್ತದೆ. ಈ ಕಾಮಗಾರಿಯ ಅಂದಾಜು ಪಟ್ಟಿಗೆ ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಗುಲ್ಬರ್ಗಾ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	06-01-2012
ಜಿಲ್ಲಾ ಟೆಂಡರ್ ಬುಲೆಟಿನ್	07-01-2012
ಕನ್ನಡ ಪ್ರಭ ದಿನ ಪತ್ರಿಕೆ	09-01-2012

ಇ-ಪ್ರೊಕ್ಯೂರ್‌ಮೆಂಟ್ ಮೂಲಕ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಆರು ಜನ ಗುತ್ತಿಗೆದಾರರು ಭಾಗವಹಿಸಿದ್ದು ಈ ಪೈಕಿ ಇಬ್ಬರು ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿರುತ್ತಾರೆ. ಇವರ ಆರ್ಥಿಕ ಬಿಡ್‌ಅನ್ನು ದಿನಾಂಕ : 21-03-2012 ರಂದು ತೆರೆದು ಪರಿಶೀಲಿಸಲಾಗಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 13,97,40,432/-
ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 14,12,37,071/-
ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ / ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮತ್ತ	ಮಂಜೂರಾದ ಅಂದಾಜಿನ ದರಗಳ ಹಾಗೂ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
ಮೆ॥ ಅಮೃತಾ ಕನ್‌ಸ್ಟ್ರಕ್ಷನ್ಸ್ ಪ್ರೈ ಲಿ., ಒಂದನೇ ದರ್ಜೆ ಗುತ್ತಿಗೆದಾರರು	12,82,36,873/-	8.23 ಕಡಿಮೆ	9.2045 ಕಡಿಮೆ
ಶ್ರೀ ಸೋಮಶೇಖರ ವೆಂಕಪ್ಪಾ ಬಂಡಿ, ಒಂದನೇ ದರ್ಜೆ ಗುತ್ತಿಗೆದಾರರು	12,96,58,288/-	7.215 ಕಡಿಮೆ	8.198 ಕಡಿಮೆ

ಮೇಲ್ಕಂಡಂತೆ ಮೆ॥ ಅಮೃತಾ ಕನ್‌ಸ್ಟ್ರಕ್ಷನ್ಸ್ ಪ್ರೈ ಲಿ., ಒಂದನೇ ದರ್ಜೆ ಗುತ್ತಿಗೆದಾರರು, ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರ್ ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ. 9.2045 ರಷ್ಟು ಕಡಿಮೆಯಾಗಿದ್ದು, ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 14,12,37,071/-ಗಳ ಮೇಲೆ ಶೇ. 9.2045 ರಷ್ಟು ಕಡಿಮೆ ದರದಲ್ಲಿ ಅಂದರೆ ರೂ. 12,82,36,873/-ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 64 ಅಪಿಬಂ (ತಾಂತ್ರಿಕ) 2012, ಬೆಂಗಳೂರು, ದಿನಾಂಕ : 09 ನೇ ಮೇ 2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗುಲ್ಬರ್ಗಾ ಜಿಲ್ಲೆ ಚಿತ್ತಾಪುರ ತಾಲ್ಲೂಕಿನ ಗೋಳಾ(ಕೆ) ಇಂಗಳಗಿ ಗ್ರಾಮದ ಮಧ್ಯೆ ಕಾಗಿಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಡಲಾದ ಮೊತ್ತ ರೂ. 14,12,37,071/-ಗಳ ಮೇಲೆ ಶೇ. 9.2045 ರಷ್ಟು ಕಡಿಮೆ ದರದಲ್ಲಿ ಅಂದರೆ ರೂ. 12,82,36,873/-ಗಳಿಗೆ (ರೂ. ಹನ್ನೆರಡು ಕೋಟಿ ಎಂಭತ್ತೆರಡು ಲಕ್ಷ ಮೂವತ್ತಾರು ಸಾವಿರದ ಎಂಟುನೂರ ಎಪ್ಪತ್ತಮೂರು ಮಾತ್ರ) ಗಳಿಗೆ ಮೆ॥ ಅಮೃತಾ ಕನ್‌ಸ್ಟ್ರಕ್ಷನ್ಸ್ ಪ್ರೈ ಲಿ., ಒಂದನೇ ದರ್ಜೆ ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆ ಆದೇಶ ಸಂಖ್ಯೆ : ಎಫ್ ಡಿ 1 ಟಿಎಫ್ ಪಿ 2002, ದಿನಾಂಕ : 20-01-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1515

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕಿನ ಚೊಂಡಿ ಗ್ರಾಮದ ಸೋಮಪ್ಪ ಮರಿಯಪ್ಪ ಚಲವಾದಿ ಹಾಗೂ ಇತರರ ಜಮೀನುಗಳಿಗೆ ಬೋರ್‌ವೆಲ್ ಮೂಲಕ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯ ಟೆಂಡರ್ ಅನುಮೋದಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ಬಿಜೆಪಿ/ಪಿಬಿ-9/ಚೊಂಡಿ ಏನೀಯೋ/2012-13/2140, ದಿನಾಂಕ : 11-04-2012.

ಪ್ರಸ್ತಾವನೆ :

ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕಿನ ಚೊಂಡಿ ಗ್ರಾಮದ ಸೋಮಪ್ಪ ಮರಿಯಪ್ಪ ಚಲವಾದಿ ಹಾಗೂ ಇತರರ ಜಮೀನುಗಳಿಗೆ ಬೋರ್‌ವೆಲ್ ಮೂಲಕ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯು 2011-12 ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಅನುಮೋದನೆಗೊಂಡಿರುತ್ತದೆ. ಈ ಕಾಮಗಾರಿಯ ಅಂದಾಜು ಪಟ್ಟಿಗೆ ಕಾರ್ಯಪಾಲಕ ಇಂಜಿನಿಯರ್ ಸಣ್ಣ ನೀರಾವರಿ ವಿಭಾಗ, ಬಿಜಾಪುರರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	30–01–2012
ಸಂಯುಕ್ತ ಕರ್ನಾಟಕ ದಿನ ಪತ್ರಿಕೆ	28–01–2012

ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರನ್ನು ತೆರೆದು ಪರಿಶೀಲಿಸಲಾಗಿ ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು ಇವರು ಅರ್ಹತೆ ಹೊಂದಿರುತ್ತಾರೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ		ರೂ. 4,48,279/–
ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ / ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಹಾಗೂ ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
ಐ.ಎಸ್. ಹುಲಸೂರ, ಗುತ್ತಿಗೆದಾರರು	5,00,000/–	11.537 ಹೆಚ್ಚು

ಮೇಲ್ಕಂಡಂತೆ ಐ.ಎಸ್. ಹುಲಸೂರ, ಒಂದನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಟರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ. 11.537 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 4,48,279/–ಗಳ ಮೇಲೆ ಶೇ. 11 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 4,97,590/–ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 36 ಏನೀಯೋ (ತಾಂತ್ರಿಕ) 2012, ಬೆಂಗಳೂರು, ದಿನಾಂಕ : 09 ಮೇ 2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕಿನ ಚೊಂಡಿ ಗ್ರಾಮದ ಸೋಮಪ್ಪ ಮರಿಯಪ್ಪ ಚಲವಾದಿ ಹಾಗೂ ಇತರರ ಜಮೀನುಗಳಿಗೆ ಬೋರ್ ವೆಲ್ ಮೂಲಕ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಡಲಾದ ಮೊತ್ತ ರೂ. 4,48,279/– ಗಳ ಮೇಲೆ ಶೇ. 11.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 4,97,590/–ಗಳಿಗೆ (ರೂ. ನಾಲ್ಕು ಲಕ್ಷ ತೊಂಭತ್ತೇಳು ಸಾವಿರದ ಐದುನೂರ ತೊಂಭತ್ತು ಮಾತ್ರ) ಗಳಿಗೆ ಶ್ರೀ ಐ.ಎಸ್. ಹುಲಸೂರ, ಒಂದನೇ ದರ್ಜೆ ಗುತ್ತಿಗೆದಾರರು ರವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1516

ರುದ್ರಮೂರ್ತಿ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಕಂದಾಯ ಸಚಿವಾಲಯ

ವಿಷಯ : ಸರ್ವಜ್ಞ ಪ್ರಾಧಿಕಾರ ರಚನೆ ಮಾಡುವ ಬಗ್ಗೆ.

ಪ್ರಸ್ತಾವನೆ :

ಸರ್ವಜ್ಞ ಮಹಾಕವಿಯಾಗಿದ್ದು, ಕನ್ನಡ ವಚನ ಸಾಹಿತ್ಯದ ತ್ರಿಪದಿಯಲ್ಲಿ ಮೇರು ಕವಿಯಾಗಿರುತ್ತಾರೆ. ಸಾವಿರಾರು ತ್ರಿಪದಿಗಳು ಸರ್ವಜ್ಞನ ಹೆಸರಿನಲ್ಲಿ ಪ್ರಚಲಿತವಾಗಿವೆ. ಸರ್ವಜ್ಞನ ತ್ರಿಪದಿಗಳು ತಮ್ಮ ಸರಳತೆ ಮತ್ತು ಪ್ರಾಸಬದ್ಧತೆಯಿಂದ ಮತ್ತು ವಿಷಯಗಳ ಗಹನತೆಯಿಂದ ಜನಪ್ರಿಯವಾಗಿವೆ. ಇವರು ರಚಿಸಿದ ಮೂರು ಸಾಲಿನ ತ್ರಿಪದಿಗಳು ಮಾನವ ಜೀವನಕ್ಕೆ ಸರ್ವಕಾಲಕ್ಕು ಅನ್ವಯಿಸುವಂತೆ ಇವೆ. ಸರ್ವಜ್ಞ ಕವಿಯು ಕನ್ನಡ ಸಾಹಿತ್ಯ ಲೋಕಕ್ಕೆ ಅವರದೇ ಆದ ವಿಶಿಷ್ಟವಾದ ಕಾಣಿಕೆಯನ್ನು ನೀಡಿರುತ್ತಾರೆ.

ಸರ್ವಜ್ಞ ಕವಿಯು 16ನೇ ಶತಮಾನಕ್ಕೆ ಸೇರಿರುತ್ತಾರೆ. ಹಿರೇಕೆರೂರು ತಾಲ್ಲೂಕಿನ ಅಬಲುರು ಹಾಗೂ ಮಾಸೂರು ಗ್ರಾಮಗಳನ್ನು ಕಾರ್ಯಕ್ಷೇತ್ರವನ್ನಾಗಿಸಿಕೊಂಡು ಜಗತ್ತಿನಾದ್ಯಂತ ಸಂಚರಿಸಿ ತ್ರಿಪದಿಗಳನ್ನು ರಚಿಸಿ ಜಗತ್ ವಿಖ್ಯಾತವಾಗಿರುವರು. ಸರ್ವಜ್ಞನ ತ್ರಿಪದಿಗಳಲ್ಲಿ ಶಸ್ತ್ರ ಚಿಕಿತ್ಸಕನ ದೃಷ್ಟಿ ಇರುತ್ತದೆ. ಶಾಸ್ತ್ರದ ನಿಷ್ಪಕ್ಷತೆಯೂ ಇದೆ. ಕಾವ್ಯದ ಸ್ವಾರಸ್ಯವೂ ಇರುತ್ತದೆ. ಹೀಗಾಗಿ ಸರ್ವಜ್ಞನ ತ್ರಿಪದಿಗಳು ಬಹಳ ಬೇಗ ಜನಪ್ರಿಯವಾಗಿವೆ. ನಿಜವಾದ ಅರ್ಥದಲ್ಲಿ ಜನತೆಯ ಕವಿಯಾದ ಸರ್ವಜ್ಞ ಕನ್ನಡ ಸಾಹಿತ್ಯ ಪರಂಪರೆಯಲ್ಲಿ ತನ್ನ ವಿಶಿಷ್ಟ ವ್ಯಕ್ತಿತ್ವದಿಂದ ಕನ್ನಡ ಜನಮನದಲ್ಲಿ ಶಾಶ್ವತವಾಗಿ ಮನೆ ಮಾಡಿಕೊಂಡಿದ್ದಾರೆ.

ಸರ್ವಜ್ಞ ಪ್ರಾಧಿಕಾರವನ್ನು ಸ್ಥಾಪಿಸಲು ಕರಡು ವಿಧೇಯಕವನ್ನು ಕರ್ನಾಟಕ ವಿಧಾನ ಮಂಡಲದ ಮುಂದೆ ಮಂಡಿಸಿ ಒಪ್ಪಿಗೆ ಪಡೆದು ಕಾಯ್ದೆ ರಚಿಸಬೇಕಾಗಿರುತ್ತದೆ. ಕರಡು ವಿಧೇಯಕನ್ನು ಕರ್ನಾಟಕ ವಿಧಾನ ಮಂಡಲದ ಮುಂದೆ ಮಂಡಿಸಿ ಕಾಯ್ದೆ ರಚಿಸುವುದನ್ನು ಬಾಕಿ ಇಟ್ಟು, ಒಂದು

ಕಾರ್ಯಾದೇಶ ಹೊರಡಿಸುವ ಮೂಲಕ ಸರ್ವಜ್ಞ ಪ್ರಾಧಿಕಾರವನ್ನು ರಚಿಸಲು ಸರ್ಕಾರ ತೀರ್ಮಾನಿಸಿದೆ ಇದರಿಂದ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುಕೂಲವಾಗುವುದು.

ಈ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಪರಿಶೀಲಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಕಂಇ 66 ಆರ್‌ಇಹೆಚ್ 2012, ಬೆಂಗಳೂರು ದಿನಾಂಕ: 28ನೇ ಮೇ 2012

ಸರ್ವಜ್ಞ ಮಹಾಕವಿಯ ವಿಚಾರಧಾರೆಗಳನ್ನು, ಆದರ್ಶಗಳನ್ನು ನಾಡಿನ ಜನತೆಗೆ ಮನವರಿಕೆ ಮಾಡಿಕೊಡಲು ಹಾಗೂ ಪ್ರವಾಸೋದ್ಯಮ ದೃಷ್ಟಿಯಿಂದ ಅಬಲೂರು, ಮಾಸೂರು ಹಾಗೂ ಸರ್ವಜ್ಞ ಕವಿಗೆ ಸಂಬಂಧಿಸಿದ ಇನ್ನಿತರೆ ಸ್ಥಳಗಳನ್ನು ಅಭಿವೃದ್ಧಿಪಡಿಸಲು, ಸರ್ಕಾರವು ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡಂತೆ ಸರ್ವಜ್ಞ ಪ್ರಾಧಿಕಾರವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರಚಿಸಿ ಆದೇಶಿಸಿದೆ.

1	ಮಾನ್ಯ ಮುಖ್ಯಮಂತ್ರಿಗಳು	ಅಧ್ಯಕ್ಷರು
2	ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರು	ಉಪಾಧ್ಯಕ್ಷರು
3	ಕಂದಾಯ ಸಚಿವರು	ಸದಸ್ಯರು
4	ಕನ್ನಡ ಮತ್ತು ಸಂಸ್ಕೃತಿ ಸಚಿವರು	ಸದಸ್ಯರು
5	ಪ್ರವಾಸೋದ್ಯಮ ಸಚಿವರು	ಸದಸ್ಯರು
6	ಲೋಕೋಪಯೋಗಿ ಸಚಿವರು	ಸದಸ್ಯರು
7	ಹಿರೇಕೆರೂರು ತಾಲ್ಲೂಕನ್ನು ಪ್ರತಿನಿಧಿಸುವ ಹಾಗೂ ಅದರ ಎಲ್ಲೆಯೊಳಗೆ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಲೋಕಸಭಾ ಸದಸ್ಯರು ವಿಧಾನಸಭೆ/ವಿಧಾನ ಪರಿಷತ್ ಸದಸ್ಯರು	ಸದಸ್ಯರು
8	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ	ಸದಸ್ಯರು
9	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಣಕಾಸು ಇಲಾಖೆ	ಸದಸ್ಯರು
10	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ	ಸದಸ್ಯರು
11	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ	ಸದಸ್ಯರು
12	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ	ಸದಸ್ಯರು
13	ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ	ಸದಸ್ಯರು
14	ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ	ಸದಸ್ಯರು
15	ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ	ಸದಸ್ಯರು
16	ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಜಿಲ್ಲೆ, ಹಾವೇರಿ	ಸದಸ್ಯರು
17	ಜಂಟಿ ನಿರ್ದೇಶಕರು, ಕರ್ನಾಟಕ ಭೂಸೇನಾ ನಿಗಮ, ಬೆಳಗಾವಿ ಜಿಲ್ಲೆ, ಬೆಳಗಾವಿ	ಸದಸ್ಯರು
18	ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಹಾವೇರಿ ಜಿಲ್ಲೆ, ಹಾವೇರಿ	ಸದಸ್ಯರು
19	ಅಬಲೂರು ಮತ್ತು ಮಾಸೂರು ಗ್ರಾಮ ಪಂಚಾಯತ್, ಅಧ್ಯಕ್ಷರುಗಳು	ಸದಸ್ಯರು
20	ನಿರ್ದೇಶಕರು, ಕರ್ನಾಟಕ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ, ಇಲಾಖೆ	ಸದಸ್ಯರು
21	ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಮೂವರನ್ನು ಮೀರದ ಅಧಿಕಾರೇತರ ಸದಸ್ಯರು	ಸದಸ್ಯರು
22	ಸರ್ಕಾರದಿಂದ ನೇಮಿಸಲ್ಪಡುವ ಸರ್ವಜ್ಞ ಕವಿಯ ತ್ರಿಪದಿ ಸಾಹಿತ್ಯದ ಬಗ್ಗೆ ವಿಶೇಷ ಜ್ಞಾನವನ್ನು ಹೊಂದಿರುವ 5 ಜನ ತಜ್ಞರು	ಸದಸ್ಯರು
23	ಪ್ರಾಧಿಕಾರದ ಆಯುಕ್ತರು	ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1517

ಸಿದ್ಧಲಿಂಗಯ್ಯ

ಸರ್ಕಾರದ ಉಪ ಕಾರ್ಯದರ್ಶಿ

ಕಂದಾಯ ಇಲಾಖೆ (ಪುನರ್ವಸತಿ/ಭೂಮಾಪನ)

ಕಂದಾಯ ಸಚಿವಾಲಯ

ವಿಷಯ : 2006ನೇ ತಂಡದ ತಹಶೀಲ್ದಾರರುಗಳ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ : ಕಂಇ 51 ಎಎಸ್‌ಡಿ 2008, ದಿನಾಂಕ : 23-05-2008.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆರ್ ಡಿ 223 ಎಎಸ್‌ಡಿ 2008, ದಿನಾಂಕ: 11-06-2008.
3. ಸರ್ಕಾರದ ಆದೇಶ ಸಂಖ್ಯೆ : ಕಂಇ 462 ಎಎಸ್‌ಡಿ 2010, ದಿನಾಂಕ : 21-10-2011. 27-01-2011, 02-04-2011, 22-06-2011 ಮತ್ತು 22-10-2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1) ದಿನಾಂಕ : 23-05-2008 ರ ಸರ್ಕಾರಿ ಅಧಿಸೂಚನೆಯಲ್ಲಿ ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು 1997 ರ ಅಡಿಯಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಗೊಂಡ ಒಟ್ಟು 40 ಅಭ್ಯರ್ಥಿಗಳಿಗೆ ಪರಿವೀಕ್ಷಣಾ ತಹಶೀಲ್ದಾರ್ ಗುಂಪು-ಬಿ ಹುದ್ದೆಗೆ ನೇಮಕಾತಿ ಆದೇಶ ನೀಡಲಾಗಿತ್ತು. ಸದರಿ ಅಧಿಸೂಚನೆಯಲ್ಲಿ ಒಟ್ಟು 40

ಪರಿವೀಕ್ಷಣಾ ತಹಶೀಲ್ದಾರರುಗಳನ್ನು 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯ ಮೇಲೆ ಇರುತ್ತಾರೆಂದು ಮತ್ತು ಈ ಅವಧಿಯಲ್ಲಿ ಕನ್ನಡ ಭಾಷಾ ಪರೀಕ್ಷೆ ಮತ್ತು ನಿಗದಿತ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕೆಂದು ತಿಳಿಸಲಾಗಿತ್ತು. ನೇಮಕಗೊಂಡ ಎಲ್ಲಾ 40 ಪರಿವೀಕ್ಷಣಾ ತಹಶೀಲ್ದಾರರುಗಳು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ : (2) ದಿನಾಂಕ : 11–06–2008ರಲ್ಲಿ ಎಲ್ಲಾ ಪರಿವೀಕ್ಷಣಾ ತಹಶೀಲ್ದಾರರುಗಳಿಗೆ ಎರಡು ವರ್ಷಗಳ ತರಬೇತಿಗಾಗಿ ವಿವಿದ ಜಿಲ್ಲೆಗಳಿಗೆ ತೈನಾತಿಸಲಾಗಿತ್ತು. ಆದರೆ, ಇವರುಗಳಲ್ಲಿ ವಿವಿಧ ಕಾರಣಗಳಿಂದ/ಬೇರೆ ಹುದ್ದೆಗೆ ನೇಮಕಗೊಂಡಿದ್ದರಿಂದ ಒಟ್ಟು 5 ಪರಿವೀಕ್ಷಣಾ ತಹಶೀಲ್ದಾರರುಗಳು (ಶ್ರೀ ಶಂಭುಲಿಂಗಪ್ಪ, ಶ್ರೀ ಅಭ್ಯುದಯ ಎ. ಅನಂದ್, ಶ್ರೀ ಎಂ.ಜೆ. ಚೇತನ, ಶ್ರೀ ಪ್ರಸನ್ನಕುಮಾರ್ ಬಿ.ಕೆ. ಮತ್ತು ಶ್ರೀ ಇಸ್ಲಾವುದ್ದೀನ್) ಸೇವೆಯಿಂದ ಬಿಟ್ಟುಹೋಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ : (3) ರ ಆದೇಶಗಳಲ್ಲಿ ಇನ್ನುಳಿದ 35 ಜನ ಪ್ರೊಬೇಷನರಿ ತಹಶೀಲ್ದಾರರುಗಳ ಪೈಕಿ 34 ಜನ ಪ್ರೊಬೇಷನರಿ ತಹಶೀಲ್ದಾರರು ಇಲಾಖಾ ಪರೀಕ್ಷೆ ಪಾಸಾಗಿದ್ದು ಮತ್ತು ಇವರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಬಾಕಿ ಇರಲಿಲ್ಲವಾದ್ದರಿಂದ ಹಾಗೂ ಅವರುಗಳ ಕಾರ್ಯನಿರ್ವಹಣಾ ವರದಿಗಳು ಸಮರ್ಪಕವಾಗಿದ್ದರಿಂದ ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನ್) ನಿಯಮಗಳು 1977ರ ನಿಯಮ 5(1)ರನ್ವಯ ಪ್ರೊಬೇಷನ್ ಅವಧಿಯನ್ನು ತೃಪ್ತಿಕರ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಿ ಆದೇಶಿಸಲಾಗಿರುತ್ತದೆ.

ಉಳಿದ ಪ್ರಬೇಷನರಿ ತಹಶೀಲ್ದಾರರಾದ ಶ್ರೀಮತಿ ಶೈಲಜ ಸಿ.ಎಸ್ ಅವರು ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದೇ ಇದ್ದುದರಿಂದ ವೈದ್ಯಕೀಯ ಹಾಗೂ ಅನಿವಾರ್ಯ ಕಾರಣಗಳಿಂದ Extrodinary ರಜೆಯನ್ನು ಪಡೆದಿದ್ದು ಅವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಾವಳಿ 1977 ರ ನಿಯಮ 4 ರನ್ವಯ ಅವರ ಪರಿವೀಕ್ಷಣಾ ಅವಧಿಯನ್ನು 2 ವರ್ಷಗಳ ಕಾಲ ವಿಸ್ತರಿಸಿ ಅವರ ಪರಿವೀಕ್ಷಣಾ ಅವಧಿಯಲ್ಲಿನ ಕಾರ್ಯ ನಿರ್ವಹಣಾ ವರದಿಗಳು ತೃಪ್ತಿಕರವಾಗಿರುವುದರಿಂದ ಮತ್ತು ನಿಗಧಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಪಾಸಾಗಿರುವ ದೃಢೀಕೃತ ಸರ್ಟಿಫಿಕೇಟ್ ತರಬೇತಿ ತೃಪ್ತಿಕರವಾಗಿರುವ ಬಗ್ಗೆ ಮೇಲಾಧಿಕಾರಿಗಳು ಶಿಫಾರಸು ಮಾಡಿರುವ ವಿವರ ಮತ್ತು ಪ್ರೊಬೇಷನ್ ಅವಧಿಯಲ್ಲಿ ಯಾವುದೇ ಇಲಾಖಾ ವಿಚಾರಣೆ ಬಾಕಿ ಇಲ್ಲದೇ ಇರುವುದರಿಂದ ಶ್ರೀಮತಿ ಶೈಲಜಾ ಸಿ.ಎಸ್. ತಹಶೀಲ್ದಾರ್ ಅವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನ್) ನಿಯಮಗಳು 1977ರ ನಿಯಮ 4 ರನ್ವಯ ಪರಿವೀಕ್ಷಣಾ ಅವಧಿಯನ್ನು 2 ವರ್ಷಗಳ ಕಾಲ ವಿಸ್ತರಿಸಲು ಹಾಗೂ ಅದೇ ನಿಯಮಗಳ ನಿಯಮ 5(1)ರನ್ವಯ ಪ್ರಬೇಷನ್ ಅವಧಿಯನ್ನು ತೃಪ್ತಿಕರ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಲು ತೀರ್ಮಾನಿಸಿರುವುದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 462 ಎಎಸ್‌ಡಿ 2010, ಬೆಂಗಳೂರು, ದಿನಾಂಕ: 23ನೇ ಮೇ 2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಶ್ರೀಮತಿ ಶೈಲಜಾ ಎಸ್. ತಹಶೀಲ್ದಾರ್ ಅವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನ್) ನಿಯಮಗಳು 1977ರ ನಿಯಮ 4 ರನ್ವಯ ಪರಿವೀಕ್ಷಣಾ ಅವಧಿಯನ್ನು 2 ವರ್ಷಗಳ ಕಾಲ ವಿಸ್ತರಿಸಲು ಹಾಗೂ ಅದೇ ನಿಯಮಗಳ ನಿಯಮ 5(1)ರನ್ವಯ ಪ್ರೊಬೇಷನ್ ಅವಧಿಯನ್ನು ತೃಪ್ತಿಕರ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುತ್ತಾರೆಂದು ಘೋಷಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1518

ಬಿ.ವಿ. ರಾಮಲಿಂಗಯ್ಯ

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಸೇವೆಗಳು–3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಅಧಿಕೃತ ಜ್ಞಾಪನ

ಸಂಖ್ಯೆ : ಸಿಆಸುಇ 116 ಇಕಾಅ 2012, ದಿನಾಂಕ : 26–05–2012

ವಿಷಯ : ಸಕಾಲ ಮಂಡಳಿಯ ಆಡಳಿತಾಧಿಕಾರಿ ಹುದ್ದೆಗೆ ನೇಮಕಗೊಂಡಿರುವ ಶ್ರೀ ಬಿ.ಎನ್. ವರಪ್ರಸಾದ ರೆಡ್ಡಿ ಇವರಿಗೆ ಕಾರ್ಯ ಹಂಚಿಕೆ ಮಾಡುವ ಬಗ್ಗೆ.

ಉಲ್ಲೇಖ : ಕಂದಾಯ ಇಲಾಖೆಯ ಅಧಿಸೂಚನೆ ಸಂಖ್ಯೆ : ಆರ್‌ಡಿ 30 ಎಟಿಎಸ್ 2012, ದಿನಾಂಕ : 12–04–2012.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಅಧಿಸೂಚನೆಯಲ್ಲಿ ಶ್ರೀ ಬಿ.ಎನ್. ವರಪ್ರಸಾದ ರೆಡ್ಡಿ, ತಹಶೀಲ್ದಾರರು, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಸಿಆಸುಇ (ಆಸು) ವಿಭಾಗದಿಂದ ರಚಿತವಾಗಿರುವ ಸಕಾಲ ಮಂಡಳಿಗೆ ಆಡಳಿತಾಧಿಕಾರಿ ಹುದ್ದೆಗೆ ನೇಮಿಸಿದ್ದು, ಅದರಂತೆ, ಆಡಳಿತಾಧಿಕಾರಿ ಹುದ್ದೆಗೆ ದಿನಾಂಕ : 07–05–2012 ರಂದು ಕಾರ್ಯವರದಿ ಮಾಡಿಕೊಂಡಿರುವರು.

ಸಕಾಲ ಮಂಡಳಿಯಲ್ಲಿನ ಆಡಳಿತಾಧಿಕಾರಿ ಹುದ್ದೆಗೆ ನೇಮಕವಾಗಿರುವ ಶ್ರೀ ಬಿ.ಎನ್. ವರಪ್ರಸಾದ ರೆಡ್ಡಿರವರಿಗೆ ಈ ಕೆಳಕಂಡಂತೆ ಕಾರ್ಯ ಹಂಚಿಕೆ ಮಾಡಿದೆ.

ಸಕಾಲ ಮಂಡಳಿಯ ದೈನಂದಿನ ಆಡಳಿತಕ್ಕೆ ಸಂಬಂಧಿಸಿದ ಕೆಲಸ ಕಾರ್ಯಗಳು, ಮಂಡಳಿಯ ಲೆಕ್ಕಪತ್ರಗಳ ನಿರ್ವಹಣೆ, ನಿರ್ವಹಣಾ ಸಮಾಲೋಚಕರು/ಮಾಹಿತಿ ತಂತ್ರಜ್ಞಾನ ಸಮಾಲೋಚಕರು, ಕಾಲ್‌ಸೆಂಟರ್ ಉದ್ಯೋಗಿಗಳ ವೇತನ ಬಿಲ್ ತಯಾರಿಕೆ/ಡಾಟಾ ಎಂಟ್ರಿ ಆಪರೇಟರ್‌ಗಳ ವೇತನ ಪಾವತಿ, ಅಧಿಕಾರಿಗಳಿಗೆ/ಸಿಬ್ಬಂದಿಗೆ ವೇತನ ಮತ್ತು ಇನ್ನಿತರ ಪ್ರಯಾಣ ಭತ್ಯೆ ಪಾವತಿಸುವಿಕೆ, ಸಕಾಲ ಅಧಿನಿಯಮದ ಅನುಷ್ಠಾನದ ಮೇಲ್ವಿಚಾರಣೆ, ಸಭೆಗಳಿಗೆ ಏರ್ಪಾಡು ಮಾಡುವುದು, ಕಾರ್ಯಸೂಚಿ ತಯಾರಿಕೆ/ನಡವಳಿ ತಯಾರಿಕೆ ಹೊರಡಿಸುವುದು. ಇತರ ಇಲಾಖೆಗಳೊಂದಿಗೆ ಸಮನ್ವಯತೆ ಕಾಪಾಡಿಕೊಳ್ಳುವುದು. ಸಹಾಯಕರು/ಸಿಬ್ಬಂದಿ ನೇಮಕಾತಿಗೆ ಸಂಬಂಧಿಸಿದ ಆಡಳಿತ/ಲೆಕ್ಕಪತ್ರ ನಿರ್ವಹಣೆ ಸಿಬ್ಬಂದಿಗಳ ರಜೆ ಮಂಜೂರಾತಿ ಹಾಗೂ ಸಕಾಲ ಮಿಷನ್ನಿನ ನಿರ್ದೇಶಕರು/ಅಪರ ನಿರ್ದೇಶಕರು ವಹಿಸುವ ಯಾವುದೇ ಕೆಲಸ ಕಾರ್ಯಗಳನ್ನು ನಿರ್ವಹಿಸುವುದು.

ಸಕಾಲ ಆಡಳಿತಾಧಿಕಾರಿಯವರಿಗೆ ವಹಿಸಿರುವ ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ ಸುಧಾರಣೆ-ತರಬೇತಿ) ಇವರು ಸಹಾಯ ಮಾಡುವುದು.

ಗೀತಾ ಎಲ್
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

ಪಿ.ಆರ್.1562

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ : ದಾವಣಗೆರೆ ಕಂದಾಯ ತಾಲ್ಲೂಕಿಗೆ 2 ನೋಟರಿ ನೇಮಕಾತಿ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ : ಲಾ 170 ಎಲ್‌ಸಿಎಲ್ 2010, ದಿನಾಂಕ : 16-09-2011.
2. ಸರ್ಕಾರದ ಪತ್ರ ಸಂಖ್ಯೆ : ಲಾ 170 ಎಲ್‌ಸಿಎಲ್ 2010, ದಿನಾಂಕ: 14-10-2011.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರ ಪತ್ರ ಸಂಖ್ಯೆ : ಡಿಜಿ/ಡಿವಿಜಿ/10204/2011 ದಿನಾಂಕ : 14-12-2011.
4. ನೋಟರಿಗಳ ತಿದ್ದುಪಡಿ ನಿಯಮಗಳು 2009 ರ ಅಧಿಸೂಚನೆ ಸಂಖ್ಯೆ : ಜಿಎಸ್‌ಆರ್ 114 (ಇ) ದಿನಾಂಕ : 24-02-2009.
5. ಅಧಿಸೂಚನೆ ಸಂಖ್ಯೆ : ಲಾ 61 ಎಲ್‌ಸಿಎಲ್ 2009 ದಿನಾಂಕ : 24-07-2010
6. ಸಂದರ್ಶನಾ ಸೂಚನೆ ಪತ್ರ ಸಂಖ್ಯೆ : ಲಾ 170 ಎಲ್‌ಸಿಎಲ್ 2010 ದಿನಾಂಕ : 20-03-2012.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ : 16-09-2011 ರಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ದಾವಣಗೆರೆ ಜಿಲ್ಲೆಗೆ 2 ನೋಟರಿ ಹುದ್ದೆಗಳನ್ನು ಸೃಜನೆ ಮಾಡಲಾಗಿದ್ದು, ಈ ಹುದ್ದೆಯನ್ನು ಭರ್ತಿ ಮಾಡಲು ನೋಟರಿಗಳ ಅಧಿನಿಯಮ/ನಿಯಮಗಳನ್ವಯ ಅಧಿಸೂಚನೆ ಹೊರಡಿಸುವ ಮೂಲಕ ಸ್ಥಳೀಯರಿಂದ ಅರ್ಜಿಗಳನ್ನು ಆಹ್ವಾನಿಸಿ ನೋಟರಿಗಳ ಅಧಿನಿಯಮ/ನಿಯಮಗಳು ಹಾಗೂ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತು) ನಿಯಮಗಳು 1977ರ ನಿಯಮ 12ರಡಿಯಲ್ಲಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ದಾವಣಗೆರೆ ಇವರನ್ನು ಮೇಲೆ (2) ರಲ್ಲಿ ಓದಲಾದ ದಿನಾಂಕ : 14-10-2011 ರ ಪತ್ರದಲ್ಲಿ ಕೋರಲಾಗಿತ್ತು.

ಅದರಂತೆ ಮೇಲೆ (3) ರಲ್ಲಿ ಓದಲಾದ ದಿನಾಂಕ : 14-12-2011 ರ ಪತ್ರದೊಂದಿಗೆ 20 ಜನರ ಮೆಮೋರಿಯಲ್ಸ್ ಗಳನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಆ ಪ್ರಸ್ತಾವನೆಯನ್ನು ಮೇಲೆ (4) ರಲ್ಲಿ ಓದಲಾದ ನೋಟರಿಗಳ ತಿದ್ದುಪಡಿ ನಿಯಮಗಳು 2009 ರನ್ವಯ ಕರ್ನಾಟಕ ರಾಜ್ಯದಿಂದ ನೋಟರಿಗಳ ನೇಮಕಕ್ಕಾಗಿ ಮೇಲೆ (5) ರಲ್ಲಿ ಓದಲಾದ ದಿನಾಂಕ : 24-07-2010 ರ ಅಧಿಸೂಚನೆಯಲ್ಲಿ ರಚಿಸಲಾಗಿರುವ ಸಂದರ್ಶನ ಮಂಡಳಿಯ ಪರಿಶೀಲನೆಗೆ ಕಳುಹಿಸಿ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನ ಮಂಡಳಿಯ ಮುಂದೆ ಸಂದರ್ಶನಕ್ಕೆ ಹಾಜರಾಗುವಂತೆ ಮೇಲೆ (6) ರಲ್ಲಿ ಓದಲಾದ ದಿನಾಂಕ : 20-03-2012 ರ ಸಂದರ್ಶನ ಸೂಚನಾ ಪತ್ರದಲ್ಲಿ ಸೂಚಿಸಲಾಗಿತ್ತು. ಅದರಂತೆ ಸಂದರ್ಶನ ಮಂಡಳಿಯು ಸಂದರ್ಶನ ನಡೆಸಿ ವರದಿ ಸಲ್ಲಿಸಿದೆ.

ಸಂದರ್ಶನ ಮಂಡಳಿಯ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ : ಲಾ 170 ಎಲ್ ಸಿ ಎಲ್ 2010 ಬೆಂಗಳೂರು, ದಿನಾಂಕ : 26-05-2012

ನೋಟರಿಗಳ ಅಧಿನಿಯಮ, 1952 ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿಗಳ ನಿಯಮಗಳು, 1956 ಹಾಗೂ ನಂತರದ ತಿದ್ದುಪಡಿ ನಿಯಮಗಳನ್ವಯ ಪರಿಶೀಲಿಸಿ ನಿಯಮ 8(1) ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ (1) ಶ್ರೀ ಹಣಗಿ ಅಶೋಕ.ಕೆ. ವಕೀಲರು, S/o ಕರಬಸಪ್ಪ ಹೆಚ್, ಹಣಗಿ, ಡೋರ್ ನಂ. 4000/1, 2ನೇ ಮೈನ್, 12ನೇ ಕ್ರಾಸ್, ವಿನೋಬನಗರ, ದಾವಣಗೆರೆ-577004 ಮತ್ತು (2) ಶ್ರೀ ಕೆ.ಬಿ. ಮಲ್ಲಿಕಾರ್ಜುನಪ್ಪ, ವಕೀಲರು, S/o ಲೇಟ್ ಕೆ. ಬಸಪ್ಪ, ನಂ. 373, ಎಸ್.ಪಿ.ಎಸ್. ನಗರ, 2ನೇ ಸ್ಟೇಜ್, ಸರ್ಕಾರಿ ಪ್ರೌಢ ಶಾಲೆ ಹಿಂಭಾಗ, ದಾವಣಗೆರೆ-577006 ಇವರುಗಳನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ದಾವಣಗೆರೆ ಕಂದಾಯ ತಾಲ್ಲೂಕಿನ ನೋಟರಿಗಳನ್ನಾಗಿ ನೇಮಿಸಿದೆ.

ಸದರಿ ವಕೀಲರು ಲೆಕ್ಕ ಶೀರ್ಷಿಕೆ 0070-ಇತರೆ ಆಡಳಿತಾತ್ಮಕ ಸೇವೆಗಳು-01-ನ್ಯಾಯ ಪರಿಪಾಲನೆ -501-0-ಇತರೆ ಸ್ವೀಕೃತಿಗಳು-06 ಇತರೆ ಬಾಬ್ತುಗಳಿಗೆ (0070-01-501-0-06) ನೋಟರಿ ನಿಯಮಗಳಲ್ಲಿ ನಿಗದಿಪಡಿಸಲಾದ ರೂ. 1000.00 (ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಜಮಾ ಮಾಡಿ ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಯನ್ನು ಹಾಜರುಪಡಿಸಿದ ನಂತರ ಅವರಿಗೆ ವೃತ್ತಿ ಪ್ರಮಾಣ ಪತ್ರ ನೀಡಲಾಗುವುದು.

ವೃತ್ತಿ ಪ್ರಮಾಣ ಪತ್ರ ನೀಡಿದ ನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ, 1952ರ ಕಲಂ 4ನೇ ಪ್ರಕರಣದಡಿ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ರುಕ್ಮಿಣಿದಿವಾಕರ್
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-2)
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಪಿ.ಆರ್.1563

HORTICULTURE SECRETARIAT

Sub : ''Integrated Farming in Coconut for Productivity Improvement Programme'' – Establishment of Neera demonstration unit at Horticulture Farm, Tumbe, Dakshina Kannada District-Release of CDB funds –reg.

Read :
1. CDB Letter No. 1345/2010 dated : 13-3-2012.
2. Government letter No. ತೋಇ/ 100 ತೋಯೋಕಾ 2011 dated 12-04-2012.
3. Director of Horticulture letter No. ತೋಇ/ತೋಬೆ/ಸತೋಅ2/ 03/2011-12/16 dated : 16-04-2012.

Preamble:

Coconut Development Board has released Rs. 6,87,500/- towards the balance amount of the first instalment of financial assistance sanctioned to the Director of Horticulture for demonstration of technology for processing and packaging neera (sweet toddy) in Karnataka vide letter read at (1) above.

2. The Director of Horticulture had been permitted to deposit the same in the Karnataka State Horticulture Development Agency (KSHDA) account of the Deputy Director of Horticulture (Zilla Panchayat), Mangalore vide Government letter read at (2) above.

3. The Director of Horticulture has informed vide letter read at (3) above, that the said amount was not released within March 2012. Further during 2012-13 the two schemes namely. ''Scheme for Integrated Farming in Coconut for Productivity/Improvement in the State'' and ''Coconut Crop Improvement Programme'' have been merged into one scheme that is, ''Integrated Farming in Coconut for Productivity Improvement Programme''. The maintenance of Neera processing unit will be taken up under this scheme now. The Director of Horticulture has requested that it was difficult to utilize the funds released at the end of the financial year and hence, has to be revalidated for the year 2012-13 and released under the ''Integrated Farming in Coconut for Productivity Improvement Programme'' Head of Account 2401-00-108-2-51-100 (Financial Assistance).

4. This has been examined and hence this Order.

Government Order No. HCD 69 HPP 2012 (P-1) Bangalore, Dated: 30th May 2012.

Government is pleased to revalidate and release an amount of Rs. 6,87,500/- (Rupees Six Lakhs Eighty seven Thousand Five Hundred only)during 2012-13 to the Director of Horticulture for the project namely, ''Establishment of Neera demonstration unit at Horticulture Farm, Tumbe, Dakshina Kannada District'' towards Coconut Development Board share under the ''Integrated Farming in Coconut for Productivity Improvement Programme'' Head of Account 2401-00-108-2-51-100 (Financial Assistance).

2. This order is issued with the concurrence of Finance Department vide Note No. ದೆ : 254 ಆಇ 4/2012 dated : 23-05-2012..

By Order and in the name of the Governor of Karnataka,

B.C. Prakash

Under Secretary to Government

Horticulture Department

PR.1564

ಸಹಕಾರ ಸಚಿವಾಲಯ

ವಿಷಯ : ದಿದ್ದಿಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಿದಿಗಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇದರ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 64 ರ ವಿಚಾರಣೆಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ : ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ : ಆರ್‌ಸಿಎಸ್/ಸಿಆರ್‌ಡಿ/ಕೆಎಂಇ–5/123/2011–12, ದಿನಾಂಕ : 18–11–2011 ಮತ್ತು 03–03–2012.

ಪ್ರಸ್ತಾವನೆ :

ದಿದ್ದಿಗಿ ಪ್ರಾಥಮಿಕ ಕೃಷಿ ಷತ್ತಿನ ಸಹಕಾರ ಸಂಘ ನಿ., ದಿದ್ದಿಗಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64 ರ ಅನ್ವಯ ದಿನಾಂಕ : 05–04–2010 ರಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಹರಪನಹಳ್ಳಿ ಇವರು ಆದೇಶ ಹೊರಡಿಸಿದ್ದು, ಸಹಕಾರ ಅಭಿವೃದ್ಧಿ ಅಧಿಕಾರಿಯನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿರುತ್ತಾರೆ. ಅಂದಿನ ಕಾರ್ಯದರ್ಶಿಯಾದ ಶ್ರೀ ಡಿ.ಎಂ. ಮುರುಗೇಂದ್ರಯ್ಯ ಇವರು ಈ ಆದೇಶವನ್ನು ಪ್ರಶ್ನಿಸಿ ಗೌರವ ಉಚ್ಚನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ : 15313/2010 ಅನ್ನು ದಾಖಲಿಸಿದ್ದು, ಉಚ್ಚ ನ್ಯಾಯಾಲಯವು ದಿನಾಂಕ : 06–05–2010 ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ದಿನಾಂಕ : 05–04–2010ರ ಆದೇಶಕ್ಕೆ ತಡೆಯಾಜ್ಞೆ ನೀಡಿದ ನಂತರ ದಿನಾಂಕ : 19–08–2011 ರಂದು ಅಂತಿಮ ಆದೇಶ ಹೊರಡಿಸಿ ರಿಟ್ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಲಾಗಿರುತ್ತದೆ. ಇದರಿಂದಾಗಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64ರ ವಿಚಾರಣೆ ನಡೆಸಲು ಹಿನ್ನಡೆಯುಂಟಾಗಿದ್ದು, ವಿಚಾರಣೆ ಅವಧಿಯನ್ನು ವಿಸ್ತರಿಸಿ ಆದೇಶ ನೀಡುವಂತೆ ಸಹಕಾರ ಸಂಘಗಳ ನಿಬಂಧಕರು ಇವರು ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ದಿದ್ದಿಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಿದ್ದಿಗಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇದರಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಬಗ್ಗೆ ಕರ್ನಾಟಕ ಸಹಕಾರ ಸಂಘಗಳ

ಅಧಿನಿಯಮ 1959ರ ಪ್ರಕರಣ 64ರ ಅಡಿಯಲ್ಲಿ ವಿಚಾರಣೆ ನಡೆಸಲು ನೇಮಿಸಿರುವ ವಿಚಾರಣಾಧಿಕಾರಿಯ ಅವಧಿಯನ್ನು ದಿನಾಂಕ : 05-10-2010 ರಿಂದ ದಿನಾಂಕ : 30-06-2012 ರವರೆಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಒ 212 ಸಿಎಲ್ ಎಂ 2011, ಬೆಂಗಳೂರು ದಿನಾಂಕ: 26ನೇ ಮೇ 2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿದ್ದಿಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಿದ್ದಿಗಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇದರ ಪ್ರಕರಣ 64ರ ವಿಚಾರಣೆಯ ಅವಧಿಯನ್ನು ದಿನಾಂಕ : 05-10-2010 ರಿಂದ ದಿನಾಂಕ : 30-06-2012 ರವರೆಗೆ ವಿಸ್ತರಿಸಲು ಅನುವಾಗುವಂತೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಸದರಿ ಅಧಿನಿಯಮದ ಪ್ರಕರಣ 64(2-ಎ)ಗೆ ಈ ಕೆಳಕಂಡ ಮಾರ್ಪಾಟುಗಳೊಂದಿಗೆ ದಿದ್ದಿಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ದಿದ್ದಿಗಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇದಕ್ಕೆ ಅನ್ವಯವಾಗತಕ್ಕದ್ದೆಂದು ನಿರ್ದೇಶಿಸುತ್ತದೆ, ಎಂದರೆ :-

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 64(2-ಎ) ಗೆ ಮಾರ್ಪಾಡು ಮಾಡಿ "ಆರು ತಿಂಗಳು" ಎಂಬ ಪದಗಳಿಗೆ ಬದಲಾಗಿ "ಇಪ್ಪತ್ತೇಳು ತಿಂಗಳು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಪ್ರಕರಣ 64(2-ಎ) ರ ಉಪಬಂಧಕ್ಕೆ ಮಾಡಿದ ಮಾರ್ಪಾಟು ದಿನಾಂಕ : 30-06-2012 ರ ವರೆಗೆ ಜಾರಿಯಲ್ಲಿರತಕ್ಕದ್ದು. ಈ ಅವಧಿ ಮುಗಿದ ನಂತರ ಈ ಆದೇಶದ ಮಾರ್ಪಾಡಿಗೆ ಮೊದಲು ಜಾರಿಯಲ್ಲಿದ್ದಂತೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64(2-ಎ) ಉಪಬಂಧಗಳು ಪುನಃಜಾರಿಗೆ ಬರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.1565

ಬಿ.ಸಿ. ಸತೀಶ್
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಸಹಕಾರ ಇಲಾಖೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: ಡಾ: ಮನೋಹರ್ ವೈ.ಪತ್ತಾರ್, ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಇವರ ಅನಧಿಕೃತ ಗೈರುಹಾಜರಿಗೆ ಸಂಬಂಧಿಸಿದಂತೆ ಸರ್ಕಾರಿ ಸೇವೆಯಿಂದ ವಜಾಗೊಳಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 683 ಹೆಚ್.ಎಸ್.ಹೆಚ್.2008 ದಿನಾಂಕ: 27-11-2008
2) ಮುಖ್ಯ ಜಾಗೃತ ಅಧಿಕಾರಿಗಳು, ಜಾಗೃತ ಕೋಶ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. ಬೆಂಗಳೂರು ಇವರ ವಿಚಾರಣಾ ವರದಿ ಸಂಖ್ಯೆ: ಮುಜಾಅ/ಜಾಕೋ/02/2011-12, ದಿನಾಂಕ: 19/5/2011
3) ಆಯುಕ್ತರು, ಆಕುಕ ಸೇವೆಗಳು, ಇವರ ಪ್ರಸ್ತಾವನೆ ಸಂಖ್ಯೆ:ಡಿಪಿಜಿ/ಗುವಿ(2) 53/2010-11, ದಿನಾಂಕ:9/4/2012.

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ.(1) ರಲ್ಲಿನ ಸರ್ಕಾರದ ಅಧಿಸೂಚನೆಯಲ್ಲಿ ಡಾ: ಮನೋಹರ್ ವೈ. ಪತ್ತಾರ್ ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಜಿಲ್ಲೆ ಇವರನ್ನು ಜಿಲ್ಲಾ ಆಸ್ಪತ್ರೆ, ರಾಯಚೂರು ಇಲ್ಲಿಂದ ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಇಲ್ಲಿಗೆ ವರ್ಗಾವಣೆ ಮಾಡಲಾಗಿತ್ತು. ಅದರಂತೆ ದಿನಾಂಕ: 18/12/2008ರಂದು ವರ್ಗಾಯಿಸಿದ ಸ್ಥಳದಲ್ಲಿ ಕಾರ್ಯವರದಿಯನ್ನು ಮಾಡಿಕೊಂಡು ದಿ:19/12/2008 ರಿಂದ ಅನಧಿಕೃತ ಗೈರುಹಾಜರಿ ಆಗಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿ ಮುಖ್ಯ ಜಾಗೃತಾಧಿಕಾರಿಗಳು, ಜಾಗೃತಕೋಶ ಆಕುಕ ಸೇವೆಗಳ ನಿರ್ದೇಶನಾಲಯ ಇವರು ಡಾ: ಮನೋಹರ್ ವೈ.ಪತ್ತಾರ್. ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ. ಗುಲ್ಬರ್ಗಾ ಇವರ ಅನಧಿಕೃತ ಗೈರುಹಾಜರಿ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸಿ ವಿಚಾರಣಾ ವರದಿಯನ್ನು ಆಯುಕ್ತರಿಗೆ ಸಲ್ಲಿಸಿದ್ದು, ಸದರಿ ವಿಚಾರಣಾ ವರದಿಯಲ್ಲಿ ಡಾ: ಮನೋಹರ್ ವೈ. ಪತ್ತಾರೆ ಇವರ ಮೇಲಿನ ಅನಧಿಕೃತ ಗೈರುಹಾಜರಿ ಆರೋಪವು ಸಾಬೀತಾಗಿರುತ್ತದೆಂದು ಅಭಿಪ್ರಾಯ ಪಟ್ಟಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ಆಯುಕ್ತರು, ಆಕುಕ ಸೇವೆಗಳು ಬೆಂಗಳೂರು ಇವರು ಆಪಾದಿತ ನೌಕರರಿಗೆ 2ನೇ ಕಾರಣ ಕೇಳುವ ಸೂಚನಾ ಪತ್ರವನ್ನು ನೀಡಿ ಅವರಿಂದ ವಿವರಣೆಯನ್ನು ಕೋರಲಾಗಿ ಡಾ: ಮನೋಹರ್ ವೈ. ಪತ್ತಾರ್, ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಜಿಲ್ಲೆ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ:22/12/2011ರ ಪತ್ರವನ್ನು ಮತ್ತು ವಿಚಾರಣಾಧಿಕಾರಿಯವರ ವಿಚಾರಣಾ ವರದಿಯನ್ನು ಲಗತ್ತಿಸಿ ಸರ್ಕಾರಕ್ಕೆ ಕಳುಹಿಸುತ್ತಾ ಆಪಾದಿತ ಅಧಿಕಾರಿಯವರ ಮೇಲಿನ ಅನಧಿಕೃತ ಗೈರುಹಾಜರಿ ಆರೋಪವು ಸಾಬೀತಾಗಿರುವುದರಿಂದ ಸೇವೆಯಿಂದ ವಜಾಗೊಳಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಡಾ: ಮನೋಹರ್ ವೈ. ಪತ್ತಾರ್ ಇವರು ಜಿಲ್ಲಾ ಆಸ್ಪತ್ರೆ, ರಾಯಚೂರು ನಿಂದ ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಕ್ಕೆ ವರ್ಗಾವಣೆಯಾದಾಗ ಕೌಟುಂಬಿಕ ಸಮಸ್ಯೆಗಳಿಂದಾಗಿ ಕಾರ್ಯನಿರ್ವಹಿಸುವುದು ಕಷ್ಟಸಾಧ್ಯವಾಗುತ್ತೆಂದು ತಿಳಿಸಿ ರಜೆ ಮಂಜೂರಾತಿಗಾಗಿ ಸಲ್ಲಿಸಿದ್ದು, ತದನಂತರ ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾದಲ್ಲಿ ಕಾರ್ಯನಿರ್ವಹಿಸಲು ಸಾಧ್ಯವಾಗದ ಕಾರಣ ರಾಜೀನಾಮೆ

ನೀಡಬೇಕಾದ ಪರಿಸ್ಥಿತಿ ಇದ್ದುದರಿಂದ ದಿ: 16/8/2010 ರಂದು ಹುದ್ದೆಗೆ ರಾಜೀನಾಮೆ ನೀಡುತ್ತೇನೆಂದು ತಿಳಿಸಿರುತ್ತಾರೆ. ಈ ಮಧ್ಯೆ ಸದರಿ ಅಧಿಕಾರಿಯವರು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಸದರಿಯವರು ಏಕಕಾಲದಲ್ಲಿ 2 ಹುದ್ದೆಗಳನ್ನು ಹೊಂದಲು ನಿಯಮಗಳಲ್ಲಿ ಅವಕಾಶ ಇಲ್ಲದೆ ಇರುವುದರಿಂದ ನಿರ್ದೇಶಕರು ರಿಮ್ಸ್ ಇವರಿಗೆ ಸದರಿಯವರ ಸೇವೆಯನ್ನು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕರ್ತವ್ಯದಿಂದ ಮುಕ್ತಗೊಳಿಸಲು ಸೂಚಿಸಿದ್ದರಿಂದ ವೈದ್ಯಕೀಯ ವಿಜ್ಞಾನ ಸಂಸ್ಥೆಯವರು ಆಪಾದಿತ ಅಧಿಕಾರಿಯವರನ್ನು ಕರ್ತವ್ಯದಿಂದ ಪದಮುಕ್ತಗೊಳಿಸಿರುತ್ತಾರೆ.

ಸದರಿ ಪ್ರಕರಣದಲ್ಲಿ ಡಾ: ಮನೋಹರ್ ವೈ. ಪತ್ತಾರ್ ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಇವರ ಮೇಲಿನ ಅನಧಿಕೃತ ಗೈರುಹಾಜರಿ ಆರೋಪವು ಸಾಬೀತಾಗಿರುವುದರಿಂದ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳ ನಿಯಮ 8 (VIII) ರ ಅನ್ವಯ ಸೇವೆಯಿಂದ ವಜಾಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಆಕುಕ 134 ಎಂಎಸ್ಎ 2012 ಬೆಂಗಳೂರು, ದಿನಾಂಕ: 01–06–2012.

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಡಾ:ಮನೋಹರ್ ವೈ.ಪತ್ತಾರ್ ಹಿರಿಯ ತಜ್ಞರು, ಜಿಲ್ಲಾ ಆಸ್ಪತ್ರೆ, ಗುಲ್ಬರ್ಗಾ ಜಿಲ್ಲೆ ಇವರನ್ನು ಅನಧಿಕೃತ ಗೈರುಹಾಜರಿಯ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (VIII) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ವಜಾಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ.ಎಫ್. ಹುಬ್ಬಳ್ಳಿ

ಪಿ.ಆರ್. 1581

ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ತಿದ್ದೋಲೆ

ಸಂಖ್ಯೆ: ಆಕುಕ 20 ಹೆಚ್ಎಸ್ಹೆಚ್ 2012 ಬೆಂಗಳೂರು, ದಿನಾಂಕ: 31.05.2012

ಸರ್ಕಾರದ ಆದೇಶ ಸಂಖ್ಯೆ: ಆಕುಕ 718 ಹೆಚ್ಎಸ್ಹೆಚ್ 2008, ದಿನಾಂಕ: 10.12.2009ರ ಆದೇಶ ಭಾಗದ ಕ್ರಮ ಸಂಖ್ಯೆ(1)ರಲ್ಲಿ "ವೈದ್ಯರು ಗ್ರಾಮೀಣ ಪ್ರದೇಶದ* ಕೇಂದ್ರ ಸ್ಥಾನದಲ್ಲಿ ವಾಸಿಸುವುದು ಕಡ್ಡಾಯವೆಂಬ ಷರತ್ತಿಗೆ ಒಳಪಟ್ಟು" ಎಂಬ ಪದಗಳಿಗೆ ಬದಲಾಗಿ "ಗ್ರಾಮೀಣ ಪ್ರದೇಶದಲ್ಲಿ* ಕಾರ್ಯನಿರ್ವಹಿಸುತ್ತಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳಿಗೆ" ಎಂಬ ಪದಗಳನ್ನು ದಿನಾಂಕ: 10.12.2009ರಿಂದಲೇ ಜಾರಿಗೆ ಬರುವಂತೆ ಸೇರಿಸಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಚಿಕ್ಕೇಗೌಡ

ಪಿ.ಆರ್. 1582

ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು–1)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ: ಶ್ರೀ ಹೆಚ್ ರಾಜಶೇಖರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರ ವಲಯ ಅರಣ್ಯ ಅಧಿಕಾರಿ ತರಬೇತಿ ಅವಧಿಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವ ಬಗ್ಗೆ ಆದೇಶ.

ಓದಲಾಗಿದೆ: ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಬೆಂಗಳೂರು ರವರ ಪತ್ರ ಸಂಖ್ಯೆ: A1.EST.CR–117/2011–12, ದಿನಾಂಕ: 06–02–12 ಮತ್ತು 18–04–12

ಪ್ರಸ್ತಾವನೆ:

ಶ್ರೀ ಹೆಚ್.ರಾಜಶೇಖರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರು ದಿನಾಂಕ:31–07–2012 ರಂದು ವಯೋನಿವೃತ್ತಿ ಹೊಂದಲಿದ್ದು, ಇವರು ಗರಿಷ್ಠ ಪ್ರಮಾಣದ ನಿವೃತ್ತಿ ಸೌಲಭ್ಯಕ್ಕೆ ಅರ್ಹರಾಗಲು, ಇವರು ದಿನಾಂಕ:24–11–1978 ರಿಂದ 15–10–1980 ರವರೆಗೆ State Forests Services College, Coimbatore ನಲ್ಲಿ ಪಡೆದಿರುವ ವಲಯ ಅರಣ್ಯ ಅಧಿಕಾರಿ ತರಬೇತಿ ಅವಧಿಯನ್ನು ನಿವೃತ್ತಿ ಸೌಲಭ್ಯಗಳಿಗಾಗಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಕೋರಲಾಗಿದೆ.

ಪ್ರಸ್ತಾವನೆಯನ್ನು, ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಅಪಜೀ 049 ಅಪಸೇ 2012, ಬೆಂಗಳೂರು, ದಿನಾಂಕ:31–05–2012

ಶ್ರೀ ಹೆಚ್ ರಾಜಶೇಖರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಇವರು ದಿನಾಂಕ: 24–11–1978 ರಿಂದ 15–10–1980 ರವರೆಗೆ State Forests Services College, Coimbatore ನಲ್ಲಿ ಪಡೆದಿರುವ ವಲಯ ಅರಣ್ಯ ಅಧಿಕಾರಿ ತರಬೇತಿ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 246ರ ಪ್ರಕಾರ ನಿವೃತ್ತಿ ಸೌಲಭ್ಯಗಳಿಗಾಗಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 191 ಸೇ–3/2012, ದಿನಾಂಕ: 05–03–2012 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್. ಬಾಲಕೃಷ್ಣಯ್ಯ

ಪಿ.ಆರ್. 1583 ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ವಿಷಯ: ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿನ ಫಲಾನುಭವಿಗಳಿಗೆ ಪಥ್ಯಾಹಾರ ಮೊತ್ತವನ್ನು ಮಾಹೆಯಾನ ರೂ.400/–ಗಳಿಂದ ರೂ.800/–ಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಮಮಇ/145/ಪಿಹೆಚ್‌ಪಿ/2006(2),ದಿನಾಂಕ: 29–7–2006.
2) ಸರ್ಕಾರದ ಆದೇಶ ಸಂಖ್ಯೆ: ಮಮಇ/145/ಪಿಹೆಚ್‌ಪಿ/2006(4), ದಿನಾಂಕ:25–06–2007.
3) ಸರ್ಕಾರದ ಆದೇಶ ಸಂಖ್ಯೆ: ಮಮಇ/109/ಪಿಹೆಚ್‌ಪಿ/2011, ದಿನಾಂಕ:14–12–2010.
4) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಾಸಇ/ಸಿ8/ಉಅಂಮವನಿಬೇಡಿಕೆ/11–12/2892,3333, 4846, ದಿ:8–11–2011,14–12–2011, ಮತ್ತು 20–1–2012.

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ(1)ಮತ್ತು ಉಲ್ಲೇಖ (2)ರ ಸರ್ಕಾರದ ಆದೇಶಗಳಲ್ಲಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯಿಂದ ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳನ್ನು ಕೆಲವು ಷರತ್ತುಗಳಿಗೊಳಪಡಿಸಿ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ನಡೆಸಲು ಮಂಜೂರಾತಿ ನೀಡಲಾಗಿದೆ ಹಾಗೂ ಆಹಾರ ಭತ್ಯೆಯನ್ನು ಮಾಹೆಯಾನ ಪ್ರತಿ ಫಲಾನುಭವಿಗೆ ತಿಂಗಳಿಗೆ ರೂ.400/– ರಂತೆ ನಿಗದಿಪಡಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ರಾಜ್ಯ ಸಹಾಯಧನ ಹೊಸ ಯೋಜನೆಯನ್ನು ಜಾರಿಗೊಳಿಸಲು ಮಂಜೂರಾತಿ ನೀಡಲಾಗಿದ್ದು, ಅದರಲ್ಲಿ ವಸತಿಯುತ ಮಕ್ಕಳ ನಿರ್ವಹಣಾ ವೆಚ್ಚವನ್ನು ಮಾಹೆಯಾನ ರೂ. 600/– ಕ್ಕೆ ನಿಗದಿಪಡಿಸಿ ಆದೇಶಿಸಿದೆ.

ಮೇಲೆ ಉಲ್ಲೇಖ (4)ರಲ್ಲಿ ಓದಲಾದ ಪತ್ರಗಳಲ್ಲಿ, ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರು ಈಗಾಗಲೇ ಕೇಂದ್ರ ಸರ್ಕಾರದಿಂದ ಅನುದಾನ ಪಡೆಯುವ ವಿಶೇಷ ಶಾಲೆಗಳ ಫಲಾನುಭವಿಗಳಿಗೆ ಪಥ್ಯಾಹಾರ ವೆಚ್ಚಕ್ಕಾಗಿ ಮಾಹೆಯಾನ ರೂ.850/– ನೀಡಲಾಗುತ್ತಿದೆ ಎಂದು ತಿಳಿಸುತ್ತಾ, ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ರಾಜ್ಯ ಸಹಾಯಧನದಡಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಸ್ವಯಂಸೇವಾ ಸಂಸ್ಥೆಗಳ ಮುಖಾಂತರ ನಡೆಸುತ್ತಿರುವ ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿನ ಪ್ರತಿ ಫಲಾನುಭವಿಗೆ ಪಥ್ಯಾಹಾರ ವೆಚ್ಚವಾಗಿ ಮಾಹೆಯಾನ ರೂ.400/–ನ್ನು ನೀಡಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಆಹಾರ ಧಾನ್ಯಗಳು, ತರಕಾರಿ, ಇತರೆ ಪದಾರ್ಥಗಳ ದರಗಳು ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿನ ಫಲಾನುಭವಿಗಳಿಗೆ ಪಥ್ಯಾಹಾರ ಮೊತ್ತವನ್ನು ರೂ. 850/–ಕ್ಕೆ ಹೆಚ್ಚಿಸುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಮಮಇ 246 ಪಿಹೆಚ್‌ಪಿ 2011, ಬೆಂಗಳೂರು, ದಿನಾಂಕ: 2–6–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ನಡೆಸುತ್ತಿರುವ ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿನ ಫಲಾನುಭವಿಗಳಿಗೆ 2012–13ನೇ ಸಾಲಿನಿಂದ ಜಾರಿಗೆ ಬರುವಂತೆ ಪಥ್ಯಾಹಾರ ವೆಚ್ಚವನ್ನು ಮಾಹೆಯಾನ ರೂ400/–ರಿಂದ ರೂ.800/–ಕ್ಕೆ ಹೆಚ್ಚಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಇದಕ್ಕಾಗಿ ತಗಲುವ ಹೆಚ್ಚುವರಿ ಮೊತ್ತವನ್ನು 2012–2013ನೇ ಸಾಲಿಗೆ ಲೆಕ್ಕಶೀರ್ಷಿಕೆ 2235–02–101–0–50 ಯೋಜನೇತರ ಉಪಲೆಕ್ಕಶೀರ್ಷಿಕೆ 059ರಡಿ ಒದಗಿಸಲಾಗಿರುವ ಆಯವ್ಯಯದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 164 ವೆಚ್ಚ–3 2012, ದಿನಾಂಕ: 2–5–2012ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಕಮಲಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ–2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಪಿ.ಆರ್. 1584

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನು "ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ" ಎಂದು ಮರುನಾಮಕರಣ ಮಾಡುವ ಬಗ್ಗೆ.

ಓದಲಾಗಿದೆ:
1) ದಿನಾಂಕ: 17–05–2011ರ ಸರ್ಕಾರದ ಆದೇಶ ಸಂಖ್ಯೆ:ಮಮಇ 41 ಪಿಎಚ್‌ಪಿ 2011
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:20–10–2011ರಂದು ನಡೆದ ನೋಡಲ್ ಸಮಿತಿ ಸಭೆಯ ನಡವಳಿಗಳು

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ದಿನಾಂಕ: 17–05–2011ರ ಸರ್ಕಾರಿ ಆದೇಶದಲ್ಲಿ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಇಲಾಖೆಯನ್ನು "ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ" "Department for the Empowerment of Differently Abled and Senior Citizens" ಎಂದು ಮರುನಾಮಕರಣ ಮಾಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 20–10–2011ರಂದು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ನೋಡಲ್ ಸಮಿತಿ ಸಭೆಯಲ್ಲಿ ಸಚಿವಾಲಯದಲ್ಲಿ ನಾಮಾಂಕಿತವಾಗಿರುವ ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಎಂಬ ಹೆಸರನ್ನು "ಮಹಿಳೆಯರ, ಮಕ್ಕಳ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಚಿವಾಲಯ"ಎಂದು ಬದಲಾಯಿಸಲು ತೀರ್ಮಾನಿಸಲಾಗಿರುತ್ತದೆ. ಅದರಂತೆ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಮಮಇ 299 ಪಿಹೆಚ್‌ಪಿ 2011, ಬೆಂಗಳೂರು, ದಿನಾಂಕ: 02–06–2012

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಲಾದ ಹಿನ್ನೆಲೆಯಲ್ಲಿ, ತಕ್ಷಣದಿಂದ ಜಾರಿಗೆ ಬರುವಂತೆ "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ"ಯನ್ನು "ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ" "Department of Women and Child Development and Empowerment of Differently Abled and Senior Citizens" ಎಂದು ಮರುನಾಮಕರಣ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಕಮಲಮ್ಮ
ಸರ್ಕಾರದ ಅಧೀನ ಕಾರ್ಯದರ್ಶಿ–2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಪಿ.ಆರ್. 1585

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ: ಕರ್ನಾಟಕ ರಾಜ್ಯದ 180 ವಕೀಲರ ಸಂಘಗಳಿಗೆ ಜೆರಾಕ್ಸ್ ಯಂತ್ರಗಳನ್ನು ವಿತರಿಸುವ ಸಮಾರಂಭಕ್ಕೆ ತಗಲುವ ವೆಚ್ಚಕ್ಕೆ ಹಣಕಾಸು ಒದಗಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ:ಲಾ 132 ಎಲ್‌ಸಿಎಲ್ 2011 ದಿನಾಂಕ 03–12–2011.
2) ಮಾನ್ಯ ಕಾನೂನು ಸಚಿವರು ರವರ ಪತ್ರದ ದಿನಾಂಕ 20–04–2012.
3) ಸರ್ಕಾರದ ಆದೇಶ ಸಂಖ್ಯೆ:ಲಾ 54 ಎಲ್‌ಎಎಂ 2012, ದಿನಾಂಕ 17–04–2012.

ಪ್ರಸ್ತಾವನೆ:

ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ 180 ವಕೀಲರ ಸಂಘಗಳಿಗೆ ತಲಾ ಒಂದರಂತೆ ಜೆರಾಕ್ಸ್ ಯಂತ್ರಕ್ಕೆ ತಗಲುವ ವೆಚ್ಚವಾಗಿ ರೂ. 91,000.00ಗಳಂತೆ ಖರೀದಿಸಲು ರಾಜ್ಯದ 180 ವಕೀಲರ ಸಂಘಗಳಿಗೆ ಹಂಚಿಕೆ ಮಾಡಲು ಒಟ್ಟು ರೂ. 1,63,80,000.00ಗಳನ್ನು ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಮಾನ್ಯ ಕಾನೂನು ಸಚಿವರು ದಿನಾಂಕ 14–02–2012 ರಂದು ವಕೀಲರ ಸಂಘಗಳಿಗೆ ಜೆರಾಕ್ಸ್‌ಯಂತ್ರವನ್ನು ವಿತರಿಸುವ ಕಾರ್ಯಕ್ರಮವನ್ನು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ವ್ಯವಸ್ಥೆಗೊಳಿಸಿದ ಸಂಬಂಧ ಸುಮಾರು ರೂ.47.000/–ಗಳು ಖರ್ಚಾಗಿದ್ದು ಸಂಬಂಧಿಸಿದ ಬಿಲ್ಲಿನ ಮೊತ್ತವನ್ನು ಅಥೇನಾ ಸಂಸ್ಥೆಯವರಿಗೆ ಪಾವತಿಸಲು ಸೂಚಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ .

ಸರ್ಕಾರದ ಆದೇಶ ಸಂಖ್ಯೆ: ಲಾ 139 ಎಲ್‌ಸಿಎಲ್ 2012, ಬೆಂಗಳೂರು, ದಿನಾಂಕ:30–05–2012

ಕರ್ನಾಟಕ ರಾಜ್ಯದ 100 ವಕೀಲರ ಸಂಘಗಳಿಗೆ ಜೆರಾಕ್ಸ್ ಯಂತ್ರಗಳನ್ನು ವಿತರಿಸುವ ಸಮಾರಂಭಕ್ಕೆ ತಗಲುವ ಮೊತ್ತ ರೂ. 47,000/–ಗಳನ್ನು (ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಕರ್ನಾಟಕ ರಾಜ್ಯ ವಕೀಲರ ಕ್ಷೇಮಾಭಿವೃದ್ಧಿ ನಿಧಿಗೆ ಲೆಕ್ಕ ಶೀರ್ಷಿಕೆ 2014–00–114–0–03–104 (ವಕೀಲರ ಕಲ್ಯಾಣನಿಧಿ) ಯೋಜನೆಯಡಿ ಒದಗಿಸಿರುವ ರೂ. 50.00 ಲಕ್ಷಗಳ ಆಯವ್ಯಯದಲ್ಲಿಯೇ ಭರಿಸಲು ಹಾಗೂ ಈ ಕೆಳಕಂಡ ಷರತ್ತಿಗೊಳಪಟ್ಟು ಅಥೇನಾ ಸಂಸ್ಥೆಯವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಹಣವನ್ನು ವಕೀಲರ ಸಂಘಗಳಿಗೆ ಸಹಾಯಾನುದಾನ ನಿಯಮಾವಳಿಯಲ್ಲಿ ಸ್ಪಷ್ಟಪಡಿಸಿರುವಂತೆ, ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಮೊತ್ತವನ್ನು ಅಡ್ವೋಕೇಟ್ ಜನರಲ್ ಕಛೇರಿರವರು ಪೇಯಿಸ್ ರಶೀದಿ ತಯಾರಿಸಿ ರಾಜ್ಯ ಹುಜೂರ್ ಖಜಾನೆಯಿಂದ ಚೆಕ್ಕನ್ನು ಡ್ರಾ ಮಾಡಿಕೊಂಡು ಅಥೇನಾ ಸಂಸ್ಥೆಗೆ ಪಾವತಿಸುವುದು.

1. ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ನಿಯಮಾನುಸಾರ ಬಳಸತಕ್ಕದ್ದು.
2. ಬಳಕೆ ಪ್ರಮಾಣ ಪತ್ರವನ್ನು ಅಥೇನಾ ಸಂಸ್ಥೆಯು ಅಡ್ವೋಕೇಟ್ ಜನರಲ್ ಕಛೇರಿಗೆ ಅಂಕಿ ಅಂಶಗಳ ಸಹಿತ ಕಾಲಮಿತಿಯೊಳಗೆ ನಿಯಮಾನುಸಾರ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆ.ಇ 67 ವೆಚ್ಚ 10/2012 ದಿನಾಂಕ 29–02–2012ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ರುಕ್ಮಣಿ ದಿವಾಕರ್

ಪಿ.ಆರ್. 1586

ಸರ್ಕಾರದ ಅಧೀನ ಕಾರ್ಯದರ್ಶಿ(ಆಡಳಿತ–2)

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.

ಸಹಕಾರ ಸಚಿವಾಲಯ

ವಿಷಯ : ಶ್ರೀ ವೀರಭದ್ರೇಶ್ವರ ಕೋ–ಆಪರೇಟಿವ್ ಬ್ಯಾಂಕ್ ನಿ., ಚಿಂಚೋಳಿ, ಇದರ ವಿಶೇಷಾಧಿಕಾರಿಯವರ ಅವಧಿ ವಿಸ್ತರಿಸುವ ಬಗ್ಗೆ.

ಓದಲಾಗಿದೆ :
1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಯುಬಿಸಿ–1/172/ಯುಎಂಸಿ/2009–10. ದಿನಾಂಕ: 29–09–2011 ಮತ್ತು 24–02–2012.
2. ಸರ್ಕಾರದ ಇದೇ ಸಮ ಸಂಖ್ಯೆಯ ಪತ್ರಗಳ ದಿನಾಂಕ: 24–11–2011 ಮತ್ತು ದಿನಾಂಕ: 21–12–2011.

ಪ್ರಸ್ತಾವನೆ :

ಶ್ರೀ ವೀರಭದ್ರೇಶ್ವರ ಕೋ–ಆಪರೇಟಿವ್ ಬ್ಯಾಕ್ ನಿ. ಚಿಂಚೋಳಿ ಇದರ ವಿಶೇಷಾಧಿಕಾರಿಯವರ ಅವಧಿಯನ್ನು ದಿನಾಂಕ: 29–01–2011 ರಿಂದ ದಿನಾಂಕ: 28–04–2012 ರವರೆಗೆ ವಿಸ್ತರಿಸಲು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಪ್ರಕರಣ 121ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದನ್ವಯ ಅನುಮತಿ ನೀಡುವಂತೆ ಸಹಕಾರ ಸಂಘಗಳ ನಿಬಂಧಕರು, ಮೇಲೆ ಓದಲಾದ (1)ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಸದರಿ ಬ್ಯಾಂಕಿನ ವಿಶೇಷಾಧಿಕಾರಿಯವರ ಅವಧಿ ವಿಸ್ತರಣೆಯ ಪ್ರಸ್ತಾವವನ್ನು ವಿಳಂಬವಾಗಿ ಸಲ್ಲಿಸಿರುವುದಕ್ಕೆ ಮೇಲೆ ಓದಲಾದ (2)ರ ಪತ್ರಗಳಲ್ಲಿ ಸಹಕಾರ ಸಂಘಗಳ ನಿಬಂಧಕರ ವಿವರಣೆಯನ್ನು ಕೋರಿದ್ದು. ಅದರಂತೆ ಸಹಕಾರ ಸಂಘಗಳ ನಿಬಂಧಕರು ಸಂಬಂಧಪಟ್ಟವರಿಂದ ವಿವರಣೆಯನ್ನು ಪಡೆದು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವವನ್ನು ಕೂಲಂಕಷವಾಗಿ ಪರಿಶಿಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಒ 182 ಸಿಎಲ್‌ಎಂ 2011, ಬೆಂಗಳೂರು, ದಿನಾಂಕ : 25–04–2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ವೀರಭದ್ರೇಶ್ವರ ಕೋ–ಅಪರೇಟಿವ್ ಬ್ಯಾಂಕ್ ನಿ, ಚಿಂಚೋಳಿ, ಇದರ ವಿಶೇಷಾಧಿಕಾರಿಯವರ ಆಡಳಿತಾವಧಿಯನ್ನು ದಿನಾಂಕ:29–01–02011 ರಿಂದ28–04–2012 ರವರೆಗೆ ವಿಸ್ತರಿಸಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 31(1)ರ ಉಪಬಂಧಗಳನ್ನು ಮಾರ್ಪಡಿಸಿ ಅನುಮತಿ ನೀಡಲಾಗಿದೆ.

ಸೂಚನೆ:

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ31 ಉಪ-ಪ್ರಕರಣದ (1)ಕ್ಕೆ ಮಾಡಿದ ಈ ಮಾರ್ಪಾಡು ದಿನಾಂಕ: 28-04-2012 ರವರೆಗೆ ಜಾರಿಯಲ್ಲಿರತಕ್ಕದ್ದು.ಈ ಅವಧಿ ಮುಗಿದ ನಂತರ ಈ ಆದೇಶದ ಮಾರ್ಪಾಡಿಗೆ ಮೊದಲು ಜಾರಿಯಲ್ಲಿದ್ದಂತೆ ಸದರಿ ಪ್ರಕರಣ 31ಉಪ- ಪ್ರಕರಣ (1)ರಲ್ಲಿನ ಉಪಬಂಧಗಳು ಪುನಃ ಜಾರಿಗೆ ಬರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಬಿ.ಸಿ. ಸತೀಶ್

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಉಪ ಕಾರ್ಯದರ್ಶಿ,

ಪಿ.ಆರ್. 1505 ಸಹಕಾರ ಇಲಾಖೆ.

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕು, ಮುಚ್ಚೂರು ಗ್ರಾಮದ ಮೋಗೇರು ಪರಾರಿಎಂಬಲ್ಲಿ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯ ಟೆಂಡರ್ ಅನುಮೋದನೆ ಬಗ್ಗೆ.

ಓದಲಾಗಿದೆ : 1. ಮುಖ್ಯ ಇಂಜಿನಿಯರ್,ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರುರವರ ಪತ್ರದ ಸಂಖ್ಯೆ:ಮುಸದ/ತಾಂಸ-5- ಸ.ಇಂ -11/ದ.ಕ.ಜಿ./ಮಂ.ತಾ/ಮೊಗೇರು ಪರಾರಿ/ಇಪ್ರೊಕ್ಯೂರ್‌ಮೆಂಟ್ /ಟೆಂಡರ್ ಅನುಮೋದನೆ/ 2011/ 1584, ದಿನಾಂಕ 19-04-2012.

ಪ್ರಸ್ತಾವನೆ :

ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕು, ಮುಚ್ಚೂರು ಗ್ರಾಮದ ಮೋಗೇರು ಪರಾರಿ ಎಂಬಲ್ಲಿ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯ ರೂ. 45.00 ಲಕ್ಷಗಳ ಅಂದಾಜು ಪಟ್ಟಿಗೆ ಅಧೀಕ್ಷಕ ಇಂಜಿನಿಯರ್,ಸಣ್ಣ ನೀರಾವರಿ ವೃತ್ತ, ಮೈಸೂರು ಇವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಮಂಗಳೂರು ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ - ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಟೆಂಡರ್ ಪ್ರಕಟಣೆಯನ್ನು ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

	ಮೂಲ ಪ್ರಕಟಣೆ	ಮುಂದೂಡಿಕೆ ಪ್ರಕಟಣೆ
ದಕ್ಷಿಣ ಕನ್ನಡ ಜಿಲ್ಲಾ ಟೆಂಡರ್ ಬುಲೆಟಿನ್	21-11-2011	
ಉದಯವಾಣಿ ಮತ್ತು ಕರಾವಳಿ ಅಲೆ ದಿನಪತ್ರಿಕೆ	10-12-2011	
ಉದಯವಾಣಿದಿನ ಪತ್ರಿಕೆ		28-12-2011

ದಿನಾಂಕ 08-01-2012 ರಂದು ಇ - ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಅನ್ನು ತೆರೆಯಲಾಗಿದ್ದು, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು ಇವರ ಟೆಂಡರ್ ಅರ್ಹತೆ ಹೊಂದಿದ್ದು, ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 44,44,648/-
ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಹಾಗೂ ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಕೆ.ಹಸನಬ್ಬ 1ನೇ ದರ್ಜೆ ಗುತ್ತಿಗೆದಾರರು	50,16,901/-	12.875 ಹೆಚ್ಚು

ಮೇಲ್ಕಂಡಂತೆ ಶ್ರೀ ಕೆ. ಹಸನಬ್ಬ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು, ಇವರ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 12.875 ರಷ್ಟು ಹೆಚ್ಚಾಗಿರುತ್ತದೆ. ಸದರಿ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪರಿಷ್ಕೃತ ದರಗಳ ಮೇಲೆ ಶೇ. 12.00% ಹೆಚ್ಚಿನ ದರಗಳಿಗೆ ಅಂದರೆ ರೂ. 49,78,006/- ಗಳಿಗೆ ಟೆಂಡರನ್ನು ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 62 ಅಪಿಬಂ 2012 (ತಾಂತ್ರಿಕ), ಬೆಂಗಳೂರು, ದಿನಾಂಕ: 09–05–2012.

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕು, ಮುಚ್ಚೂರು ಗ್ರಾಮದ ಮೋಗೇರು ಪರಾರಿ ಎಂಬಲ್ಲಿ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 44,44,648/–ಗಳ ಮೇಲೆ ಶೇ. 12.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 49,78,006/–ಗಳಿಗೆ (ರೂ. ನಲವತ್ತ ಒಂಬತ್ತು ಲಕ್ಷ ಎಪ್ಪತ್ತೆಂಟು ಸಾವಿರದ ಆರು ರೂಪಾಯಿಗಳು ಮಾತ್ರ) ಶ್ರೀ ಕೆ. ಹಸನಬ್ಬ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ: 20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1506 ಜಲ ಸಂಪೂನ್ಮೂಲ ಇಲಾಖೆ (ಸಣ್ಣ ನೀರಾವರಿ),

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಕಸಬಾ–ಜಂಬಗಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್ ಕುರಿತು.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ: ಸನೀಇ 06 ನಯೋಕಾ 2009, ದಿನಾಂಕ: 06–01–2010.

2. ಮುಖ್ಯ ಇಂಜಿನಿಯರ್,ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಕ್ರಮಾಂಕ ಮುಇಂ/ಸನೀ(ಉ)ವಲಯ/ಬಿಜೆಪಿ/ಎಇ–6/2010–11/1557, ದಿನಾಂಕ 19–03–2011.

ಪ್ರಸ್ತಾವನೆ :

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಕಸಬಾ–ಜಂಬಗಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯು ನಬಾರ್ಡ್‌ನ ಆರ.ಐ.ಡಿ.ಎಫ್.–15 ಯೋಜನೆಯಡಿ ಅನುಮೋದನೆ ಗೊಂಡಿರುತ್ತದೆ. ಈ ಕಾಮಗಾರಿಯ ಅಂದಾಜು ಪಟ್ಟಿಗೆ ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಆಡಳಿತಾತ್ಮಕ ಅನುಮೋದನೆ ನೀಡಿದ್ದು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರರವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಮೊದಲ ನಾಲ್ಕು ಬಾರಿ ಮತ್ತು ಆರನೇ ಬಾರಿ ಕರೆದ ಟೆಂಡರ್ ಕರೆಗಳಿಗೆ ಯಾವುದೇ ಪ್ರತಿಕ್ರಿಯೆ ಸ್ವೀಕೃತವಾಗಿರುವುದಿಲ್ಲಾ ಹಾಗೂ 5ನೇ ಬಾರಿ ಕರೆದ ಟೆಂಡರ್ ಕರೆಗೆ ಸ್ವೀಕೃತವಾಗಿದ್ದ ದರಗಳು ಬಹಳ ಹೆಚ್ಚಾಗಿದ್ದರಿಂದ ತಿರಸ್ಕರಿಸಲಾಗಿರುತ್ತದೆ. ನಂತರ ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ 7ನೇ ಬಾರಿಗೆ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	30–01–2012
ವಿಜಯ ಕರ್ನಾಟಕ ದಿನಪತ್ರಿಕೆ	31–01–2012
ಟೈಮ್ಸ್ ಆಫ್ ಇಂಡಿಯಾ ಆಂಗ್ಲ ದಿನಪತ್ರಿಕೆ	31–01–2012

ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರನ್ನು ತೆರದು ಪರಿಶೀಲಿಸಲಾಗಿ ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಮಾತ್ರ ಭಾಗವಹಿಸಿದ್ದು ಇವರು ಅರ್ಹತೆ ಹೊಂದಿರುತ್ತಾರೆ. ಅವರ ಆರ್ಥಿಕ ಬಿಡ್‌ಅನ್ನು ದಿನಾಂಕ 03–03–2012 ರಂದು ತೆರೆಯಲಾಗಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರ್‌ಗೆ ಇಡಲಾದ ಮೊತ್ತ	ರೂ. 1,70,55,882/–
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 2,32,55,170/–

ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೇಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಜಿ. ಮಸಾನಯ್ಯ ಪ್ರಥಮ ದರ್ಜೆ ಗುತ್ತಿಗೆ–ದಾರರು	3,05,96,418/–	79.38 ಹೆಚ್ಚು	31.56 ಹೆಚ್ಚು

ಮೇಲ್ಕಂಡಂತೆ ಶ್ರೀ ಜಿ. ಮಸಾನಯ್ಯ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು, ಇವರ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 31.56 ರಷ್ಟು ಹೆಚ್ಚಾಗಿದ್ದು. ಸದರಿಯವರ ಟೆಂಡರ್‌ನ್ನು ಸಂದಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಈ ಕಾಮಗಾರಿಯನ್ನು ನಿರ್ವಹಿಸಲು ವರ್ಷದಲ್ಲಿ ಬಹಳ ಕಡಿಮೆ ಅವಧಿಯು ಲಭ್ಯವಿರುವುದಾಗಿ ಹಾಗೂ ನಿರ್ಜಲೀಕರಣಕ್ಕಾಗಿ ಬಹಳಷ್ಟು ವೆಚ್ಚವಾಗುವುದೆಂದು ಗುತ್ತಿಗೆದಾರರು ವಿವರಿಸಿ ಕಾಮಗಾರಿಯನ್ನು ಪರಿಷ್ಕರಿಸಿದಂತೆ ಟೆಂಡರಿಟ್ಟ ಮೊತ್ತದ ಮೇಲೆ ಶೇ. 25ರಷ್ಟು ಹೆಚ್ಚಿನ ದರಗಳನ್ನು ನೀಡಿದಲ್ಲಿ ಮಾತ್ರ ನಿರ್ವಹಿಸಲು ಸಿದ್ಧರಿರುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ಇಲಾಖಾ ಅಧಿಕಾರಿಗಳು ಸಹಮತಿ ವ್ಯಕ್ತಪಡಿಸಿದ್ದು, ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 2,32,55,170/–ಗಳ ಮೇಲೆ ಶೇ. 25.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 2,90,68,962/– ಗಳಿಗೆ ಅನುಮೋದಿಸಲು ಪರಿಗಣಿಸಿದೆ.
ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 23 ಏನೀಯೋ (ತಾಂತ್ರಿಕ) 2012, ಬೆಂಗಳೂರು, ದಿನಾಂಕ: 24–05–2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಕಸಬಾ–ಜಂಬಗಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಡಲಾದ ಮೊತ್ತ ರೂ. 2,32,55,170/–ಗಳ ಮೇಲೆ ಶೇ. 25.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 2,90,68,962/–ಗಳಿಗೆ (ರೂ. ಎರಡು ಕೋಟಿ ತೊಂಭತ್ತು ಲಕ್ಷ ಅರವತ್ತೆಂಟು ಸಾವಿರದ ಒಂಭೈ ನೂರ ಅರವತ್ತೆರಡು ರೂಪಾಯಿಗಳು ಮಾತ್ರ) ಶ್ರೀ ಜಿ. ಮಸಾನಯ್ಯ, 1ನೇ ದರ್ಜೆ ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ: 20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1507 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ದಕ್ಷಿಣ ಕನ್ನಡ ಜಿಲ್ಲೆ, ಸುಳ್ಯ ತಾಲ್ಲೂಕು ನೆಲ್ಲೂರು ಕೆಮ್ರಾಜೆ ಗ್ರಾಮದ ಸುಳ್ಳಿ ಗಣಪತಿ ನಾಯಕರ ತೋಟದ ಪಕ್ಕ ಕಿಂಡಿ ಅಣೆಕಟ್ಟು ಕಾಮಗಾರಿಯ ಟೆಂಡರ್ ಅನುಮೋದನೆ ಬಗ್ಗೆ.

ಓದಲಾಗಿದೆ : **1.** ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರುರವರ ಪತ್ರದ ಸಂಖ್ಯೆ: ಮುಸದ/ತಾಂಸ–5 ಸ.ಇಂ.–11/ ದ.ಜಿ/ ಸು.ತಾ/ ಗಣಪತಿ ನಾಯಕರ ತೋಟ/ ಇಪ್ರೊಕ್ಯೂರ್‌ಮೆಂಟ್ / ಟೆಂಡರ್ ಅನುಮೋದನೆ/2011/1566, ದಿನಾಂಕ: 17–04–2012.

ಪ್ರಸ್ತಾವನೆ :

ದಕ್ಷಿಣ ಕನ್ನಡ ಜಿಲ್ಲೆ, ಸುಳ್ಯ ತಾಲ್ಲೂಕು, ನೆಲ್ಲೂರು ಕೆಮ್ರಾಜೆ ಗ್ರಾಮದ ಸುಳ್ಳಿ ಗಣಪತಿ ನಾಯಕರ ತೋಟದ ಪಕ್ಕ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯ ರೂ. 20.00 ಲಕ್ಷಗಳ ಅಂದಾಜು ಪಟ್ಟಿಗೆ ಅಧೀಕ್ಷಕ ಇಂಜಿನಿಯರ್, ಸಣ್ಣ ನೀರಾವರಿ ವೃತ್ತ ಮೈಸೂರು ಇವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಮಂಗಳೂರು ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ 4ನೇ ಬಾರಿಗೆ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲಾ ಟೆಂಡರ್ ಬುಲೆಟಿನ್	05–03–2012
ಹೊಸದಿಗಂತ ಮತ್ತು ಕನ್ನಡ ಪ್ರಭ ದಿನಪತ್ರಿಕೆ	10–03–2012

ದಿನಾಂಕ 24–03–2012ರಂದು ಇಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಅನ್ನು ತೆರೆಯಲಾಗಿದ್ದು, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು ಇವರ ಟೆಂಡರ್ ಅರ್ಹತೆ ಹೊಂದಿದ್ದು, ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 19,21,792/–
ಪ್ರಸಕ್ತ ಸಾಲಿನ ದರಪಟ್ಟಿಯ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 19,32,599/–

ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೇಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ನಾಗರಾಜ ಎಂ. ನಾಯ್ಕ್ 1ನೇ ದರ್ಜೆ ಗುತ್ತಿಗೆದಾರರು	22,90,302/–	19.175 ಹೆಚ್ಚು	18.5089 ಹೆಚ್ಚು

ಮೇಲ್ಕಂಡಂತೆ ಶ್ರೀ ನಾಗರಾಜ ಎಂ. ನಾಯ್ಕ್, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು, ಇವರ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 18.5089 ರಷ್ಟು ಹೆಚ್ಚಾಗಿರುತ್ತದೆ. ಸದರಿ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪರಿಷ್ಕೃತ ದರಗಳ ಮೇಲೆ ಶೇ. 14.50% ಹೆಚ್ಚಿನ ದರಗಳಿಗೆ ಅಂದರೆ ರೂ. 22,12,826/–ಗಳಿಗೆ ಟೆಂಡರನ್ನು ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 61 ಅಪಿಬಿಂ 2012(ತಾಂತ್ರಿಕ) , ಬೆಂಗಳೂರು, ದಿನಾಂಕ: 09–05–2012.

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಸುಳ್ಯ ತಾಲ್ಲೂಕು, ನೆಲ್ಲೂರು ಕೆಮ್ರಾಜೆ ಗ್ರಾಮದ ಸುಳ್ಳಿ ಗಣಪತಿ ನಾಯಕರ ತೋಟದ ಪಕ್ಕ ಕಿಂಡಿ ಅಣೆಕಟ್ಟು ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 19,32,599/– ಗಳ ಮೇಲೆ ಶೇ. 14.50ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 22,12,826/– ಗಳಿಗೆ (ರೂ. ಇಪ್ಪತ್ತೆರಡು ಲಕ್ಷ ಹನ್ನೆರೆಡು ಸಾವಿರದ ಎಂಟು ನೂರ ಇಪ್ಪತ್ತು ಆರು ರೂಪಾಯಿಗಳು ಮಾತ್ರ) ಶ್ರೀ ನಾಗರಾಜ ಎಂ. ನಾಯ್ಕ್ 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ: 20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1508 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ),

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಜಮಖಂಡಿ ಪಟ್ಟಣದ ಹತ್ತಿರ (ಕಟ್ಟಿಕೆರೆ) ಜಿನುಗು ಕೆರೆ ನೀರು ತುಂಬಿಸುವ ಕಾಮಗಾರಿಯ ಟೆಂಡರ್ ಅನುಮೋದಿಸುವ ಬಗ್ಗೆ.

ಓದಲಾಗಿದೆ : **1.** ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರವರ ಪತ್ರದ ಕ್ರಮಾಂಕ: ಮುಇಂ/ಸನೀ(ಉ)ವ/ಬಿಜೆಪಿ/ಎಇ–6/2011–12/2071, ದಿನಾಂಕ : 07–04–2012

2.ಸರ್ಕಾರದ ಆದೇಶ ಸಂಖ್ಯೆ: ಸನೀಇ 03 ನಯೋಕಾ 2011, ದಿನಾಂಕ: 29–12–2011

ಪ್ರಸ್ತಾವನೆ :

ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಜಮಖಂಡಿ ಪಟ್ಟಣದ ಹತ್ತಿರ (ಕಟ್ಟಿಕೆರೆ) ಜಿನುಗು ಕೆರೆಗೆ ನೀರು ತುಂಬಿಸುವ ಕಾಮಗಾರಿಯು ನಾಬಾರ್ಡ್‌ನ ಆರ್.ಐ.ಡಿ.ಎಫ್–17 ರಡಿ ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರೂ. 2704–50 ಲಕ್ಷ ಅಂದಾಜು ಮೊತ್ತದ 38 ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುವ ಕಾಮಗಾರಿಗಳ ಪೈಕಿ ಒಂದಾಗಿರುತ್ತದೆ. ಈ ಕಾಮಗಾರಿಯ ಅಂದಾಜು ಪಟ್ಟಿಗೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	07–01–2012
ವಿಜಯ ಕರ್ನಾಟಕ ದಿನಪತ್ರಿಕೆ	07–01–2012

ಇ–ಪ್ರೊಕ್ಯೂರ್‌ಮೆಂಟ್ ಮೂಲಕ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು ಈ ಪೈಕಿ ಒಬ್ಬರು ಗುತ್ತಿಗೆದಾರರು ಅರ್ಹತೆ ಹೊಂದಿರುತ್ತಾರೆ. ಇವರ ಆರ್ಥಿಕ ಬಿಡ್ ಅನ್ನು ದಿನಾಂಕ: 03–03–2012ರಂದು ತೆರೆದು ಪರಿಶೀಲಿಸಲಾಗಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ				ರೂ. 77,79,852/–
ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ				ರೂ. 1,15,25,664/–
ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೇಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
	ಮೆ. ತಾಪಿ ಪ್ರಿಸ್ಟ್ರೆಸ್ಡ್ ಪ್ರಾ.ಲಿ., 1ನೇ ದರ್ಜೆ ಗುತ್ತಿಗೆದಾರರು	1,33,05,151/–	71.02 ಹೆಚ್ಚು	15.439 ಹೆಚ್ಚು

ಮೇಲ್ಕಂಡಂತೆ ಮೆ. ತಾಪಿ ಪ್ರಿಸ್ಟ್ರೆಸ್ಡ್ ಪ್ರಾ.ಲಿ.,, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು, ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 15.439 ರಷ್ಟು ಹೆಚ್ಚಾಗಿದ್ದು. ಸದರಿಯವರ ಟೆಂಡರನ್ನು ಸಂಧಾನ ಮಾಡಿ ಅಂಗೀಕರಿಸಲು ಮುಖ್ಯ ಇಂಜಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರ ಇವರು ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 1,15,25,664/–ಗಳ ಮೇಲೆ ಶೇ. 13.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,3024,000/–ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 34 ಏನೀಯೋ(ತಾಂತ್ರಿಕ) 2012, ಬೆಂಗಳೂರು, ದಿನಾಂಕ: 09–05–2012.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಜಮಖಂಡಿ ಪಟ್ಟಣದ ಹತ್ತಿರ (ಕಟ್ಟೆಕೆರೆ) ಜಿನಿಗು ಕೆರೆಗೆ ನೀರು ತುಂಬಿಸುವ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಡಲಾದ ಮೊತ್ತ ರೂ. 1,15,25,664/–ಗಳ ಮೇಲೆ ಶೇ. 13.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,30,24,000/– ಗಳಿಗೆ (ಒಂದು ಕೋಟಿ ಮೂವತ್ತು ಲಕ್ಷ ಇಪ್ಪತ್ತನಾಲ್ಕು ಸಾವಿರ ಮಾತ್ರ) ಮೆ. ತಾಪಿ ಪ್ರಿಸ್ಟ್ರೆಸ್ಡ್ ಪ್ರಾ.ಲಿ., 1ನೇ ದರ್ಜೆ ಗುತ್ತಿಗೆದಾರರು ರವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ: 20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1509 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ),